ಸಂಪುಟ: 04 ಸಂಚಿಕೆ: 68 ಪುಟಗಳು: 08 ಬುಧವಾರ 22 ಮೇ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

ಮುಂಜಾನೆ ಮಾತು

ನಿನ್ನನ್ನು ನೋಡಿ ಚಪ್ಪಾಳೆ
ಬಾರಿಸುವ ಹತ್ತು ಬೆರಳು
ಗಳಿಗಿಂತಲೂ ಕಣ್ಣೀರು
ಒರೆಸುವ ಒಂದು ಬೆರಳು
ಮೇಲು

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ತಮಿಳುನಾಡಿಗೆ ಮತ್ತೆ 2.5 ಟಿಎಂಸಿ ನೀರು ಹರಿಸುವಂತೆ ನಿರ್ದೇಶನ

• ಉದಯವಾಹಿನಿ, ಬೆಂಗಳೂರು

ಕಳೆದ ವರ್ಷ ಬಿರು ಬೇಸಿಗೆಯಲ್ಲೂ ಕೂಡ ಕಾವೇರಿ ನದಿಯಿಂದ ತಮಿಳುನಾಡಿಗೆ ಸರ್ಕಾರ ನೀರು ಬಿಟ್ಟಿತ್ತು. ಇದೀಗ ಮತ್ತೆ 2.5 ಟಿಎಂಸಿ ನೀರು ಹರಿಬಿಡುವಂತೆ ಕರ್ನಾಟಕಕ್ಕೆ ಸಿಡಬ್ಲ್ಯೂಎಂಎ ಸೂಚನೆ ನೀಡಿದೆ. ಹೌದು ಕರ್ನಾಟಕಕ್ಕೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಈ ಕುರಿತಂತೆ ಸೂಚನೆ ನೀಡಿದ್ದು, ಮೇ ತಿಂಗಳ ಭಾಗವಾಗಿ 2.5 ಟಿಎಂಸಿ ನೀರು ಹರಿಸಲು ಇದೀಗ ನಿರ್ದೇಶನ ನೀಡಿದೆ ಎಂದು ತಿಳಿದು ಬಂದಿದೆ. ಈ ಹಿಂದೆ ಕಾವೇರಿ ನೀರು ನಿಯಂತ್ರಣ ಸಮಿತಿ ಸಹ 2.5 ಟಿಎಂಸಿ ನೀರು ಹರಿಸುವಂತೆ ಶಿಫಾರಸು ಮಾಡಿತ್ತು. ಇದೀಗ ಇಂದು ಸಭೆ ನಡೆಸಿದ ಸಿಡಬ್ಲ್ಯೂಎಂಎ ನೀರು ಹರಿಸಲು ನಿರ್ದೇಶನ ನೀಡಿದೆ ಎಂದು ತಿಳಿದುಬಂದಿದೆ.

ಡಿಸಿಎಂ ಡಿ.ಕೆ ಶಿವಕುಮಾರ್ ರಕ್ಷಣೆಗೆ ಸಿಎಂ, ಸರ್ಕಾರ ನಿಂತಿದೆ

• ಉದಯವಾಹಿನಿ, ಬೆಂಗಳೂರು

ಡಿಸಿಎಂ ಡಿ.ಕೆ ಶಿವಕುಮಾರ್ ರಕ್ಷಣೆಗೆ ಸಿಎಂ, ಸರ್ಕಾರ ನಿಂತಿದೆ ಎಂದು ಮಾಜಿ ಸಿಎಂ ಕುಮಾರಸ್ವಾಮಿ ಆರೋಪ ಮಾಡಿದ್ದಾರೆ. ಇಂದು ಸುದ್ದಿಗಾರರ ಜೊತೆ ಮಾತನಾಡಿದ ಹೆಚ್ ಡಿ ಕುಮಾರಸ್ವಾಮಿ ಡಿಸಿಎಂ ಡಿಕೆ ಶಿವಕುಮಾರ್ ರಕ್ಷಣೆಗೆ ಸಿಎಂ ಹಾಗೂ ಸರ್ಕಾರ ನಿಂತಿದೆ. ಆಡಿಯೋ ರಿಲೀಸ್ ಆದಾಗಿನಿಂದ ಡಿಕೆಶಿವಕುಮಾರ್ ಮಾತಾಡ್ತಿಲ್ಲ. ಈ ಬಗ್ಗೆ ನಾವು ಕಾನೂನು ವ್ಯಾಪ್ತಿಯಲ್ಲಿ ಹೋರಾಟ ಮಾಡುತ್ತೇವೆ ಎಂದರು. ಯಾರೇ ತಪ್ಪು ಮಾಡಿದ್ರೂ ಶಿಕ್ಷೆ ಆಗಬೇಕು. ತಪ್ಪಿತಸ್ಥರನ್ನು ರಕ್ಷಣೆ ಮಾಡಲು ನಾವು ಹೋಗಲ್ಲ. ಈ ವಿಷಯದಲ್ಲಿ ಸರ್ಕಾರ ಹೇಗೆ ನಡೆದುಕೊಳ್ಳುತ್ತಿದೆ ಎಂಬುದನ್ನು ನಾವು ನೋಡುತ್ತಿದ್ದೇವೆ ಎಂದು ಕುಮಾರಸ್ವಾಮಿ ಹೇಳಿದರು.

ಟಾಯ್ಲೆಟ್‌ನಲ್ಲಿ ವಿಡಿಯೋ ಮಾಡಿ ತಗ್ಲಾಕೊಂಡ ಕಾಂಗ್ರೇಸ್ ಮುಖಂಡ

• ಉದಯವಾಹಿನಿ, ಬೆಂಗಳೂರು

ಯೂತ್ ಕಾಂಗ್ರೇಸ್ ಪ್ರಧಾನ ಕಾರ್ಯದರ್ಶಿ ಆಶಿಕ್ ಬದರುದ್ದೀನ್ ಶೌಚಾಲಯದಲ್ಲಿ ಬಾಲಕಿಯರ ವಿಡಿಯೋ ಮಾಡಿ ಸಿಕ್ಕಿಬಿದ್ದಿದ್ದಾನೆ ಎಂದು ಬಿಜೆಪಿ ಹಿಗ್ಗಾಮುಗ್ಗಾ ವಾಗ್ದಾಳಿ ನಡೆಸಿದೆ. ಕಾಂಗ್ರೇಸ್ ಮುಖಂಡನಿಗೆ ಟಾಯ್ಲೆಟ್ನಲ್ಲಿ ವಿಡಿಯೋ ಮಾಡುವ ಚಟ! ಯೂತ್ ಕಾಂಗ್ರೇಸ್ ಪ್ರಧಾನ ಕಾರ್ಯದರ್ಶಿ ಆಶಿಕ್ ಬದರುದ್ದೀನ್ ಶೌಚಾಲಯದಲ್ಲಿ ಬಾಲಕಿಯರ ವಿಡಿಯೋ ಮಾಡಿ ಸಿಕ್ಕಿಬಿದ್ದಿದ್ದಾನೆ. ಈ ಅಯೋಗ್ಯ ಕಾಮುಕನನ್ನು ಬ್ರದರ್ಸ್ ಎನ್ನುವ ಕಾರಣಕ್ಕೆ ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ಅವರು ಇದೊಂದು ಮಕ್ಕಳಾಟ ಎಂದರೂ ಆಚ್ಚರಿ ಇಲ್ಲ ಅಲ್ಲವೇ ಎಂದು ಬಿಜೆಪಿ ವಾಗ್ದಾಳಿ ನಡೆಸಿದೆ.

ವಿ.ಪ. ಚುನಾವಣೆ: ಬಂಡಾಯ ಅಭ್ಯರ್ಥಿ ರಘುಪತಿ ಗೆದ್ದೇ ಗೆಲ್ತಾರೆ

• ಉದಯವಾಹಿನಿ, ಶಿವಮೊಗ್ಗ

ವಿಧಾನ ಪರಿಷತ್ ಚುನಾವಣೆಗೆ ನೈಋತ್ಯ ಪದವೀಧರ ಕ್ಷೇತ್ರದಿಂದ ಬಿಜೆಪಿ ಬಂಡಾಯ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಮಾಜಿ ಶಾಸಕ ರಘುಪತಿ ಭಟ್ ಗೆದ್ದೇ ಗೆಲ್ತಾರೆ ಎಂದು ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಈಶ್ವರಪ್ಪ, ಬಿಜೆಪಿಯಲ್ಲಿ ಶುದ್ಧೀಕರಣವಾಗಬೇಕು. ಪಕ್ಷದ ವ್ಯವಹಾರದಲ್ಲಿ ಬಿ.ಎಸ್.ಯಡಿಯೂರಪ್ಪ ಕುಟುಂಬ ಏಕಸ್ವಾಮ್ಯ ಸಾಧಿಸುತ್ತಿದೆ. ಮೊದಲಿನಂತೆ ಸಾಮೂಹಿಕ ನಾಯಕತ್ವ ಕಾಣೆಯಾಗಿದೆ ಎಂದರು. ಇಂತಹ ಏಕಸ್ವಾಮ್ಯ ಬದಲಾಗಬೇಕು. ನೈಋತ್ಯ ಪದವೀಧರರ ಕ್ಷೇತ್ರದಿಂದ ರಘುಪತಿ ಭಟ್ ಗೆಲ್ಲುತ್ತಾರೆ. ಹಿಂದೂತ್ವದಲ್ಲಿ ನಂಬಿಕೆಯಿರುವ ಹಾಗೂ ಪ್ರತಿಪಾದಿಸುವ ಜನರ ಮನೆ ಮನೆಗೆ ತೆರಳಿ ರಘುಪತಿ ಭಟ್ ಪರ ಮತ ಯಾಚಿಸುವುದಾಗಿ ಹೇಳಿದರು.

ಬುದ್ಧಪೂರ್ಣಿಮಾ ಹಿನ್ನೆಲೆ ಪ್ರಾಣಿ ವಧೆ, ಮಾಂಸ ಮಾರಾಟ ನಿಷೇಧ

• ಉದಯವಾಹಿನಿ, ಬೆಂಗಳೂರು

ಮೇ.23ರಂದು ಬುದ್ಧಪೂರ್ಣಿಮಾ ಹಿನ್ನಲೆಯಲ್ಲಿ ಬೆಂಗಳೂರಲ್ಲಿ ಪ್ರಾಣಿ ವಧೆ ಮತ್ತು ಮಾಂಸ ಮಾರಾಟವನ್ನು ನಿಷೇಧ ಮಾಡಿ, ಬಿಬಿಎಂಪಿ ಆದೇಶ ಹೊರಡಿಸಿದೆ. ಈ ಕುರಿತಂತೆ ಇಂದು ಜಂಟಿ ನಿರ್ದೇಶಕರು(ಪಶುಪಾಲನೆ) ಅವರು ಆದೇಶ ಹೊರಡಿಸಿದ್ದು, ದಿನಾಂಕ: 23-05-2023 ಗುರುವಾರದಂದು ಬುದ್ಧ ಪೂರ್ಣಿಮಾ ದಿನದ ಪ್ರಯುಕ್ತ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಕಾಸಾಯಿಖಾನೆಯಲ್ಲಿ ಪ್ರಾಣಿವಧೆ ಹಾಗೂ ಮಾರಾಟ ಮಳಿಗೆಗಳಲ್ಲಿ ಮಾಂಸ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ತಿಳಿಸಿದ್ದಾರೆ.

'ಡ್ರಗ್ಸ್ ಮುಕ್ತ ಕರ್ನಾಟಕ'

ಡ್ರಗ್ ಮುಕ್ತ ಮಾಡೋಣ: ಪರಂ ಪಣ

ಮಾದಕವಸ್ತು ಮುಕ್ತ ಕರ್ನಾಟಕದ ಸಂಕಲ್ಪಕ್ಕೆ ರಾಜ್ಯಸರ್ಕಾರ ಬದ್ಧವಾಗಿದೆ. ರೇವು ಪಾರ್ಟಿಯಲ್ಲಿ ಅಕ್ರಮವಾಗಿ ಡ್ರಗ್ಸ್ ಬಳಕೆಯ ಬಗ್ಗೆ ಕಠಿಣ ಕ್ರಮ ತೆಗೆದುಕೊಳ್ಳುವುದರ ಜೊತೆಗೆ ಡ್ರಗ್ ಪೆಡ್ಲರ್‌ಗಳನ್ನು ಮಟ್ಟ ಹಾಕಲಾಗಿದೆ

ಸಂಕಲ್ಪಕ್ಕೆ ಸರ್ಕಾರ ಬದ್ಧ

ಕರ್ನಾಟಕ ರಾಜ್ಯವನ್ನು ಮಾದಕವಸ್ತು ಮುಕ್ತವನ್ನಾಗಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ತಾವು ಈಗಾಗಲೇ ಹೇಳಿಕೆ ನೀಡಿದ್ದೇವೆ. ಅದಕ್ಕೆ ಸಂಬಂಧಪಟ್ಟಂತೆ ಅಧಿಕಾರಿಗಳಿಗೂ ಎಚ್ಚರಿಕೆ ನೀಡಿ ಸೂಕ್ಷ್ಮವಾಗಿ ಕೆಲಸ ನಿರ್ವಹಿಸಲು ತಾಕೀತು ಮಾಡಲಾಗಿದೆ ಎಂದರು. ಹಲವು ಕಡೆ ದಾಳಿ ಮಾಡಿ ಸಾವಿರಾರು ಕೋಟಿ ರೂ.ಗಳ ಮಾದಕವಸ್ತುಗಳನ್ನು ಹಿಡಿದು ಸುಟ್ಟುಹಾಕಲಾಗಿದೆ. ಆದರೂ ಕೂಡ ಇಂತಹ ಕೃತ್ಯಗಳು ಮರುಕಳಿಸುತ್ತಿವೆ. ಪೊಲೀಸರು ಯಾವುದೇ ಕಾರಣಕ್ಕೂ ಈ ವಿಷಯದಲ್ಲಿ ಸಹನೆಯಿಂದಿರುವುದಿಲ್ಲ.

। ಡಾ.ಜಿ.ಪರಮೇಶ್ವರ್ ಗೃಹ ಸಚಿವ

1. ಡ್ರಗ್ಸ್ ಮುಕ್ತ ಕರ್ನಾಟಕ ನಿರ್ಮಿಸುವುದು ನನ್ನ ಗುರಿ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್
2. ಎಲ್ಲೆಲ್ಲಿ ಮಾದಕವಸ್ತು ದೊರೆತಿವೆಯೋ ಅಲ್ಲೆಲ್ಲಾ ಕಾರ್ಯಾಚರಣೆ ನಡೆಸಲಾಗುತ್ತಿದೆ.
3. ಹೊರರಾಜ್ಯದಿಂದ ಕರ್ನಾಟಕ ಪ್ರವೇಶಿಸುವ ಮಾದಕವಸ್ತು ನಿರ್ಬಂಧಿಸಲು ಇಲಾಖೆಯಲ್ಲಿರುವ ಪ್ರತ್ಯೇಕ ಘಟಕ ಕೆಲಸ .
4. ಹಲವು ಕಡೆ ದಾಳಿ ಮಾಡಿ ಸಾವಿರಾರು ಕೋಟಿ ರೂ.ಗಳ ಮಾದಕವಸ್ತುಗಳನ್ನು ಹಿಡಿದು ಸುಟ್ಟುಹಾಕಲಾಗಿದೆ.
5. ರಾಜಧಾನಿಯಲ್ಲಿ ಮಾದಕ ವ್ಯಸ್ಯನ ದಂಧೆಕೋರರ ವಿರುದ್ಧ ಕಠಿಣ ಕ್ರಮಗೊಳ್ಳಲು ಸೂಚಿಸಿದ್ದೇನೆ ಎಂದ ಗೃಹ ಸಚಿವ ಡಾ.ಜಿ ಪರಮೇಶ್ವರ್.

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ರೇವು ಪಾರ್ಟಿಯನ್ನು ಸ್ಥಳೀಯರು ಆಯೋಜಿಸಲಾಗಿದ್ದು, ಹೊರರಾಜ್ಯದವರು ಅದರಲ್ಲಿ ಭಾಗವಹಿಸಿದ್ದು, ಸಿಂಥೆಟಿಕ್ ಡ್ರಗ್ಸ ಬಳಸಿರುವ ಬಗ್ಗೆ ಪೊಲೀಸರು ವರದಿ ಮಾಡಿದ್ದಾರೆ. ಪೊಲೀಸರು ದಾಳಿ ನಡೆಸಿ ಮಾಹಿತಿ ಕಲೆ ಹಾಕಿದ್ದು, ತನಿಖೆ ಮುಂದುವರೆದಿದ್ದು, ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಹೈಡ್ರೋಪೋನಿಕ್ ಗಾಂಜಾವನ್ನು ಬಾಟಲಿಯ ನೀರಿನಲ್ಲಿಟ್ಟು ಮನೆಯ ಮೇಲ್ಭಾವಣಿ ಮೇಲೆ ಬೆಳೆಸಿಕೊಳ್ಳುತ್ತಿದ್ದಾರೆ. ಅಂತಹುದ್ದನ್ನೆಲ್ಲಾ ಹಿಡಿಯುವುದು ಕಷ್ಟದ ಕೆಲಸ. ಆದರೆ ಈ ರೀತಿ ಎಲ್ಲೆಲ್ಲಿ ಬಳಕೆಯಾಗುತ್ತಿದೆ ಎಂಬ ಮಾಹಿತಿಯನ್ನು ಕಲೆ ಹಾಕಿ ಕ್ರಮ ಕೈಗೊಳ್ಳಲಾಗುತ್ತಿದೆ. ಮಾದಕವಸ್ತು ಕಳ್ಳಸಾಗಾಣಿಕೆ ಮಾಡುವವರ ಮೇಲೆ ನಿಗಾವಹಿಸಲಾಗಿದೆ.

ವಿದೇಶಿಯರು, ವಿದೇಶದ ವಿದ್ಯಾರ್ಥಿಗಳು ಮಾದಕ ವಸ್ತು ಸಾಗಾಣಿಕೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಅಂತವರನ್ನು ಬಂಧಿಸಿ ಸಂಬಂಧಪಟ್ಟ ದೇಶದ ವಿದೇಶಾಂಗ ಸಚಿವಾಲಯಕ್ಕೆ ಮಾಹಿತಿ ನೀಡಿ ಗಡಿಪಾರು ಮಾಡುವ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ. ದೇಶ ಬಿಟ್ಟು ತೊಲಗಿಸುವವರೆಗೂ ನಮ ಕಸ್ಟಡಿಯಲ್ಲೇ ಇಟ್ಟುಕೊಳ್ಳಬೇಕಾದ ಅನಿವಾರ್ಯತೆ ಇರುತ್ತದೆ. ಇಷ್ಟೆಲ್ಲಾ ಕ್ರಮ ಕೈಗೊಂಡರೂ ಅಲ್ಲಿ, ಇಲ್ಲಿ ಸಣ್ಣ ಪ್ರಮಾಣದ ಮಾದಕವಸ್ತು ಪತ್ತೆಯಾಗುತ್ತಲೇ ಇದೆ. ಇದನ್ನು ಸಮರ್ಥವಾಗಿ ಹತ್ತಿಕ್ಕುವ ಕೆಲಸ ಮಾಡುತ್ತೇವೆ ಎಂದರು.

ರೇವ್ ಪಾರ್ಟಿಯಲ್ಲಿ ನಟಿ ಹೇಮಾ

ನಾನು ಎಲ್ಲಿಯೂ ಹೋಗಿಲ್ಲ. ಹೈದರಾಬಾದ್ ನ ಫಾರ್ಮ್ ಹೌಸ್ ನಲ್ಲಿ ಆರಾಮವಾಗಿದ್ದೇನೆ. ರೇವ್ ಪಾರ್ಟಿಯಲ್ಲಿ ನಾನು ಭಾಗಿಯಾಗಿದ್ದೇನೆ ಎಂಬ ಸುದ್ದಿ ಫೇಕ್ ಸುದ್ದಿ ಎಂದು ಸ್ಪಷ್ಟಪಡಿಸಿದ್ದರು. ರೇವ್ ಪಾರ್ಟಿಯಲ್ಲಿ ನಟಿ ಹೇಮಾ ಭಾಗಿಯಾಗಿದ್ದು ಸತ್ಯ ಎಂದು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ಸ್ಪಷ್ಟನೆ ನೀಡಿದ್ದಾರೆ.

ರೇವ್ ಪಾರ್ಟಿ ಮೇಲೆ ಸಿಸಿಬಿ ದಾಳಿ

ರೇವ್ ಪಾರ್ಟಿಯಲ್ಲಿ ನಟಿ ಹೇಮಾ ಭಾಗಿಯಾಗಿದ್ದು ಸತ್ಯ ಎಂದು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ಸ್ಪಷ್ಟನೆ ನೀಡಿದ್ದಾರೆ. ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ಫೌರ್ಮ್ ಹೌಸ್ ನಲ್ಲೇ ಇದ್ದು ನಟಿ ಹೇಮಾ ವಿಡಿಯೋ ಮಾಡಿದ್ದಾರೆ, ಯಾವ ಸಂದರ್ಭದಲ್ಲಿ ವಿಡಿಯೊ ಮಾಡಿದ್ದಾರೆ ಎಂಬುದನ್ನು ಪರಿಶೀಲಿಸುತ್ತೀವಿ ಎಂದು ಹೇಳಿದ್ದಾರೆ. ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿ ಬಳಿಯ ಜೆಆರ್ ಫಾರ್ಮ್ ಹೌಸ್ ನಲ್ಲಿ ನಡೆಯುತ್ತಿದ್ದ ರೇವ್ ಪಾರ್ಟಿ ಮೇಲೆ ಸಿಸಿಬಿ ಪೊಲೀಸರು ದಾಳಿ ನಡೆಸಿದ್ದು, ಪಾರ್ಟಿ ಆಯೋಜಕರು ಸೇರಿ ಐವರನ್ನು ಬಂಧಿಸಲಾಗಿದೆ. ರಾಜಕಾರಣಿಗಳು, ತೆಲುಗು ಚಿತ್ರರಂಗದ ನಟ-ನಟಿಯರು ಈ ರೇವ್ ಪಾರ್ಟಿಯಲ್ಲಿ ಭಾಗಿಯಾಗಿದ್ದರು ಎಂಬ ಮಾತು ಕೇಳಿಬರುತ್ತಿದೆ. ಪ್ರಮುಖವಾಗಿ ಟಾಲಿವುಡ್ ನಟಿ ಹೇಮಾ ಕೂಡ ಇದ್ದರು ಎನ್ನಲಾಗಿದೆ.

ಡ್ರಗ್ ಮುಕ್ತ ಪಣ

ಪ್ರಕರಣದ ಬಗ್ಗೆ ನಗರದಲ್ಲಿ ಬ್ರೀಫ್ ಮಾಡಿದ ಗೃಹ ಸಚಿವ ಜಿ ಪರಮೇಶ್ವರ್ ಅವರು, ರೇವ್ ಪಾರ್ಟಿಯಲ್ಲಿ ಭಾಗಿಯಾಗಿದ್ದ ಸೆಲಿಬ್ರಿಟಿಗಳ ಮಾಹಿತಿಯನ್ನು ರೇಡ್ ಮಾಡಿದ ಪೊಲೀಸರು ಕಲೆ ಹಾಕುತ್ತಿದ್ದಾರೆ, ಪಾರ್ಟಿ ನಡೆಯುತ್ತಿದ್ದ ಸ್ಥಳದಲ್ಲಿ ಅಲ್ಪ ಪ್ರಮಾಣದ ಡ್ರಗ್ಸ್ ಕೂಡ ಪತ್ತೆಯಾಗಿವೆ, ಅವು ಎಲ್ಲಿಂದ ಬಂದವು ಅನ್ನೋದರ ತನಿಖೆಯಾಗಬೇಕಿದೆ ಎಂದರು. ಕರ್ನಾಟಕವನ್ನು ಡ್ರಗ್ಸ್ ಮುಕ್ತ ರಾಜ್ಯವಾಗಿಸಲು ಮುಖ್ಯಮಂತ್ರಿ ಮತ್ತು ತಾವು ಪಣತೊಟ್ಟಿರುವುದಾಗಿ ಹೇಳಿದ ಪರಮೇಶ್ವರ್ ರಾಜ್ಯದಲ್ಲಿ ಡ್ರಗ್ಸ್ ಹಾವಳಿ ಗಣನೀಯವಾಗಿ ಕಡಿಮೆಯಾಗಿದೆ ಮತ್ತು ಹೊರರಾಜ್ಯಗಳಿಂದ ಬರುವ ಮಾದಕ ವಸ್ತುಗಳನ್ನು ಬರಾಖತ್ತು ಮಾಡಿಕೊಂಡು ನಾಶಪಡಿಸುವ ಕೆಲಸವನ್ನು ಪೊಲೀಸರು ಮಾಡುತ್ತಿದ್ದಾರೆ. ಪೊಲೀಸ್ ವ್ಯವಸ್ಥೆಯಲ್ಲಿ ಡ್ರಗ್ಸ್ ಮಾರಾಟ, ಪೂರೈಕೆ ತಡೆಯಲು ಒಂದು ಪ್ರತ್ಯೇಕ ವಿಭಾಗ ಸ್ಥಾಪಿಸಲಾಗಿದೆ. ಸಾವಿರಾರು ಕೋಟಿ ರೂ. ಮೌಲ್ಯದ ಡ್ರಗ್ಸ್ ನಾಶಪಡಿಸಲಾಗಿದೆ. ಬೆಂಗಳೂರಲ್ಲಿ ಬೀಡು ಬಿಟ್ಟಿದ್ದ ಹಲವಾರು ಡ್ರಗ್ ಪೆಡ್ಲರ್‌ಗಳನ್ನು ವಶಕ್ಕೆ ಪಡೆದು ರಿಪೋರ್ಟ್ ಮಾಡಲಾಗಿದೆ ಎಂದು ಪರಮೇಶ್ವರ್ ಹೇಳಿದರು.

ದಲಿತರನ್ನು ವಂಚಿಸುವ ಮೀಸಲಾತಿ ಅಂಗೀಕಾರ

• ಉದಯವಾಹಿನಿ, ಬೆಂಗಳೂರು

ಪರಿಶಿಷ್ಟ ಜಾತಿ, ವರ್ಗಗಳಿಗೆ ಅನ್ಯಾಯ

ಹೊರಗುತ್ತಿಗೆ ನೇಮಕಾತಿ ವಿಚಾರದಲ್ಲಿ ದಲಿತರಿಗೆ ವಂಚನೆ ಮಾಡುವ ಮೀಸಲಾತಿಯನ್ನು ರಾಜ್ಯದ ಕಾಂಗ್ರೇಸ್ ಸರಕಾರ ಅಂಗೀಕರಿಸಿದೆ ಎಂದು ವಿಧಾನಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ಅವರು ಆಕ್ಷೇಪಿಸಿದರು.

ನಗರದ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಪರಿಶಿಷ್ಟ ಜಾತಿ, ವರ್ಗಗಳು ಮತ್ತು ಮಹಿಳಾ ಮೀಸಲಾತಿಗೆ ಅನುಗುಣವಾಗಿ ರಾಜ್ಯ ಸರಕಾರವು ಗುತ್ತಿಗೆ ಆಧಾರದಲ್ಲಿ ನೇಮಕಾತಿಯಲ್ಲಿ ಮಾಡುವುದರಲ್ಲೂ ಕೂಡ ಮೀಸಲಾತಿ ನೀಡಿರುವುದಾಗಿ ತಿಳಿಸಿದ್ದು ಸ್ವಾಗತಾರ್ಹ.

2022-23ರಲ್ಲಿ ನಮ್ಮ ಸರಕಾರ ಇದ್ದಾಗ ಬಸವರಾಜ ಬೊಮ್ಮಾಯಿಯವರು ಈ ಕುರಿತು ತೀರ್ಮಾನ ಮಾಡಿದ್ದರು. ಈ ಕುರಿತು ಪರಿಶಿಷ್ಟ ಜಾತಿ, ವರ್ಗದವರು ಬಹುದಿನಗಳ ಕಾಲ ಹೋರಾಟ ಮಾಡಿದ್ದರು. ಮೇಲ್ಮನೆಯಲ್ಲಿ ನಾನು ಈ ಕುರಿತು ಪ್ರಶ್ನಿಸಿದ್ದೆ. ಹೊರಗುತ್ತಿಗೆ ನೀಡುವಾಗ ಪರಿಶಿಷ್ಟ ಜಾತಿ, ವರ್ಗಗಳಿಗೆ ಅನ್ಯಾಯ ಆಗುತ್ತಿದೆ. ಅದರಲ್ಲೂ ಮೀಸಲಾತಿ ಕೊಡಲು ಕೇಳಿದ್ದೆ. ಆಗಲೇ ಸರಕಾರ ಒಪ್ಪಿಗೆ ಕೊಟ್ಟಿತ್ತು ಎಂದು ನೆನಪಿಸಿದರು.



ಕಾಂಗ್ರೇಸ್ ಸರಕಾರ ಬಂದು ಒಂದು ವರ್ಷ ಕಳೆದರೂ, ನಾವು ಒತ್ತಡ ಹೇರಿದ್ದರೂ ಅದನ್ನು ಜಾರಿ ಮಾಡಿರಲಿಲ್ಲ. ಕೊನೆಗೂ ಒಂದು ತೀರ್ಮಾನ ತೆಗೆದುಕೊಂಡಿದ್ದಾರೆ.

ತೀರ್ಮಾನ ಮಾಡುವಾಗಲೂ ತಾರತಮ್ಯ ಮಾಡಿದ್ದಾರೆ. ಕಾಂಗ್ರೇಸ್ ನಿರಂತರವಾಗಿ ದಲಿತ ವಿರೋಧಿ ಚಟುವಟಿಕೆ, ಸಂಸ್ಕೃತಿಯನ್ನು ಮಾಡುತ್ತ ಬಂದಿದೆ. ಯಾವುದೇ ಇಲಾಖೆಯಲ್ಲಿ 20 ನೇಮಕಾತಿ ನಡೆದರೆ ಮೀಸಲಾತಿ ಇಲ್ಲ; ಅದಕ್ಕಿಂತ ಹೆಚ್ಚು ಬಂದರೆ ಮಾತ್ರ ಮೀಸಲಾತಿ ಎಂದಿದ್ದಾರೆ.

ರಾಜೀವ್ ಗಾಂಧಿ ಪುಣ್ಯತಿಥಿ ಗಣ್ಯರಿಂದ ನಮನ

• ಉದಯವಾಹಿನಿ, ನವದೆಹಲಿ

ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ 33ನೇ ಪುಣ್ಯತಿಥಿ ಹಿನ್ನೆಲೆ ಅವರಿಗೆ ಪ್ರಧಾನಿ ಮೋದಿ ಸೇರಿದಂತೆ ಗಣ್ಯರು ನಮನ ಸಲ್ಲಿಸಿದರು. ಎಕ್ಸ್‌ನಲ್ಲಿ ಬರೆದುಕೊಂಡಿರುವ ಪ್ರಧಾನಿ ಮೋದಿ ಅವರು, ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಪುಣ್ಯತಿಥಿಯಂದು ಅವರಿಗೆ ನನ್ನ ನಮನಗಳು ಎಂದು ಪೋಸ್ಟ್ ಹಂಚಿಕೊಂಡಿದ್ದಾರೆ. ಇನ್ನೂ ರಾಜೀವ್ ಗಾಂಧಿ ಅವರ 33ನೇ ಪುಣ್ಯತಿಥಿ ಹಿನ್ನೆಲೆ ಕಾಂಗ್ರೇಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೇಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಮತ್ತು ಪಕ್ಷದ ಸಂಸದ ರಾಹುಲ್ ಗಾಂಧಿ ಅವರು ಮಂಗಳವಾರ ಬೆಳಿಗ್ಗೆ ದೆಹಲಿಯ ವೀರ ಭೂಮಿಯಲ್ಲಿ ರಾಜೀವ್ ಗಾಂಧಿ ಅವರಿಗೆ ನಮನ ಸಲ್ಲಿಸಿದರು.

ಪಿ ಚಿದಂಬರಂ ಮತ್ತು ಸಚಿನ್ ಪೈಲಟ್ ಅವರಂತಹ ಇತರ ಕಾಂಗ್ರೇಸ್ ನಾಯಕರು ರಾಷ್ಟ್ರ ರಾಜಧಾನಿಯಲ್ಲಿ ಮಾಜಿ ಪ್ರಧಾನಿಗೆ ಗೌರವ ಸಲ್ಲಿಸಿದರು. 1984 ರಲ್ಲಿ ತಾಯಿ ಮತ್ತು ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರ ಹತ್ಯೆಯ ನಂತರ ರಾಜೀವ್ ಗಾಂಧಿ ಅವರು ಕಾಂಗ್ರೇಸ್ ಉಸ್ತುವಾರಿ ವಹಿಸಿಕೊಂಡರು. ಅವರು ಅಕ್ಟೋಬರ್ 1984 ರಲ್ಲಿ ಅಧಿಕಾರ ವಹಿಸಿಕೊಂಡಾಗ ಅವರು 40 ನೇ ವಯಸ್ಸಿನಲ್ಲಿ ಭಾರತದ ಅತ್ಯಂತ ಕಿರಿಯ ಪ್ರಧಾನಿಯಾದರು. ಅವರು ಡಿಸೆಂಬರ್ 2, 1989 ರವರೆಗೆ ಭಾರತದ ಪ್ರಧಾನ ಮಂತ್ರಿಯಾಗಿ ಸೇವೆ ಸಲ್ಲಿಸಿದರು. ಆಗಸ್ಟ್ 20, 1944 ರಲ್ಲಿ ಜನಿಸಿದ ರಾಜೀವ್ ಗಾಂಧಿಯವರು ಮೇ 21 ರಂದು ತಮಿಳುನಾಡಿನ ಶ್ರೀಪೆರಂಬದೂರಿನಲ್ಲಿ ಚುನಾವಣಾ ಕಾರ್ಯಾಲಯಲ್ಲಿ ಲಿಬರೇಶನ್ ಟೈಗರ್ಸ್ ಆಫ್

ಕುಮಾರಸ್ವಾಮಿ, ರೇವಣ್ಣ ಭಯೋತ್ಪಾದಕರೇ: ಡಿಸಿಎಂ ಪ್ರಶ್ನೆ

■ ಫೋನ್ ಟ್ಯಾಪ್‌ನಂತಹ ಮುಠ್ಠಾಳತನದ ಕೆಲಸ ನಮ್ಮ ಸರ್ಕಾರ ಮಾಡಲ್ಲ : ಡಿಸಿಎಂ ಡಿ. ಕೆ. ಶಿವಕುಮಾರ್ ಹೇಳಿಕೆ

• ಉದಯವಾಹಿನಿ, ಬೆಂಗಳೂರು

ಫೋನ್ ಟ್ಯಾಪ್ ಮಾಡಲು ಕುಮಾರಸ್ವಾಮಿ, ರೇವಣ್ಣ ಅವರೇನು ಭಯೋತ್ಪದಕರೇ ಫೋನ್ ಟ್ಯಾಪ್ ನಂತಹ ಮುಠ್ಠಾಳತನದ ಕೆಲಸವನ್ನು ನಮ್ಮ ಸರ್ಕಾರ ಮಾಡುವುದಿಲ್ಲ ಎಂದು ಡಿಸಿಎಂ ಡಿ. ಕೆ. ಶಿವಕುಮಾರ್ ಅವರು ಹೇಳಿದರು.

ಭಯೋತ್ಪಾದಕರ ಫೋನನ್ನು ಅನುಮತಿ ಪಡೆದು ಟ್ಯಾಪ್ ಮಾಡಲಾಗುತ್ತದೆ. ಇವರು ನಮ್ಮ ರಾಜ್ಯದ ನಾಯಕರು, ಇವರ ಫೋನ್ ಟ್ಯಾಪ್ ಮಾಡುವ ಅವಶ್ಯಕತೆ ನಮ್ಮ ಸರ್ಕಾರಕ್ಕಿಲ್ಲ. ಕೇವಲ ಪ್ರಚಾರಕ್ಕಾಗಿ ಇಂತಹ ಸುಳ್ಳು ಆರೋಪ ಮಾಡುತ್ತಿದ್ದಾರೆ. ಸರ್ಕಾರ ಒಂದು ವರ್ಷ ಐಸಿಯುನಲ್ಲಿ ಇತ್ತು ಎಂಬ ಕುಮಾರಸ್ವಾಮಿ ಅವರ ಆರೋಪದ ಬಗ್ಗೆ ಕೇಳಿದಾಗ ಪಾಪ ಅವರು ಇನ್ನೇನು ಮಾಡಲು, ಇನ್ನೇನು ಹೇಳಲು ಸಾಧ್ಯ. ಅಧಿಕಾರದಲ್ಲಿ ಇದ್ದಾಗ ಏನೂ ಮಾಡಲಿಲ್ಲ. ಸರ್ಕಾರ ಐಸಿಯುನಲ್ಲಿ ಇತ್ತೋ ಇರಲಿಲ್ಲವೋ ಎಂದು ಜನ ಹೇಳಬೇಕು, ನಾಯಕರುಗಳಲ್ಲ. ಈ ಹಿಂದಿನ ಸರ್ಕಾರದ ಕೆಟ್ಟ ಆಡಳಿತದಿಂದ, ಬೆಲೆ ಏರಿಕೆಯಿಂದ ತತ್ತರಿಸಿದ್ದ ಮಹಿಳೆಯರ ಜೀವನದಲ್ಲಿ ನಮ್ಮ ಸರ್ಕಾರದ ಆಡಳಿತದಿಂದ ಬದಲಾವಣೆ ಉಂಟಾಗಿದೆ. ಕೆಟ್ಟ ಆಡಳಿತ ಎಂದು ಚುನಾವಣೆಗೆ ಮುಂಚಿತವಾಗಿ ಕುಮಾರಸ್ವಾಮಿ ಹಾಗೂ ಅವರ ಪಕ್ಷದವರ ನುಡಿಮುತ್ತುಗಳ ಬಗ್ಗೆ ಮಾಧ್ಯಮದವರ ಬಳಿಯೇ ದಾಖಲೆಗಳು ಇದ್ದಾವಲ್ಲವೇ? ಅವರು ನಮ್ಮ ಬಗ್ಗೆ ಮಾತನಾಡಲೇ ಬೇಕಲ್ಲವೇ!. ಅವರಿಂದ ನಾನು ಶಹಬಾಷ್ಗಿರಿ ನಿರೀಕ್ಷಿಸಲು ಸಾಧ್ಯವೇ? ಇದನ್ನು ನಾನು ನಿರೀಕ್ಷೆ ಮಾಡುವುದೂ ಇಲ್ಲ.

ಟ್ಯಾಪ್ ಅವಶ್ಯ ಸರ್ಕಾರಕ್ಕಿಲ್ಲ

ಪೆನ್ ಡ್ರೈವ್ ಪ್ರಕರಣದಲ್ಲಿ ಕುಮಾರಸ್ವಾಮಿ ಅವರು ಡಿ.ಕೆ. ಶಿವಕುಮಾರ್ ಅವರ ಪಾತ್ರದ ಬಗ್ಗೆ ಆರೋಪ ಮಾಡಿರುವ ಕುರಿತು ಕೇಳಿದಾಗ ನನಗೂ ಈ ಪ್ರಕರಣಕ್ಕೂ ಯಾವುದೇ ರೀತಿಯ ಸಂಬಂಧವಿಲ್ಲ. ನನ್ನ ಹೆಸರನ್ನು ಪ್ರಸ್ತಾಪ ಮಾಡದಿದ್ದರೆ ಅವರಿಗೆಲ್ಲ ನಿದ್ದೆ ಬರುವುದಿಲ್ಲ. ಮಾಧ್ಯಮಗಳು ಸಹ ಈ ವಿಚಾರದಲ್ಲಿ ನೈತಿಕತೆಯ ಗಡಿ ಮೀರಬಾರದು. ಉಪ್ಪು ತಿಂದವನು ನೀರು ಕುಡಿಯಬೇಕು ಎಂದು ಕುಮಾರಸ್ವಾಮಿ ಅವರೇ ಹೇಳಿದ್ದಾರೆ. ಕಾನೂನು ತನ್ನ ಕ್ರಮ ತೆಗೆದುಕೊಳ್ಳುತ್ತದೆ. ಈ ಬಗ್ಗೆ ನಾನು ಹೆಚ್ಚು ಮಾತನಾಡುವುದಿಲ್ಲ.

ರಾಜ್ಯ ಸರ್ಕಾರ ಒಂದು ವರ್ಷ ಪೂರೈಸಿರುವ ಬಗ್ಗೆ ಕೇಳಿದಾಗ ಎಲ್ಲರ ಸಹಕಾರದಿಂದ ರಾಜ್ಯದ ಜನರಿಗೆ ತೃಪ್ತಿದಾಯಕ ಆಡಳಿತ ನೀಡಿದ್ದೇವೆ. ಗ್ಯಾರಂಟಿ ಯೋಜನೆಗಳ ಜತೆಗೆ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಕಾಂಗ್ರೇಸ್ ಸರ್ಕಾರ ನೀಡಿದೆ. ಜನರಿಗೆ ನಮ್ಮ ಸರ್ಕಾರದ ಬಗ್ಗೆ ತೃಪ್ತಿಯಿದೆ. ಜನರ ವಿಶ್ವಾಸವನ್ನುಗಳಿಸಿ ಒಂದು ವರ್ಷ ಪೂರೈಸಿದ್ದೇವೆ ಎಂದರು.

> ಡಿ.ಕೆ.ಶಿವಕುಮಾರ್, ದೇವರಾಜೇಗೌಡ ಮತ್ತು ಶಿವರಾಮೇಗೌಡ ಅವರ ನಡುವಿನ ಸಂಭಾಷಣೆ ಆಡಿಯೋ ಬಿಡುಗಡೆ ಬಗ್ಗೆ ಕೇಳಿದಾಗ ನಾನು ಯಾರ ಜೊತೆಯೂ ಮಾತನಾಡಬಾರದ್ದು ಮಾತನಾಡಿಲ್ಲ. ಯಾರಿಗೂ ನಾನು ಜೆಪಿಎ ಕೊಟ್ಟಿಲ್ಲ. ನಾನೊಬ್ಬ ರಾಜಕಾರಣಿ, ನನ್ನನ್ನು ಭೇಟಿ ಮಾಡಲು ಬಿಜೆಪಿ, ಜೆಡಿಎಸ್ ಸೇರಿದಂತೆ ಎಲ್ಲಾ ಪಕ್ಷದ ಕಾರ್ಯಕರ್ತರೂ ಬರುತ್ತಾರೆ. ಅವರು ಬಿಜೆಪಿಯವರು, ನನ್ನ ಭೇಟಿಗೆ ಸಮಯ ಕೇಳಿದ್ದರು. ನಾನು ಕೊಡಲಿಲ್ಲ. ಅರ್ಥ ನಿಮಿಷವೂ ನಾನು ಯಾರ ಬಳಿಯೂ ಮಾತನಾಡಿಲ್ಲ. ನನಗೂ ರಾಜಕೀಯ, ವ್ಯವಹಾರ ಪ್ರಜ್ಞೆ ಇದೆ. ಈ ವಿಚಾರದ ಗಂಭೀರತೆಯೂ ನನಗೆ ಅರ್ಥವಾಗುತ್ತದೆ.

> ಡಿ.ಕೆ.ಶಿವಕುಮಾರ್ ಜೈಲಿಗೆ ಹೋದಾಗ ನಾನು ಅವರ ತಾಯಿಯನ್ನು ಸಾಂತ್ವನ ಮಾಡಿದ್ದೆ, ಆದರೆ ಅವರು ನನ್ನ ತಂದೆಗೆ ನೋವು ನೀಡುವುದು ಸರಿಯೇ ಎಂದು ಕುಮಾರಸ್ವಾಮಿ ಹೇಳಿರುವ ಬಗ್ಗೆ ಕೇಳಿದಾಗ, ನನಗೆ ಅವರ ಪರಿಸ್ಥಿತಿ ಬಗ್ಗೆ ಅನುಕಂಪವಿದೆ. ನಾನು ಈ ವಿಚಾರದಲ್ಲಿ ಯಾರ ಬಗ್ಗೆಯೂ ಅಂದೂ ಮಾತನಾಡಿಲ್ಲ, ಇಂದೂ ಮಾತನಾಡುವುದಿಲ್ಲ ಎಂದರು. – ಡಿಸಿಎಂ ಡಿ.ಕೆ.ಶಿವಕುಮಾರ್

ಬಸ್ ಟೈರ್ ಸ್ಫೋಟ: ಚಾಲಕನ ಸಮಯಪ್ರಜ್ಞೆಯಿಂದ ತಪ್ಪಿದ ಅನಾಹುತ

• ಉದಯವಾಹಿನಿ, ದೊಡ್ಡಬಳ್ಳಾಪುರ

ಬೆಂಗಳೂರು-ದೊಡ್ಡಬಳ್ಳಾಪುರ ಹೆದ್ದಾರಿ ಹೊಸಹುಡ್ಯ ಸಮೀಪ ಸೋಮವಾರ ಬೆಳಿಗ್ಗೆ 46ನೇ ಡಿಪೊಗೆ ಸೇರಿದ್ದ ಬಿಎಂಟಿಸಿ ಬಸ್ ಚಲಿಸುತ್ತಿದ್ದ ವೇಳೆ ಮುಂದಿನ ಭಾಗದ ಟೈಯರ್ ಆಕಸ್ಮಿಕವಾಗಿ ಸ್ಫೋಟಗೊಂಡಿದ್ದು ಚಾಲಕನ ಸಮಯ ಪ್ರಜ್ಞೆಯಿಂದ ಯಾವುದೇ ಅನಾಹುತ ಸಂಭವಿಸದೆ ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿರುವ ಪ್ರಕರಣ ನಡೆದಿದೆ. ಬಸ್ ಮುಂದಿನ ಭಾಗದ ಟೈರ್ ಸಾಕಷ್ಟು ಸವೆದು ಹೋಗಿದ್ದರೂ ಡಿಪೊದಲ್ಲಿನ ಮೆಕಾನಿಕ್‌ಗಳು ಟೈರ್ ಅನ್ನು ಬದಲಾವಣೆ ಮಾಡದೆ ಚಾಲನೆ ಮಾಡಲು ಅನುಮತಿ ನೀಡಿರುವುದು ಈ ಘಟನೆ ನಡೆಯಲು ಕಾರಣವಾಗಿದೆ. ಡಿಪೊ ವ್ಯವಸ್ಥಾಪಕ ಹಾಗೂ ಮೆಕಾನಿಕ್‌ಗಳ ನಿರ್ಲಕ್ಷ್ಯಕ್ಕೆ ಪ್ರಯಾಣಿಕರ ಆಕ್ರೋಶ ವ್ಯಕ್ತಪಡಿಸಿದ್ದು, ಪ್ರತಿದಿನ ಡಿಪೊದಿಂದ ಹೊರ ಬರುವಾಗ ಬಸ್ ಸುಸ್ಥಿತಿ ಬಗ್ಗೆ ಪರಿಶೀಲನೆ ಮಾಡದೆ ಇರುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಬಸ್ ಪ್ರಯಾಣಿಕರು ಆಗ್ರಹಿಸಿದ್ದಾರೆ.

ಭರತನಾಟ್ಯ ಪ್ರದರ್ಶನ

• ಉದಯವಾಹಿನಿ, ಬೆಂಗಳೂರು

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್.ಕೆ. ವಾದೀಂದ್ರಾಚಾರ್ ಅವರ ನೇತೃತ್ವದಲ್ಲಿ ಮೇ 23, ಗುರುವಾರ ಸಂಜೆ 7-30ಕ್ಕೆ ವಿದುಷಿ ಶ್ರೀಮತಿ ಉಷಾ ಬಸಪ್ಪ ಅವರ ನಿರ್ದೇಶನದಲ್ಲಿ ಪದ್ಮಿನಿಪ್ರಿಯ ನೃತ್ಯ ಕಲಾ ಅಕಾಡೆಮಿಯ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ.

ಕಳ್ಳ ಕಳ್ಳ ಪೊಲೀಸ್ ಕಳ್ಳ' ಅಟ್ಟಿಸಿಕೊಂಡು ಹೋದ ಸಾರ್ವಜನಿಕರು

• ಉದಯವಾಹಿನಿ, ಬೆಂಗಳೂರು

ಜನರಿಂದ ಹಣ ವಸೂಲಿಗೆ ಮುಂದಾಗಿದ್ದ ಪೊಲೀಸರನ್ನು ಕಳ್ಳ ಕಳ್ಳ ಪೊಲೀಸ್ ಕಳ್ಳ ಎಂದು ಸಾರ್ವಜನಿಕರೇ ಪೊಲೀಸರನ್ನು ಅಟ್ಟಾಡಿಸಿಕೊಂಡು ಹೋದ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಹೊಯ್ಸಳ ವಾಹನ ಪೊಲೀಸರು ಹಣ ವಸೂಲಿ ಮಾಡುತ್ತಿದ್ದಾರೆ. ಇವರು ಅಸಲಿ ಅಲ್ಲ ನಕಲಿ ಪೊಲೀಸರು ಎಂದು ಸಾರ್ವಜನಿಕರು ಮೊಬೈಲ್ ವಿಡಿಯೋ ಮಾಡುತ್ತಾ ಅಟ್ಟಿಸಿಕೊಂಡು ಹೋಗಿದ್ದಾರೆ. ಕಳ್ಳ ಕಳ್ಳ ಪೊಲೀಸ್ ಕಳ್ಳ ಎಂದು ಕೋಗುತ್ತಾ ಬರುವುದನ್ನು ಕಂಡ ಪೊಲೀಸರು ಹೊಯ್ಸಳ ವಾಹನದೊಂದಿಗೆ ಪರಾರಿಯಾಗಿದ್ದಾರೆ. ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಸಿಎಂ ಸಿದ್ದರಾಮಯ್ಯ ಭೇಟಿ, ಪರಿಶೀಲನೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಮಳೆ ಹಾನಿ ಪ್ರದೇಶಗಳಿಗೆ ಸಿಎಂ ಸಿದ್ದರಾಮಯ್ಯ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಕಳೆದ ಕೆಲವು ದಿನಗಳಿಂದ ಬೆಂಗಳೂರಿನಲ್ಲಿ ಮಳೆಯಾಗುತ್ತಿದ್ದು, ಹಲವು ಕಡೆ ಹಾನಿಯಾಗಿದೆ. ಈ ಹಿನ್ನಲೆ ಅಲ್ಲಿನ ಸ್ಥಿತಿ ಗತಿ ಪರಿಶೀಲಿಸಲು ಸಿಎಂ ಸಿದ್ದರಾಮಯ್ಯ 11 ಗಂಟೆ ವೇಳೆಗೆ ಸಿಟಿ ರೌಂಡ್ ಹೊಡೆಯಲಿದ್ದಾರೆ. ಮಳೆಹಾನಿ ಪ್ರದೇಶಗಳಿಗೆ ಭೇಟಿ ನೀಡುವ ಸಿಎಂ ಸಿದ್ದರಾಮಯ್ಯ ಅಲ್ಲಿನ ಸ್ಥಿತಿಗತಿ ಬಗ್ಗೆ ಪರಿಶೀಲನೆ ನಡೆಸಲಿದ್ದಾರೆ. ಸಿಎಂ ಸಿದ್ದರಾಮಯ್ಯ ಗೆ ಬಿಬಿಎಂಪಿ ಅಧಿಕಾರಿಗಳು ಸೇರಿ ಹಲವರು ಅಧಿಕಾರಿಗಳು ಸಾಥ್ ನೀಡಲಿದ್ದಾರೆ.

ರೇವ್ ಪಾರ್ಟಿಯಲ್ಲಿ ಹೇಮಾ ಭಾಗಿಯಾಗಿದ್ದು ಸತ್ಯ

• ಉದಯವಾಹಿನಿ, ಬೆಂಗಳೂರು

ರೇವ್ ಪಾರ್ಟಿಯಲ್ಲಿ ನಟಿ ಹೇಮಾ ಭಾಗಿಯಾಗಿದ್ದು ಸತ್ಯ ಎಂದು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ಸ್ಪಷ್ಟನೆ ನೀಡಿದ್ದಾರೆ. ಸುದ್ದಿಗಾರರ ಜೊತೆ ಮಾತನಾಡಿದ ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ಫೌರ್ಮ್ ಹೌಸ್ ನಲ್ಲೇ ಇದ್ದು ನಟಿ ಹೇಮಾ ವಿಡಿಯೋ ಮಾಡಿದ್ದಾರೆ, ಯಾವ ಸಂದರ್ಭದಲ್ಲಿ ವಿಡಿಯೊ ಮಾಡಿದ್ದಾರೆ ಎಂಬುದನ್ನು ಪರಿಶೀಲಿಸುತ್ತೀವಿ ಎಂದು ಹೇಳಿದ್ದಾರೆ.

ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿ ಬಳಿಯ ಜಿಆರ್ ಫಾರ್ಮ್ ಹೌಸ್‌ನಲ್ಲಿ ನಡೆಯುತ್ತಿದ್ದ ರೇವ್ ಪಾರ್ಟಿ ಮೇಲೆ ಸಿಸಿಬಿ ಪೊಲೀಸರು ದಾಳಿ ನಡೆಸಿದ್ದು, ಪಾರ್ಟಿ ಆಯೋಜಕರು ಸೇರಿ ಐವರನ್ನು ಬಂಧಿಸಲಾಗಿದೆ.

ರಾಜಕಾರಣಿಗಳು, ತೆಲುಗು ಚಿತ್ರರಂಗದ ನಟ-ನಟಿಯರು ಈ ರೇವ್ ಪಾರ್ಟಿಯಲ್ಲಿ ಭಾಗಿಯಾಗಿದ್ದರು ಎಂಬ ಮಾತು ಕೇಳಿಬರುತ್ತಿದೆ. ಪ್ರಮುಖವಾಗಿ ಟಾಲಿವುಡ್ ನಟಿ ಹೇಮಾ ಕೂಡ ಇದ್ದರು ಎನ್ನಲಾಗಿದೆ. ಆದರೆ ಬೆಂಗಳೂರಿನಲ್ಲಿ ನಡೆದಿದ್ದ ರೇವ್ ಪಾರ್ಟಿಯಲ್ಲಿ ತಾನು ಭಾಗಿಯಾಗಿಲ್ಲ. ನಾನು ಹೈದರಾಬಾದ್ ನ ಫಾರ್ಮ್ ಹೌಸ್ ನಲ್ಲಿಯೇ ಇದ್ದೇನೆ ಎಂದು ಸಾಮಾಜಿಕ ಜಾಲತಾಣಗಲ್ಲಿ ವಿಡಿಯೋ ಶೇರ್ ಮಡುವ ಮೂಲಕ ಸ್ಪಷ್ಟನೆ ನೀಡಿದ್ದರು. ನಾನು ಎಲ್ಲಿಯೂ ಹೋಗಿಲ್ಲ. ಹೈದರಾಬಾದ್‌ನ ಫಾರ್ಮ್ ಹೌಸ್ ನಲ್ಲಿ ಆರಾಮವಾಗಿದ್ದೇನೆ. ರೇವ್ ಪಾರ್ಟಿಯಲ್ಲಿ ನಾನು ಭಾಗಿಯಾಗಿದ್ದೇನೆ ಎಂಬ ಸುದ್ದಿ ಫೇಕ್ ಸುದ್ದಿ ಎಂದು ಸ್ಪಷ್ಟಪಡಿಸಿದ್ದರು. ಆದರೀಗ ರೇವ್ ಪಾರ್ಟಿಯಲ್ಲಿ ನಟಿ ಹೇಮಾ ಭಾಗಿಯಾಗಿದ್ದು ಸತ್ಯ ಎಂದು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ಸ್ಪಷ್ಟನೆ ನೀಡಿದ್ದಾರೆ.

ಜಾಮೀನು ಸಿಕ್ಕರೂ ಹೆಚ್.ಡಿ. ರೇವಣ್ಣಗೆ ತಪ್ಪದ ಸಂಕಷ್ಟ

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ

ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಹೆಚ್.ಡಿ ರೇ ವಣ್ಣಗೆ ಜಾಮೀನು ಮಂಜೂರು ಆಗಿದೆ. ಜಾಮೀನು ಸಿಕ್ಕರೂ ರೇವಣ್ಣಗೆ ಸಂಕಷ್ಟ ತಪ್ಪಿಲ್ಲ, ಎಸ್ ಐ ಟಿ ಹೈಕೋರ್ಟ್ ಮೆಟ್ಟಿಲೇರಿದೆ. ಹೌದು. ಜಾಮೀನು ಪಡೆದಿದ್ದ ಹೆಚ್ ಡಿ ರೇವಣ್ಣಗೆ ವಿಶೇಷ ತನಿಖಾ ತಂಡ (ಎಸ್ ಐಟಿ) ಶಾಕ್ ನೀಡಿದೆ.

ಹೈಕೋರ್ಟ್ ಮೆಟ್ಟಿಲೇರಿದ ಎಸ್‌ಐಟಿ..!

ಜನಪ್ರತಿನಿಧಿಗಳ ನ್ಯಾಯಾಲಯದ ಜಾಮೀನು ಪ್ರಶ್ನಿಸಿ ಹೈಕೋರ್ಟ್ ಮೊರೆ ಹೋಗಿದೆ. ರೇವಣ್ಣ ಜಾಮೀನು ಆದೇಶ ವಜಾ ಮಾಡುವಂತೆ ಹೈಕೋರ್ಟ್ ಗೆ ಎಸ್ ಐ ಟಿ ಅರ್ಜಿ ಸಲ್ಲಿಸಿದೆ. ಈ ಹಿನ್ನೆಲೆ ಹೈಕೋರ್ಟ್ ಆದೇಶದ ಬಗ್ಗೆ ಕುತೂಹಲ ಮೂಡಿದೆ. ಹೈಕೋರ್ಟ್ ನಲ್ಲಿ ವಾದ ಮಾಡಲು ರೇವಣ್ಣ ಪರ ವಕೀಲರು ಕೂಡ ಸಜ್ಜಾಗುತ್ತಿದ್ದಾರೆ ಎಂದು ತಿಳಿದು ಬಂದಿದೆ. ಹೊಳೆನರಸೀಪುರದಲ್ಲಿ ದಾಖಲಾಗಿದ್ದ ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣದಲ್ಲಿ ಜಾಮೀನು ಕೋರಿ ಹೆಚ್.ಡಿ.ರೇವಣ್ಣ ಕೋರ್ಟ್ ಮೊರೆ ಹೋಗಿದ್ದರು. ಬೆಂಗಳೂರಿನ 42ನೇ ಎಸಿಎಂಎಂ ನ್ಯಾಯಾಲಯ ಅರ್ಜಿ ವಿಚಾರಣೆ ನಡೆಸಿ ಮೇ 16ರಂದು ಮಧ್ಯಾಹ್ನದವರೆಗೂ ರೇವಣ್ಣಗೆ ಮಧ್ಯಂತರ ಜಾಮೀನು ಮಂಜೂರು ಮಾಡಿತ್ತು.

> ಈ ವೇಳೆ ಮೇ 20ಕ್ಕೆ ಜಾಮೀನು ಅರ್ಜಿ ಆದೇಶವನ್ನು ಕಾಯ್ದಿರಿಸಿದ ಕೋರ್ಟ್, ಸೋಮವಾರದವರೆಗೂ ರೇವಣ್ಣಗೆ ಮಧ್ಯಂತರ ಜಾಮೀನು ಮುಂದುವರೆಯಲಿದೆ ಎಂದು ತಿಳಿಸಿತ್ತು. ನಂತರ ನಿನ್ನೆ ಮೇ 20 ರಂದು ಬೆಂಗಳೂರಿನ 42 ನೇ ಎಸಿಎಂಎಂ ಕೋರ್ಟ್ ಜಾಮೀನು ನೀಡಿ ಆದೇಶ ಹೊರಡಿಸಿದೆ. 5 ಲಕ್ಷ ಬಾಂಡ್, ಒಬ್ಬರ ಶ್ಯೂರಿಟಿ ನೀಡುವಂತೆ ಕೋರ್ಟ್ ಸೂಚನೆ ನೀಡಿದೆ.

ನಂತರ ಮತ್ತೆ ಜಾಮೀನು ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಲಯ ಎಸ್‌ಐಟಿ ಪರ ವಕೀಲರ ಹಾಗೂ ರೇವಣ್ಣ ಪರ ವಕೀಲರ ವಾದ-ಪ್ರತಿವಾದ ಆಲಿಸಿತ್ತು.

ಮಳೆ ವಿಪತ್ತು ನಿರ್ವಹಣೆಗೆ ಸಿದ್ಧತೆ: ಜಿಲ್ಲಾಧಿಕಾರಿ ಎನ್.ಶಿವಶಂಕರ

• ಉದಯವಾಹಿನಿ, ದೇವನಹಳ್ಳಿ

ಮುಂಗಾರು ಪೂರ್ವ ಮಳೆಯಿಂದಾಗುವ ವಿಪತ್ತು ನಿರ್ವಹಿಸಲು ಜಿಲ್ಲಾಡಳಿತ ವತಿಯಿಂದ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಎನ್.ಶಿವಶಂಕರ ಹೇಳಿದರು. ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ನಡೆದ ಬರ ನಿರ್ವಹಣೆ ಹಾಗೂ ಪೂರ್ವ ಮುಂಗಾರು ಮಳೆ ಸಿದ್ಧತೆ ಕುರಿತ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಾದ್ಯಂತ ಮುಂಗಾರು ಪೂರ್ವ ಉತ್ತಮ ಮಳೆ ಯಾಗುತ್ತಿದೆ. ರೈತರ ಜಮೀನು, ಜನ ನಿಬಿಡ ಪ್ರದೇಶಗಳಿಗೆ ನೀರು ನುಗ್ಗುವುದನ್ನು ತಪ್ಪಿಸಲು ಮಳೆ ನೀರು ಸರಾಗವಾಗಿ ಹರಿದು ಹೋಗಲು ಜಿಲ್ಲೆಯ ನಗರ ಪ್ರದೇಶ ಹಾಗೂ ಗ್ರಾಮೀಣ ಪ್ರದೇಶದಲ್ಲಿನ ಚರಂಡಿ, ರಾಜ ಕಾಲುವೆ ತ್ಯಾಜ್ಯ ಒಂದು

ಉದಯವಾಹಿನಿ ಚಿತ್ರ

ವಾರದೊಳಗೆ ತೆರವುಗೊಳಿಸಿ ವರದಿ ನೀಡಿ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

> ಮುಂಗಾರು ಪೂರ್ವ ಮಳೆಯಿಂದ 14.92 ಹೆಕ್ಟೇರ್ ತೋಟಗಾರಿಕೆ ಬೆಳೆ ನಾಶವಾಗಿದೆ. ಪ್ರಮುಖವಾಗಿ ಬಾಳೆ, ಮಾವು, ತರಕಾರಿ ಬೆಳೆ ಹಾಳಾಗಿದೆ ಎಂದು ತೋಟಗಾರಿಕೆ ಇಲಾಖೆ ನಿರ್ದೇಶಕರು ಮಾಹಿತಿ ನೀಡಿದರು.

ಮಳೆ ಸಿದ್ಧತೆ ಕುರಿತ ಸಭೆ

ಕುಡಿಯುವ ನೀರಿನ ಸಮಸ್ಯೆ ಉಂಟಾಗುವ ಗ್ರಾಮ ಹಾಗೂ ನಗರ ಪ್ರದೇಶಗಳಲ್ಲಿ ಖಾಸಗಿ ಕೊಳವೆ ಬಾವಿಗಳನ್ನು ಗುರುತಿಸಿ ನೀರು ಪೂರೈಸಲು ಮೊದಲ ಆದ್ಯತೆ ನೀಡಲಾಗಿದೆ. ಅವಶ್ಯವಿದ್ದಲ್ಲಿ ಖಾಸಗಿ ಟ್ಯಾಂಕರ್ ಮೂಲಕ ನೀರು ಪೂರೈಸಲು ಕ್ರಮ ವಹಿಸಬೇಕಾಗಿದೆ. ಕುಡಿಯುವ ನೀರು ಸಮಸ್ಯೆ ಕಂಡುಬಂದಲ್ಲಿ ತಕ್ಷಣ ಜಿಲ್ಲಾಡಳಿತ ಗಮನಕ್ಕೆ ತರಬೇಕು. ಸರ್ಕಾರಿ ಆಸ್ಪತ್ರೆಗಳಲ್ಲಿ ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮವಹಿಸಿ ಎಂದು ಹೇಳಿದರು. ರೈತರು ಕೃಷಿ ಚಟುವಟಿ ಆರಂಭಿಸಿದ್ದು ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಸಮರ್ಪಕವಾಗಿ ರೈತರಿಗೆ ಸಿಗುವಂತೆ ಕ್ರಮ ಕೈಗೊಳ್ಳಬೇಕೆಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ರಜೆ ಕಡಿತಗೊಳಿಸದಂತೆ ರಾಜ್ಯದ ಎಲ್ಲಾ ಶಾಲೆಗಳಿಗೆ ಶಿಕ್ಷಣ ಇಲಾಖೆ ಮಹತ್ವದ ಸೂಚನೆ

• ಉದಯವಾಹಿನಿ, ಬೆಂಗಳೂರು

2023-24ನೇ ಸಾಲಿನಲ್ಲಿ ರಾಜ್ಯ ಪಠ್ಯ ಕ್ರಮದ ಸರ್ಕಾರಿ ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ 2023-24ನೇ ಸಾಲಿಗೆ ಶೈಕ್ಷಣಿಕ ಮಾರ್ಗಸೂಚಿಯನ್ನು ಹೊರಡಿಸುವ ಮೂಲಕ ದಿನಾಂಕ:11.04.2024 ರಿಂದ 28.05.2024ರವರೆಗೆ ಬೇಸಿಗೆ ರಜೆ ಘೋಷಿಸಲಾಗಿರುತ್ತದೆ. ಆದರೆ ರಾಜ್ಯದಲ್ಲಿನ ಕೆಲವು ಖಾಸಗಿ ಶಾಲೆಗಳು ಬೇಸಿಗೆ ರಜೆಯನ್ನು ಕಡಿತಗೊಳಿಸಿ ತರಗತಿಗಳನ್ನು ಪ್ರಾರಂಭಿಸಿದ್ದು, ಈ ಕುರಿತಂತೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ಈ ಗಾಗಲೇ ನಿಗಧಿಯಾದಂತೆ ಶೈಕ್ಷಣಿಕ ರಜೆಯನ್ನು

ಜಿಲ್ಲೆಯಲ್ಲಿ ವೇಗದ ಇ.ವಿ ಚಾರ್ಜಿಂಗ್ ಘಟಕ ಶೀಘ್ರ

ಮುಂದಿನ ಮೂರು ತಿಂಗಳಲ್ಲಿ ಜಿಲ್ಲೆಯ ನಾಲ್ಕು ಕಡೆಗಳಲ್ಲಿ ಈ ವೇಗದ ಇ.ವಿ ಚಾರ್ಜಿಂಗ್ ಘಟಕಗಳು ಬಳಕೆಗೆ ದೊರೆಯಲಿವೆ

• ಉದಯವಾಹಿನಿ ಚಿಕ್ಕಬಳ್ಳಾಪುರ

ಎಲೆಕ್ಟ್ರಿಕ್ ವಾಹನಗಳ ಬಳಕೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಬೆಸ್ಕಾಂ ತನ್ನ ವ್ಯಾಪ್ತಿಯ ಎಂಟು ಜಿಲ್ಲೆಗಳಲ್ಲಿ ಇವಿ ಚಾರ್ಜಿಂಗ್ ಘಟಕಗಳನ್ನು ಅಳವಡಿಸಿದೆ. ಗ್ರಾಹಕರು ಉತ್ಸಾಹದಿಂದ ಇವುಗಳನ್ನು ಬಳಸುತ್ತಿದ್ದಾರೆ.

2022ರಲ್ಲಿ ಬೆಂಗಳೂರಿನ ಅರಮನೆ ಮೈದಾನದ 'ಚಾಮರ ವಜ್ರ'ದಲ್ಲಿ ಬೆಸ್ಕಾಂ ಒಂದು ವಾರಗಳ ಕಾಲ 'ಇವಿ' ಎಕ್ಸ್‌ಪೋ ಸಹ ಹಮ್ಮಿಕೊಂಡಿತ್ತು.

ಹಸಿರು ಇಂಧನ ಬಳಕೆ ಕುರಿತು ಜನರಲ್ಲಿ ಅರಿವು ಮೂಡಿಸಲು 'ಇವಿ' ರ್‍ಯಾಲಿ ಸಹ ಆಯೋಜಿಸಿತ್ತು. ಬೆಸ್ಕಾಂನ ಈ 'ಇವಿ' ಎಕ್ಸ್‌ಪೋಗೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿತ್ತು.

ನಂತರದ ದಿನಗಳಲ್ಲಿ ತನ್ನ ವ್ಯಾಪ್ತಿಯ ಜಿಲ್ಲೆಗಳಲ್ಲಿ ಇ.ವಿ ಚಾರ್ಜಿಂಗ್ ಘಟಕಗಳ ನಿರ್ಮಾಣಕ್ಕೆ ಬೆಸ್ಕಾಂ ಮುತುವರ್ಜಿವಹಿಸಿತು. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಬೆಸ್ಕಾಂನ 15 ಇ.ವಿ ಚಾರ್ಜಿಂಗ್ ಘಟಕಗಳು ಈಗಾಗಲೇ ಇವೆ. ಈಗ ಘಟಕಗಳನ್ನು ಮೇಲ್ದರ್ಜೆಗೇರಿಸಲು ಬೆಸ್ಕಾಂ ನಿರ್ಧರಿಸಿದೆ. ಜಿಲ್ಲೆಯಲ್ಲಿ ಇಲ್ಲಿಯವರೆಗೂ ಒಂದೇ ಗಂಟೆಯಲ್ಲಿ ಕಾರುಗಳು ಚಾರ್ಜ್ ಆಗುವ ಘಟಕಗಳು ಇಲ್ಲ. ಆದರೆ ಮುಂದಿನ ಮೂರು ತಿಂಗಳಲ್ಲಿ ಜಿಲ್ಲೆಯ ನಾಲ್ಕು ಕಡೆಗಳಲ್ಲಿ ಈ ವೇಗದ ಇ.ವಿ ಚಾರ್ಜಿಂಗ್ ಘಟಕಗಳು ಬಳಕೆಗೆ ದೊರೆಯಲಿವೆ.

ಗ್ರಾಹಕರ ಬೇಡಿಕೆಗಳನ್ನು ಮನಗಂಡಿರುವ ಬೆಸ್ಕಾಂ ಈಗಾಗಲೇ ಜಿಲ್ಲೆಯಲ್ಲಿ ದ್ವಿಚಕ್ರ ವಾಹನ ಮತ್ತು ನಾಲ್ಕು ಚಕ್ರದ ವಾಹನಗಳ 15 ಇ.ವಿ ಚಾರ್ಜಿಂಗ್ ಘಟಕಗಳನ್ನು ಸ್ಥಾಪಿಸಿದೆ. ಈಗ ಮತ್ತಷ್ಟು ಘಟಕಗಳನ್ನು ಆರಂಭಿಸಲು ಮತ್ತು ನಿರ್ಮಾಣವಾಗಿರುವ ಘಟಕಗಳಲ್ಲಿ ವೇಗವಾಗಿ ಚಾರ್ಜಿಂಗ್ ಮಾಡುವ ವ್ಯವಸ್ಥೆ ಜಾರಿಗೊಳಿಸಲು ಮುಂದಾಗಿದೆ.

ಖಾಸಗಿಯವರಿಂದಲೂ ಘಟಕ

ಬೆಂಗಳೂರು ಮತ್ತು ಹೈದರಾಬಾದ್ ರಾಷ್ಟ್ರೀಯ ಹೆದ್ದಾರಿ ಸೇರಿದಂತೆ ಜಿಲ್ಲೆಯಲ್ಲಿ ಹಾದು ಹೋಗಿರುವ ಹೆದ್ದಾರಿಯ ಪೆಟ್ರೋಲ್ ಬಂಕ್‌ಗಳು, ಕೆಲವು ಹೋಟೆಲ್‌ಗಳ ಬಳಿ ಇವಿ ಚಾರ್ಜಿಂಗ್ ಪಾಯಿಂಟ್‌ಗಳು, ಸ್ಟೇಷನ್‌ಗಳು ತಲೆ ಎತ್ತಿವೆ.

ಉದಯವಾಹಿನಿ ಚಿತ್ರ

ಎಲ್ಲೆಲ್ಲಿ ಇವೆ ಘಟಕಗಳು: ಬಾಗೇಪಲ್ಲಿ, ಗೌರಿಬಿದನೂರು, ಗುಡಿಬಂಡೆ ಬೆಸ್ಕಾಂ ಉಪವಿಭಾಗ ಕಚೇರಿ, ಚಿಕ್ಕಬಳ್ಳಾಪುರದ ಗ್ರಾಮಾಂತರ ಉಪವಿಭಾಗ, ಚಿಕ್ಕಬಳ್ಳಾಪುರದ ವಿಭಾಗ ಕಚೇರಿ, ನಂದಿ ಗೆಸ್ಟ್‌ಹೌಸ್, ಚಿಂತಾಮಣಿಯ ಗ್ರಾಮೀಣ ಮತ್ತು ನಗರದ ಉಪವಿಭಾಗ ಕಚೇರಿ, ಕೈವಾರದ ಉಪವಿಭಾಗ ಕಚೇರಿ, ಶಿಡ್ಲಘಟ್ಟದ ಕಚೇರಿ, ಶಿಡ್ಲಘಟ್ಟ ಗ್ರಾಮಾಂತರ ವಿಭಾಗದ ಜಂಗಮಕೋಟೆ ವಿಭಾಗ ಕಚೇರಿಯಲ್ಲಿ ಈಗಾಗಲೇ ದ್ವಿಚಕ್ರ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳ ಕಾಮಗಾರಿ ಪೂರ್ಣವಾಗಿ ಸಾರ್ವಜನಿಕರ ಬಳಕೆಗೆ ಇವೆ. ಚಿಕ್ಕಬಳ್ಳಾಪುರದ ಹೊಸ ವಿಭಾಗೀಯ ಕಚೇರಿ, ಗೌರಿಬಿದನೂರಿನ ಎನ್‌ಇಸಿ ಕಾಲೊನಿಯ ಉಪವಿಭಾಗ ಕಚೇರಿ, ನಂದಿಯ ಬೆಸ್ಕಾಂ ಕಚೇರಿ, ಚಿಂತಾಮಣಿ ವಿಭಾಗೀಯ ಕಚೇರಿಯಲ್ಲಿ ಕಾರುಗಳ ಇ.ವಿ ಚಾರ್ಜಿಂಗ್ ಘಟಕಗಳ ನಿರ್ಮಾಣ ಪ್ರಕ್ರಿಯೆ ನಡೆದಿದೆ. ಈ ಘಟಕಗಳಲ್ಲಿ ಕೆಲವು ಘಟಕಗಳು ಈಗಾಗಲೇ ಬಳಕೆಗೂ ಮುಕ್ತವಾಗಿವೆ. ಸಾರ್ವಜನಿಕರ ಬಳಕೆಯ ಅಗತ್ಯತೆಗಳನ್ನು ನೋಡಿಕೊಂಡು ಬೆಸ್ಕಾಂ ಜಿಲ್ಲೆಯಲ್ಲಿ ಮತ್ತಷ್ಟು ಘಟಕಗಳ ನಿರ್ಮಾಣಕ್ಕೆ ಚಿಂತಿಸುತ್ತಿದೆ. ಎಲೆಕ್ಟ್ರಿಕ್ ವಾಹನದ ಚಾರ್ಜಿಂಗ್‌ಗೆ ಒಂದು ಯುನಿಟ್‌ಗೆ ಸರಾಸರಿ 8 ಖರ್ಚಾಗುತ್ತದೆ. 15 ಯುನಿಟ್ ಇದ್ದರೆ, 100 ಕಿ.ಮೀ.ವರೆಗೆ ವಾಹನ ಓಡುತ್ತದೆ. 120 ಖರ್ಚು ಮಾಡಿದರೆ, 100 ಕಿ.ಮೀ. ಓಡಿಸಬಹುದು. ಅಂದರೆ, ಒಂದು ಕಿ.ಮೀ.ಗೆ ಸರಾಸರಿ 1.20 ಪೈಸೆ ಮಾತ್ರ ವೆಚ್ಚವಾಗುತ್ತದೆ. ಪೆಟ್ರೋಲ್, ಡೀಸೆಲ್‌ಗಿಂತ ಇದು ಮಿತವ್ಯಯಕಾರಿ. ಜಿಲ್ಲೆಯಲ್ಲಿ ಹಾದು ಹೋಗಿರುವ ಬೆಂಗಳೂರು ಮತ್ತು ಹೈದರಾಬಾದ್ ಹೆದ್ದಾರಿಯಲ್ಲಿ ಸರಾಸರಿ 20ರಿಂದ 25 ಚಾರ್ಜಿಂಗ್ ಘಟಕಗಳು ಇವೆ.

ನಾಲ್ಕು ಕಡೆಗಳಲ್ಲಿ ವೇಗದ ಇ.ವಿ ಚಾರ್ಜಿಂಗ್

ಬೆಸ್ಕಾಂ ದರ ಪ್ರತಿ ಯುನಿಟ್ ವೇಗದ ಚಾರ್ಜಿಂಗ್ 7.38, ನೇರ ಚಾರ್ಜಿಂಗ್ (ಡಿಸಿ), 6.71 ಮತ್ತು ಸಾಮಾನ್ಯ ಚಾರ್ಜಿಂಗ್ (ಎಸಿ) 6.57 ನಿಗದಿಗೊಳಿಸಿದೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ವೇಗದ ಚಾರ್ಜಿಂಗ್ ಘಟಕಗಳು ಇನ್ನೂ ನಿರ್ಮಾಣವಾಗಿಲ್ಲ. ಮುಂದಿನ ಮೂರು ತಿಂಗಳಲ್ಲಿ ಘಟಕಗಳು ನಿರ್ಮಾಣವಾಗುವ ಸಾಧ್ಯತೆ ಇದೆ.

ರೈತರ ಬೆಂಬಲಕ್ಕೆ ನಿಲ್ಲುವಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲ

• ಉದಯವಾಹಿನಿ ಶಿಡ್ಲಘಟ್ಟ

ಬರಗಾಲದಲ್ಲಿ ರೈತರ ಬೆಂಬಲಕ್ಕೆ ನಿಲ್ಲುವಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ. ರೈತರ ಬೆನ್ನಿಗೆ ನಿಂತು ಪರಿಹಾರ ನೀಡಿ ಆತ್ಮಸ್ಥೈರ್ಯ ತುಂಬಬೇಕಾದ ರಾಜ್ಯ ಸರ್ಕಾರಕ್ಕೆ ತೆಲಂಗಾಣ ಚುನಾವಣೆಯೆ ಮುಖ್ಯವಾಯಿತೆ ವಿನಃ ರೈತರ ಹಿತವಲ್ಲ ಎಂದು ರೈತ ಸಂಘದ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಆಗ್ರಹಿಸಿದರು.

ತಾಲ್ಲೂಕಿನ ಭಕ್ತರಹಳ್ಳಿಯಲ್ಲಿ ನಡೆದ ಬಂಡಿ ದ್ಯಾವರ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಅವರು ಸ್ಥಳೀಯ ರೈತರ ಜೊತೆ ಮಾತನಾಡಿ ಸದ್ಯದ ರೈತರ ಸ್ಥಿತಿಗತಿ, ಮುಂಗಾರು ಕೃಷಿ ಚಟುವಟಿಕೆಗಳ ಬಗ್ಗೆ ಚರ್ಚಿಸಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು. ಬರಗಾಲದ ಪರಿಹಾರವನ್ನು ಕೊಡುವಂತೆ ಕೇಂದ್ರ ಸರ್ಕಾರಕ್ಕೆ ದುಂಬಾಲು ಬಿದ್ದ ರಾಜ್ಯ ಸರ್ಕಾರಕ್ಕೆ ಕೇಂದ್ರ ನೀಡಿರುವ ಬರ ಪರಿಹಾರದ ಹಣದ ಜತೆಗೆ ತಾವೂ ಕೂಡ ಬರ ಪರಿಹಾರದ ಪಾಲು ಕೊಡಬೇಕೆಂಬ ಪ್ರಜ್ಞೆ ಇಲ್ಲವೇ ಎಂದು ಪ್ರಶ್ನಿಸಿದರು. ಎತ್ತಿನ ಹೊಳೆ ಯೋಜನೆಯನ್ನು ಅನುಷ್ಠಾನ ಗೊಳಿಸಲು ಸರ್ಕಾರ ನಿಧಾನಗತಿ ಅನುಸರಿಸುತ್ತಿದೆ. ತುಮಕೂರು ದೊಡ್ಡಬಳ್ಳಾಪುರ ಮಾರ್ಗದ ಮದ್ಯೆ ರೈತರು ತಮ್ಮ ಜಮೀನಿಗೆ ಪರಿಹಾರದ ಮೊತ್ತ ಹೆಚ್ಚು ಕೇಳಿದ್ದು ಅದನ್ನು ಕೊಡದೆ ಸರ್ಕಾರ ವಿಳಂಬ ಮಾಡುತ್ತಿರುವ ಕಾರಣ ಯೋಜನೆಯೂ ನಿಧಾನವಾಗುತ್ತಿದೆ ಎಂದು ಆರೋಪಿಸಿದರು. ಆ ಭಾಗದ ಶಾಸಕರೂ ಆದ ಗೃಹ ಮಂತ್ರಿ ಜಿ.ಪರಮೇಶ್ವರ್ ಅವರು, ಆ ಭಾಗದ ರೈತರ ಹಿತವನ್ನಷ್ಟೆ ಬಯಸುತ್ತಿದ್ದು ಅಲ್ಲಿನ ರೈತರಲ್ಲಿ ಗೊಂದಲ ಮೂಡಿಸುವುದನ್ನು ಬಿಡಬೇಕು. ಅಲ್ಲಿನ ರೈತರು ಕೇಳಿದ ಪರಿಹಾರದ ಹಣವನ್ನು ಸರ್ಕಾರ ಕೊಡಬೇಕು. ಕಾಮಗಾರಿಯನ್ನು ಮುಂದುವರೆಸಬೇಕು. ಯೋಜನೆಯಂತೆ ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ತಲಾ ಐದು ಟಿಎಂಸಿಯಷ್ಟು ನೀರನ್ನು ಹರಿಸಬೇಕೆಂದು ಆಗ್ರಹಿಸಿದರು. ರಾಜ್ಯ ಪ್ರಧಾನ ಕಾರ್ಯದರ್ಶಿ ಭಕ್ತರಹಳ್ಳಿ ಬೈರೇಗೌಡ, ಜಿಲ್ಲಾಧ್ಯಕ್ಷ ರಾಮನಾಥ, ತಾಲ್ಲೂಕು ಅಧ್ಯಕ್ಷ ತಾದೂರು ಮಂಜುನಾಥ್, ಜಿಲ್ಲಾ ಉಪಾಧ್ಯಕ್ಷ ವೀರಾಪುರ ಮುನಿನಂಜಪ್ಪ, ಬೀರಪ್ಪ ಇನ್ನೂ ಮುಂತಾದವರು ಹಾಜರಿದ್ದರು.

ಉದಯವಾಹಿನಿ ಚಿತ್ರ

ಬರ ಪರಿಹಾರಕ್ಕೆ ಅವರ ಮೇಲೆ ಇವರು ಇವರ ಮೇಲೆ ಅವರು ಆರೋಪ ಪ್ರತ್ಯಾರೋಪ ಮಾಡುತ್ತಾ ಮೂರ್‍ನಾಲ್ಕು ತಿಂಗಳು ಕಾಲ ಕಳೆದ ರಾಜ್ಯ ಸರ್ಕಾರವು ಕೊನೆಗೂ ಕೇಂದ್ರ ಸರ್ಕಾರ ಕೊಟ್ಟಂತಹ 3,400 ಕೋಟಿ ರೂ.ಗಳನ್ನು ನೀಡಿ ಕೈ ತೊಳೆದುಕೊಳ್ಳುತ್ತಿದೆ. ರಾಜ್ಯ ಸರ್ಕಾರವೂ ತನ್ನ ಪಾಲಿನ ಹಣವನ್ನು ರೈತರಿಗೆ ನೀಡಬೇಕೆಂದು ಆಗ್ರಹಿಸಿದರು.

-ಕೋಡಿಹಳ್ಳಿ ಚಂದ್ರಶೇಖರ್

ಜೆಸಿಬಿಯಿಂದ ಎಕ್ಸ್‌ಪ್ರೆಸ್ ಕೆನಾಲ್‌ಗೆ ಮಣ್ಣು

• ಉದಯವಾಹಿನಿ ತುಮಕೂರು

ಗುಬ್ಬಿ ತಾಲ್ಲೂಕಿನ ಸಿ.ಎಸ್.ಪುರ ಹೋಬಳಿಯ ಚೆನ್ನೇನಹಳ್ಳಿ ಬಳಿ ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್'ಗೆ ಜೆಸಿಬಿ ವಾಹನಗಳ ಮುಖಾಂತರ ಹೋರಾಟಗಾರರು ಮಣ್ಣು ಮುಚ್ಚಿ, ಕಾಮಗಾರಿಗೆ ತಡೆಯೊಡ್ಡಿದರು. ಲಿಂಕ್ ಕೆನಾಲ್ ಕಾಮಗಾರಿ ವಿರೋಧಿಸಿ ಹಲವು ದಿನಗಳಿಂದ ಹೋರಾಟ ನಡೆಯುತ್ತಿದೆ.

ಮಾಜಿ ಸಚಿವ ಸೊಗಡು ಶಿವಣ್ಣ, ಶಾಸಕ ಎಂ.ಟಿ.ಕೃಷ್ಣಪ್ಪ ನೇತೃತ್ವದಲ್ಲಿ ನೂರಾರು ಜನರು ಚೆನ್ನೇನಹಳ್ಳಿ ಬಳಿ ಕೆನಾಲ್‌ಗೆ ಮಣ್ಣು ಮುಚ್ಚಿದರು. ಈ ವೇಳೆ ಜೆಸಿಬಿ ವಾಹನಗಳಿಗೆ ಪೊಲೀಸರು ತಡೆಯೊಡ್ಡಿದರು. ಪ್ರತಿಭಟನಕಾರರು ಮತ್ತು ಪೊಲೀಸರ ಮಧ್ಯೆ ಮಾತಿನ ಚಕಮಕಿ ನಡೆಯಿತು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವಿ.ಮರಿಯಪ್ಪ ಅವರು ಹಾಗೂ ಡಿವೈಎಸ್‌ಪಿ ಶೇಖರ್ ಮಧ್ಯಪ್ರವೇಶಿಸಿ ಪ್ರತಿಭಟನಕಾರರ ಮನವೊಲಿಸಿದರು. ತಾಲ್ಲೂಕಿನ ಡಿ.ರಾಂಪುರ ಸಮೀಪದ ಸುಂಕಾಪುರ ಗ್ರಾಮದ ಬಳಿ ಕಳೆದ ಗುರುವಾರ ಕಾಮಗಾರಿ ವಿರೋಧಿಸಿ ಪ್ರತಿಭಟನೆ ನಡೆಸಿ ನಾಲೆಗೆ ಮಣ್ಣು ಹಾಕಲಾಗಿತ್ತು. ಬಿಜೆಪಿ, ಜೆಡಿಎಸ್ ಶಾಸಕರು, ಮಾಜಿ ಶಾಸಕರು, ಜನಪ್ರತಿನಿಧಿಗಳು, ವಿವಿಧ ಮಠಗಳ ಸ್ವಾಮೀಜಿಗಳು, ರೈತರು ಒಟ್ಟಾಗಿ ಕೊಳವೆ ಮಾರ್ಗದ ಮೂಲಕ ಮಾಗಡಿಗೆ ನೀರು ತೆಗೆದುಕೊಂಡು ಹೋಗುವುದಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿದ್ದರು. ಸಾಂಕೇತಿಕವಾಗಿ ನಾಲೆಗೆ ಮಣ್ಣು ಹಾಕಿ ಆಕ್ರೋಶ ಹೊರ ಹಾಕಿದ್ದರು.

ಜಿಲ್ಲೆಗೆ ಹೆಚ್ಚುವರಿ ನೀರು ಹಂಚಿಕೆ ಮಾಡಿದ ನಂತರ ಮಾಗಡಿಗೆ ಹೇಮಾವತಿ ನಾಲೆಯಲ್ಲಿ ನೀರು ತೆಗೆದುಕೊಂಡು ಹೋಗಲು ನಮ್ಮ ವಿರೋಧವಿಲ್ಲ. ಲಿಂಕ್ ಕೆನಾಲ್ ಮೂಲಕ ಪೈಪ್‌ಲೈನ್‌ನಲ್ಲಿ ನೀರು ಬಿಡಲು ಒಪ್ಪುವುದಿಲ್ಲ. ಇದರಿಂದ ಜಿಲ್ಲೆಯ ಜನರಿಗೆ ಅನ್ಯಾಯವಾಗಲಿದೆ' ಎಂದು ಸೊಗಡು ಶಿವಣ್ಣ ಅಸಮಾಧಾನ ವ್ಯಕ್ತಪಡಿಸಿದರು.

ಉದಯವಾಹಿನಿ ಚಿತ್ರ

ಹೋಟೆಲ್ ಆಗಿರುವ ಬಸ್ ತಂಗುದಾಣ

• ಉದಯವಾಹಿನಿ ಮುಳಬಾಗಿಲು

ತಾಲ್ಲೂಕಿನ ಕುರುಡುಮಲೆಯಲ್ಲಿ ಪ್ರಯಾಣಿಕರಿಗೆ ನಿರ್ಮಿಸಿರುವ ಬಸ್ ತಂಗುದಾಣವನ್ನು ಸುತ್ತಮುತ್ತಲಿನ ಅಂಗಡಿಯವರು ಅತಿಕ್ರಮಣ ಮಾಡಿಕೊಂಡು ವಾಣಿಜ್ಯ ಮಳಿಗೆಗಳ ಸಂಕೀರ್ಣ ಮಾದರಿಯಲ್ಲಿ ಬದಲಿಸಿಕೊಂಡಿದ್ದು, ಪ್ರಯಾಣಿಕರು ಪರದಾಡುವಂತಾಗಿದೆ.

ರಾಜ್ಯದಲ್ಲಿ ರಾಜಕಾರಣಿಗಳ ಆಕರ್ಷಕ ಕೇಂದ್ರವಾಗಿರುವ ಕುರುಡುಮಲೆ ಪ್ರವಾಸಿ ತಾಣವಾಗಿದ್ದು, ಪ್ರತಿನಿತ್ಯ ಸಾವಿರಾರು ಮಂದಿ ದೇವಾಲಯಕ್ಕೆ ಬರುತ್ತಾರೆ.

ಜತೆಗೆ ಪ್ರತಿದಿನ ನೂರಾರು ವಿದ್ಯಾರ್ಥಿಗಳು ಹಾಗೂ ಪ್ರಯಾಣಿಕರು ನಾನಾ ಕಡೆಗಳಿಗೆ ಹೋಗಿ ಬರುತ್ತಾರೆ. ಸರ್ಕಾರದಿಂದ ಸುಸಜ್ಜಿತವಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣ ಹಾಗೂ ತಂಗುದಾಣ ನಿರ್ಮಿಸಿದೆ. ಆದರೆ, ಕೆಲವು ವ್ಯಾಪಾರಿಗಳು ತಂಗುದಾಣದಲ್ಲಿ ಹೋಟೆಲ್ ಹಾಗೂ ನಾನಾ ಬಗೆಯ ಅಂಗಡಿಗಳನ್ನು ಇಟ್ಟುಕೊಂಡು ವಾಣಿಜ್ಯ ಕೇಂದ್ರವನ್ನಾಗಿ ಪರಿವರ್ತಿಸಿಕೊಂಡಿದ್ದಾರೆ. ಇದರಿಂದ ಪ್ರಯಾಣಿಕರು ಬಯಲಲ್ಲೇ ನಿಲ್ಲುವ ಸ್ಥಿತಿ ಎದುರಾಗಿದೆ. ತಂಗುದಾಣದಲ್ಲಿ ಒಂದು ಕಡೆಗೆ ಕೆಲವರು ಗೋಡೆ ನಿರ್ಮಿಸಿ ಹೋಟೆಲನ್ನಾಗಿ ಮಾಡಿಕೊಂಡಿದ್ದರೆ, ಮತ್ತೊಂದು ಭಾಗವನ್ನು ಚಿಲ್ಲರೆ ಅಂಗಡಿ ಹಾಗೂ ದೋಸೆ ಕಾರ್ನರ್ ಆಗಿ ಬದಲಿಸಿಕೊಂಡು ಸಂಪೂರ್ಣವಾಗಿ ವ್ಯಾಪಾರಿಗಳು ತಂಗುದಾಣವನ್ನು ಆಕ್ರಮಿಸಿಕೊಂಡಿದ್ದಾರೆ.

ಉದಯವಾಹಿನಿ ಚಿತ್ರ

ವ್ಯಾಪಾರಿಗಳ ಅತಿಕ್ರಮಣ

ಲೋಕೋಪಯೋಗಿ ಇಲಾಖೆ ವತಿಯಿಂದ ಸುಮಾರು ವರ್ಷಗಳ ಹಿಂದೆ ಗ್ರಾಮದಲ್ಲಿ ಸುಸಜ್ಜಿತ ತಂಗುದಾಣ ನಿರ್ಮಿಸಿದ್ದರೆ, ಅದನ್ನು ವ್ಯಾಪಾರಿಗಳು ಅತಿಕ್ರಮಣ ಮಾಡಿಕೊಂಡು ವ್ಯಾಪಾರ ಕೇಂದ್ರಗಳಾಗಿ ಮಾಡಿಕೊಂಡಿದ್ದಾರೆ. ತಂಗುದಾಣದಲ್ಲಿ ಕೆಎಸ್‌ಆರ್‌ಟಿಸಿ ತಂಗುದಾಣ ಎಂಬ ನಾಮಫಲಕ ಬಿಟ್ಟರೆ ಉಳಿದ ಯಾವ ಮಾಹಿತಿಯೂ ಕಾಣದಂತೆ ಮುಚ್ಚಿ ಹಾಕಿದ್ದಾರೆ. ಹಾಗಾಗಿ ಯಾರಿಗೆ ದೂರು ನೀಡಬೇಕು ಎಂಬುದು ಪ್ರಯಾಣಿಕರಿಗೆ ತಿಳಿಯದಂತಾಗಿದೆ.

ಕಾವೇರಿ ತಂತ್ರಾಂಶದಲ್ಲಿ ತಾಂತ್ರಿಕ ಸಮಸ್ಯೆ : ನಾಗರಿಕರ ಪರದಾಟ

• ಉದಯವಾಹಿನಿ ಕೆಜಿಎಫ್

ಕಳೆದ ವರ್ಷ ಜಾರಿಗೆ ತಂದಿರುವ ಕಾವೇರಿ 2.0 ತಂತ್ರಾಂಶ ನೋಂದಣಿಗೆ ಸಂಬಂಧಿಸಿದಂತೆ ಕ್ರಾಂತಿಕಾರಿ ಬದಲಾವಣೆ ಆಗಿದ್ದರೂ ಸಹ ಕಳೆದ ಹಲವು ದಿನಗಳಿಂದ ಅಪ್‌ಗ್ರೇಡ್ ಮತ್ತು ವಿವಿಧ ತಾಂತ್ರಿಕ ಬದಲಾವಣೆಗಳಿಂದ ನಿರಂತರವಾಗಿ ಸರ್ವರ್‌ಡೌನ್ ಸಮಸ್ಯೆ ಎದುರಿಸುತ್ತಿದ್ದು, ಉಪ ನೋಂದಣಾಧಿಕಾರಿಗಳ ಕಚೇರಿಗೆ ಬರುವ ನಾಗರಿಕರು ಇನ್ನಿಲ್ಲದ ಸಂಕಷ್ಟ ಎದುರಿಸುವಂತಾಗಿದೆ.

2023ರ ಫೆಬ್ರವರಿಯಲ್ಲಿ ಪರಿಚಯಿಸಲಾಗಿರುವ ಕಾವೇರಿ 2.0 ತಂತ್ರಾಂಶದಲ್ಲಿ ಯಾವುದೇ ಸರ್ವರ್ ಸಮಸ್ಯೆ ಇರುವುದಿಲ್ಲ ಎಂದು ಹೇಳಲಾಗುತ್ತಿದ್ದರೂ ಸಹ ಆಗಿಂದಾಗ್ಗೆ ಸರ್ವರ್ ಕೈ ಕೊಡುತ್ತಿರುವುದರಿಂದ ದೂರದ ಊರುಗಳಿಂದ ಆಸ್ತಿ, ಸ್ಥಿರಾಸ್ತಿ, ಕರಾರು ಪತ್ರ, ಸಾಲ ತೀರುವಳಿ, ಋಣಭಾರ ರಾಹಿತ್ಯ ಪತ್ರ ಹಾಗೂ ಸಾಗುವಳಿ ಜಮೀನು ಒಪ್ಪಂದ ನೋಂದಣಿ ಕಾರ್ಯಗಳಿಗಾಗಿ ಬರುವ ಸಾರ್ವಜನಿಕರು ಕಚೇರಿ ಮುಂದೆ ಚಾತಕ ಪಕ್ಷಿಗಳಂತೆ ಗಂಟೆಗಟ್ಟಲೆ ಕಾದು ಬರಿಗೈಲಿ ವಾಪಸ್ಸಾಗಬೇಕಾದ ಪರಿಸ್ಥಿತಿ ಎದುರಾಗಿದೆ. ಸಾರ್ವಜನಿಕರು ನೇರವಾಗಿ ಸಿಟಿಜನ್ ಪೋರ್ಟಲ್‌ನಲ್ಲಿ ತಮ್ಮ ದಸ್ತಾವೇಜುಗಳನ್ನು ಅಪ್‌ಲೋಡ್ ಮಾಡಿ, ನಿಗದಿತ ದಿನಾಂಕದಂದು ತಮಗೆ ಅನುಕೂಲವಾಗುವ ಸಮಯಕ್ಕೆ ಸಮೀಪದ ಉಪ ನೋಂದಣಾಧಿಕಾರಿಗಳ ಕಚೇರಿಗೆ ಭೇಟಿ ನೀಡಿ ನೋಂದಣಿ ಕಾರ್ಯ ಪೂರ್ಣಗೊಳಿಸಿಕೊಳ್ಳಬಹುದಾಗಿತ್ತು. ಆದರೆ ಇಲಾಖೆ ಇತ್ತೀಚೆಗೆ ಕಾವೇರಿ 2.0 ತಂತ್ರಾಂಶದಲ್ಲಿ ದಿನಕ್ಕೊಂದು ಬದಲಾವಣೆ ಮಾಡುತ್ತಿದ್ದು, ಪೂರ್ವ ನಿಗದಿತವಾಗಿ ಸಾರ್ವಜನಿಕರು ತಮ್ಮ ದಸ್ತಾವೇಜುಗಳನ್ನು ಕಾವೇರಿ 2.0 ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಿ, ಉಪನೋಂದಣಾಧಿಕಾರಿಗಳ ಪರಿಶೀಲನೆ ಬಳಿಕ ನಿಗದಿತ ಶುಲ್ಕ ಪಾವತಿಸಿ, ದಿನಾಂಕವನ್ನು ಆಯ್ಕೆ ಮಾಡಿದ ಕೂಡಲೇ ತಾನೇ ತಾನಾಗಿ ಪ್ರದರ್ಶನವಾಗುವ ಸಮಯವನ್ನು ಆಯ್ಕೆ ಮಾಡಿಕೊಳ್ಳಬೇಕಾದ ಅನಿವಾರ್ಯತೆ ಎದುರಾಗಿದೆ.

ಉದಯವಾಹಿನಿ ಚಿತ್ರ

ಸರ್ವರ್ ಡೌನ್ ಸಮಸ್ಯೆ

ಇಷ್ಟೆಲ್ಲಾ ಹರಸಾಹಸ ವಾಡಿದ ಬಳಿಕ ಪೂರ್ವ ನಿರ್ಧಾರಿತ ಸಮಯಕ್ಕೆ ಉಪ ನೋಂದಣಾಧಿಕಾರಿಗಳ ಕಚೇರಿಗೆ ಹೋದರೆ ಅಲ್ಲಿ ಎದುರಾಗುವ ಸರ್ವರ್ ಡೌನ್ ಸಮಸ್ಯೆಯಿಂದ ಸಮಯಕ್ಕೆ ಸರಿಯಾಗಿ ನೋಂದಣಿ ಕಾರ್ಯ ಮಾಡಲು ಸಾಧ್ಯವಾಗದೇ ಕೆಲಸ ಕಾರ್ಯಗಳನ್ನು ಬಿಟ್ಟು ದೂರದ ಊರುಗಳಿಂದ ಬಂದಿರುವವರು ಇಲಾಖೆಗೆ ಹಿಡಿಶಾಪ ಹಾಕುತ್ತಾ, ಬರಿಗೈಲಿ ವಾಪಸ್ಸಾಗಿ, ಮತ್ತೊಂದು ದಿನ ನೋಂದಣಿ ದಿನಾಂಕ ನಿಗದಿಪಡಿಸುವ ಅನಿವಾರ್ಯತೆ ಎದುರಾಗಿದೆ. ಇಲಾಖೆ ಕೂಡಲೇ ಈ

ಅಂತರಾಳದಿಂದ...
EDITORIAL

ಎನ್‌ಎಚ್‌ಆರ್‌ಸಿಗೆ ಮಾನ್ಯತೆ ಪಡೆಯಲು

ಮಾನವ ಹಕ್ಕು ಸ್ಥಿತಿ ಸುಧಾರಿಸಲಿ

ಉದಯವಾಹಿನಿ ಚಿತ್ರ

ವಿಶ್ವಸಂಸ್ಥೆಯ ಮಾನವ ಹಕ್ಕುಗಳ ರಾಷ್ಟ್ರೀಯ ಸಂಸ್ಥೆಗಳ ಮೈತ್ರಿಕೂಟದ (ಜಿಎಎನ್‌ಎಚ್‌ಆರ್‌ಐ) ಮಾನ್ಯತೆಯು ಸತತ ಎರಡನೇ ವರ್ಷವೂ ಭಾರತದ ಮಾನವ ಹಕ್ಕುಗಳ ರಾಷ್ಟ್ರೀಯ ಆಯೋಗಕ್ಕೆ (ಎನ್‌ಎಚ್‌ಆರ್‌ಸಿ) ಕೈತಪ್ಪಿದೆ. ಎನ್‌ಎಚ್‌ಆರ್‌ಸಿಯ ಕಾರ್ಯನಿರ್ವಹಣೆ ಮತ್ತು ದೇಶದಲ್ಲಿನ ಮಾನವ ಹಕ್ಕುಗಳ ಸ್ಥಿತಿಗತಿಯ ಕುರಿತು ಬಿಎಎನ್‌ಎಚ್‌ಆರ್‌ಐ ತೃಪ್ತಿ ಹೊಂದಿಲ್ಲ ಎಂಬುದರ ಸೂಚನೆ ಇದು. ಜಿಎಎನ್‌ಎಚ್‌ಆರ್‌ಐಯಲ್ಲಿರುವ ಮಾನ್ಯತೆ ನೀಡಿಕೆ ಉಪಸಮಿತಿಯು (ಎಸ್‌ಸಿಎ) ಪರಿಶೀಲನೆ ಬಳಿಕ ಮಾನ್ಯತೆ ನೀಡುವುದನ್ನು ಮುಂದೂಡಿದೆ.

ಎನ್‌ಎಚ್‌ಆರ್‌ಸಿಯನ್ನು 'ಬಿ' ವರ್ಗಕ್ಕೆ ಸೇರಿಸಿ ಕೆಳದರ್ಜೆಗೆ ಇಳಿಸಬೇಕು ಎಂದು ಅಂತರರಾಷ್ಟ್ರೀಯ ಮಟ್ಟದ ಕೆಲವು ಸಂಸ್ಥೆಗಳು ಕೇಳಿದ್ದರೂ ಅದಕ್ಕೆ ಜಿಎಎನ್‌ಎಚ್‌ಆರ್‌ಐ ಒಪ್ಪಿಗೆ ಕೊಟ್ಟಿಲ್ಲ. 1999ರಲ್ಲಿ ಮಾನ್ಯತೆ ನೀಡಿಕೆ ಪ್ರಕ್ರಿಯೆ ಆರಂಭಗೊಂಡ ಬಳಿಕ 2016ರವರೆಗೆ ಎನ್‌ಎಚ್‌ಆರ್‌ಸಿ 'ಎ' ವರ್ಗದ ಸ್ಥಾನವನ್ನೇ ಹೊಂದಿತ್ತು. 2016ರಲ್ಲಿ ಮಾನ್ಯತೆ ನೀಡಿಕೆಯನ್ನು ಮುಂದೂಡಲಾಯಿತಾದರೂ 2017ರಲ್ಲಿ ಮಾನ್ಯತೆ ನೀಡಲಾಯಿತು.

> ಈ ಬಾರಿಯೂ ಮುಂದೂಡಿಕೆ ಏಕೆ ಆಯಿತು ಎಂಬುದನ್ನು ಅರ್ಥ ಮಾಡಿಕೊಳ್ಳಬಹುದು. 'ಸರ್ಕಾರದ ಹಸ್ತಕ್ಷೇಪ ಇಲ್ಲದೆ ಸ್ವತಂತ್ರವಾಗಿ ಕಾರ್ಯನಿರ್ವಹಿಸುವ ಸಾಮರ್ಥ್ಯ ಪಡೆದುಕೊಳ್ಳಲು ಬೇಕಾದ ಪರಿಸ್ಥಿತಿಯನ್ನು ಸೃಷ್ಟಿ ಮಾಡಿಕೊಳ್ಳುವಲ್ಲಿ ಎನ್‌ಎಚ್‌ಆರ್‌ಸಿ ವಿಫಲವಾಗಿದೆ ಎಂದು ಕಳೆದ ವರ್ಷ ಎಸ್‌ಸಿಎ ಹೇಳಿತ್ತು. ಎನ್.ಎಚ್‌ಆರ್‌ಸಿ ನಡೆಸುವ ತನಿಖೆಗಳಲ್ಲಿ ಪೊಲೀಸ್ ಅಧಿಕಾರಿಗಳು ಭಾಗಿಯಾಗುವುದನ್ನು ಹಿತಾಸಕ್ತಿ ಸಂಘರ್ಷ ಎಂದು ಅದು ಹೇಳಿದೆ.

ಈಗ ಸತತ ಎರಡು ವರ್ಷ ಮಾನ್ಯತೆಯನ್ನು ಅಮಾನತಿನಲ್ಲಿ ಇಡಲಾಗಿದೆ. ಮುಂದಿನ ಪರಾಮರ್ಶೆಯು ಈ ವರ್ಷದ ಕೊನೆಯಲ್ಲಿ ಅಥವಾ ಮುಂದಿನ ವರ್ಷದ ಆರಂಭದಲ್ಲಿ ನಡೆಯಲಿದೆ. ಈ ಬಾರಿ ಮಾನ್ಯತೆ ನೀಡಿಕೆಯನ್ನು ಮುಂದೂಡಲು ಕಾರಣವೇನು ಎಂಬುದನ್ನು ಬಹಿರಂಗಪಡಿಸಲಾಗಿಲ್ಲ, ಆದರೆ ಕಳೆದ ವರ್ಷ ಎಸ್‌ಸಿಎ ಕೊಟ್ಟ ಕಾರಣಸಿಬ್ಬಂದಿ ಮತ್ತು ನಾಯಕತ್ವದಲ್ಲಿ ವೈವಿಧ್ಯ ಇಲ್ಲ, ಶೋಷಣೆಗೆ ಒಳಗಾದ ಗುಂಪುಗಳನ್ನು ರಕ್ಷಿಸಲು ಬೇಕಾದಷ್ಟು ಕೆಲಸವನ್ನು ಮಾಡಿಲ್ಲ ಎಂದು ಹೇಳಲಾಗಿದೆ. ಅತಿ ದೊಡ್ಡ ಅಲ್ಪಸಂಖ್ಯಾತ ಸಮುದಾಯದ ಪ್ರತಿನಿಧಿ ಆಯೋಗದಲ್ಲಿ ಇಲ್ಲದಿರುವುದನ್ನು ಉಲ್ಲೇಖಿಸಿ ಹೀಗೆ ಹೇಳಿರಬಹುದು. ಸದಸ್ಯರಲ್ಲಿ ಒಬ್ಬರಾದ ರಾಜೀವ್ ಜೈನ್ ಅವರು ಅಲ್ಪಸಂಖ್ಯಾತ ಜೈನ ಸಮುದಾಯಕ್ಕೆ ಸೇರಿದವರು. ಆದರೆ, ಗುಪ್ತಚರ ವಿಭಾಗದ (ಐಬಿ) ನಿರ್ದೇಶಕ ಹುದ್ದೆಯಲ್ಲಿದ್ದ ಅವರು ಸರ್ಕಾರದ ಜೊತೆ ಗುರುತಿಸಿಕೊಂಡವರು. ತನಿಖಾ ವಿಭಾಗದ ಮಹಾ ನಿರ್ದೇಶಕ ಅಜಯ್ ಭಟ್ನಾಗರ್ ಅವರು ಸಿಬಿಐಯ ವಿಶೇಷ ನಿರ್ದೇಶಕ ಹುದ್ದೆಯಲ್ಲಿ ಇದ್ದವರು. ಇಂತಹ ವ್ಯಕ್ತಿಗಳು ಇರುವುದರಿಂದ ಆಯೋಗದ ಕಾರ್ಯನಿರ್ವಹಣೆಗೆ ತೊಡಕಾಗುತ್ತದೆ. ಆಯೋಗದ ವಿಶ್ವಾಸಾರ್ಹತೆಯ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ. ಹಾಗೆಯೇ, ನ್ಯಾಯಮೂರ್ತಿ (ನಿವೃತ್ತ) ಅರುಣ್ ಮಿಶ್ರಾ ಅವರನ್ನು ಆಯೋಗದ ಅಧ್ಯಕ್ಷರನ್ನಾಗಿ ನೇಮಿಸಿರುವುದು ಜಿಎಎನ್‌ಎಚ್‌ಆರ್‌ಐಗೆ ಸಮರ್ಥನೀಯ ಅನಿಸಿಲ್ಲ. ಮನುಸ್ಮೃತಿಯು ನ್ಯಾಯದ ತತ್ವವನ್ನು ಪ್ರತಿಪಾದಿಸುತ್ತದೆ. ಅದರಲ್ಲಿರುವ ಅಪರಾಧದ ತೀವ್ರತೆಗೆ ಅನುಗುಣವಾದ ಶಿಕ್ಷೆ ನೀಡಿಕೆಯು ಸಮರ್ಪಕವಾಗಿದೆ ಎಂದು ಎನ್‌ಎಚ್‌ಆರ್‌ಸಿ ಇತ್ತೀಚೆಗೆ ಪ್ರಕಟಿಸಿದ ಕರಪತ್ರದಲ್ಲಿ ಹೇಳಲಾಗಿತ್ತು. ಮನುಸ್ಮೃತಿಯನ್ನು ಸಮರ್ಥಿಸಿಕೊಳ್ಳುವ ಸಂಸ್ಥೆಯೊಂದು ಮಾನವ ಹಕ್ಕುಗಳ ಕುರಿತು ಸಮರ್ಪಕ ದೃಷ್ಟಿಕೋನ ಹೊಂದುವುದು ಕಷ್ಟವೇ. ಮಾನ್ಯತೆ ಮುಂದೂಡಿಕೆಯಿಂದಾಗಿ. ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಸಮಿತಿ ಮತ್ತು ಇತರ ಕೆಲವು ಸಮಿತಿಗಳಲ್ಲಿ ಮತ ಹಾಕುವ ಭಾರತದ ಹಕ್ಕು ಮೊಟಕಾಗಬಹುದು. ದೇಶದ ಮಾನವ ಹಕ್ಕುಗಳ ಸ್ಥಿತಿಗತಿಯತ್ತ ಅಂತರರಾಷ್ಟ್ರೀಯ ಸಮುದಾಯದ ದೃಷ್ಟಿ ಹರಿಯಬಹುದು. ಅಲ್ಪಸಂಖ್ಯಾತರನ್ನು ನಡೆಸಿಕೊಳ್ಳುವ ರೀತಿ, ಮಣಿಪುರದ ಪರಿಸ್ಥಿತಿ, ಟೀಕಾಕಾರರು ಮತ್ತು ಭಿನ್ನಮತೀಯರ ಹತ್ತಿಕ್ಕುವಿಕೆ. ರಾಷ್ಟ್ರೀಯ ಮಹಿಳಾ ಆಯೋಗದಂತಹ ಸಂಸ್ಥೆಗಳ ಪಕ್ಷಪಾತಿ ಧೋರಣೆಯು ದೇಶದಲ್ಲಿ ಮಾನವ ಹಕ್ಕುಗಳ ಸ್ಥಿತಿ ಹೇಗಿದೆ ಎಂಬುದಕ್ಕೆ ಕನ್ನಡಿ ಹಿಡಿಯುತ್ತದೆ. ಈ ಎಲ್ಲವುಗಳನ್ನು ಸರಿಪಡಿಸುವ ಮೂಲಕ ಎನ್‌ಎಚ್‌ಆರ್‌ಸಿಗೆ ಜಿಎಎನ್‌ಎಚ್‌ಆರ್‌ಐ ಮಾನ್ಯತೆಯನ್ನು ಪಡೆಯಬೇಕೇ ವಿನಾ ರಾಜತಾಂತ್ರಿಕ ಪ್ರಯತ್ನದ ಮೂಲಕ ಅಲ್ಲ.

ಮಹಾಭಾರತ

ದ್ರೋಣಪರ್ವ

• ಹಿಂದಿನ ಸಂಚಿಕೆಯಿಂದ

ಜಯದ್ರಥನಿಂದಾಗಿ ಪಾಂಡವರಾರೂ ಒಳಕ್ಕೆ ಬರಲಾಗಲಿಲ್ಲವೆಂದು ಅವನಿಗೆ ಬಹುಶಃ ಗೊತ್ತಾಗಿರಬೇಕು. ಹೊರಕ್ಕೆ ಹೋಗುವ ಬಗೆ ತಿಳಿಯಲಿಲ್ಲ. ಇಡೀ ವ್ಯೂಹವನ್ನು ನಾಶಮಾಡಿಬಿಡುವುದಾದರೆ ಆ ಸಮಸ್ಯೆಯೇ ಇರುವುದಿಲ್ಲ! ಜಯದ್ರಥನೊಂದಿಗೆ ಘೋರವಾಗಿ ಹೋರಾಡಿದನು. ಇವನೊಬ್ಬನನ್ನು ಸೋಲಿಸಿದರೆ ಪಾಂಡವರು ಒಳಗೆ ಬರಬಹುದು. ಆದರೆ ಅವನು ಆನೆಗಳ ಸಮೂಹವನ್ನೇ ಅಲ್ಲಿ ತಂದು ದಾರಿಯನ್ನು ಮುಚ್ಚಿಬಿಟ್ಟಿದ್ದನು. ಅಭಿಮನ್ಯುವು ಈಗ ಆರು ಮಹಾರಥಿಕರೊಡನೆ ಒಬ್ಬನೇ ಹೋರಾಡಬೇಕಾಯಿತು. ಅವರೆಲ್ಲರನ್ನೂ ಸೋಲಿಸಿ ಹಿಮ್ಮೆಟ್ಟುವಂತೆ ಮಾಡಿದನು. ಬೃಹದ್ಬಲನ ಹೃದಯವನ್ನು ಚೂಪಾದ ಒಂದೇ ಬಾಣದಿಂದ ಭೇದಿಸಲು, ಅವನು ಸತ್ತು ಉರುಳಿದನು. ರಾಧೇಯನ ಮೈಯೆಲ್ಲ ರಕ್ತಸಿಕ್ತವಾಯಿತು. ದುಶ್ಶಾಸನನ ಮಗ ಮುಂದೆ ಬರಲು ಅಭಿಮನ್ಯುವು, ''ಹೆದರಿ ಓಡಿದ ಹೇಡಿ ಆ ನಿಮ್ಮಪ್ಪನಿಗಿಂತ ನೀನೇ ವಾಸಿ. ಬಾ ಸೆಣೆಸೋಣ ಎಂದನು. ಅಷ್ಟರಲ್ಲಿ ಅಶ್ವತ್ಥಾಮನೂ ಅಲ್ಲಿಗೆ ಬಂದನು. ಶಕುನಿಯು ರಾಜನ ಬಳಿ ಬಂದು, ''ಈ ಹುಡುಗನನ್ನು ನಿಯಂತ್ರಿಸುವುದಾಗಲಿ ಕೊಲ್ಲುವುದಾಗಲಿ ಸಾಧ್ಯವಾಗುತ್ತಿಲ್ಲ. ಅವನನ್ನು ಕೊಲ್ಲಲ್ಲೇ ಬೇಕು; ನಾವೆಲ್ಲರೂ ಒಟ್ಟಾಗಿ ಸೇರಿ ಕೊಲ್ಲೋಣ ಎಂದನು. ರಾಧೇಯನು ದ್ರೋಣನಿಗೆ, ''ಈ ಅರ್ಜುನನ ಮಗ ನಮ್ಮನ್ನೆಲ್ಲ ಕೊಲ್ಲುವುದರೊಳಗೆ ಅವನನ್ನು ಕೊಲ್ಲುವುದು ಹೇಗೆಂದು ಹೇಳಿರಿ. ರಾಜನ ಬಳಿ ಇರುವುದು ನನ್ನ ಕರ್ತವ್ಯವಾದ್ದರಿಂದ ನಾನು ಇಲ್ಲಿದ್ದೇನೆ; ಇಲ್ಲವಾದರೆ ಹೊರಟುಹೋಗುತ್ತಿದ್ದೆ; ಅಭಿಮನ್ಯುವಿನ ಬಾಣಗಳು ನನ್ನನ್ನು ಅಷ್ಟೊಂದು ನೋಯಿಸುತ್ತಿವೆ ಎಂದುದಕ್ಕೆ ಅವನು, ''ನನ್ನ ಅರ್ಜುನನ ಮಗನ ಸಮಾನರು ಯಾರೂ ಇಲ್ಲ. ಅವನ ಬಾಣಗಳಿಂದ ನೊಂದಿದ್ದರೂ, ಅವನನ್ನು ಶ್ಲಾಘಿಸದೆ ವಿಧಿಯಿಲ್ಲವಾಗಿದೆ. ಅವನನ್ನು ಕೊಲ್ಲಬೇಕಾದರೆ ಅವನ ಅಭೇದ್ಯವಾದ ಕವಚವನ್ನು ಭೇದಿಸಬೇಕು.

ರಥ ಬಿಲ್ಲುಬಾಣಗಳು ಅವನ ಬಳಿ ಇರುವವರೆಗೂ ಯಾರೂ ಅವನನ್ನು ಸೋಲಿಸಲರರು. ಆದ್ದರಿಂದ ಅವನ ರಥವನ್ನೂ ಬಿಲ್ಲನ್ನೂ ನಾಶಮಾಡಿರಿ. ಅವನು ನೋಡುತ್ತಿಲ್ಲದ ಸಮಯವನ್ನು ಸಾಧಿಸಿ ಬಿಲ್ಲಿನ ನಾಣನ್ನು ಕತ್ತರಿಸಿ ಎಂದನು. ಅಲ್ಲಿಂದ ಹೊರಟುಹೋದ ರಾಧೇಯನು ತನ್ನ ಜೀವಮಾನದಲ್ಲಿ ಎಂದೂ ಮಾಡಿರದ ಹೀನ ಕಾರ್ಯವನ್ನು ಮಾಡಿದನು–ಅಭಿಮನ್ಯುವಿನ ಹಿಂದುಗಡೆ ಹೋಗಿ ತನ್ನ ಬಾಣದಿಂದ ಅವನ ಬಿಲ್ಲನ್ನು ಕತ್ತರಿಸಿದನು. ಯುದ್ಧದಲ್ಲಿ ಅತ್ಯಂತ ತುಚ್ಛವಾದ ಇಂತಹ ಕೆಲಸ ಮಾಡಿದವರಾರೆಂದು ನೋಡಲು ಮಗುವು ಹಿಂದಕ್ಕೆ ತಿರುಗಿದ ಕೂಡಲೇ ದ್ರೋಣನು ಅಭಿಮನ್ಯುವಿನ ರಥದ ಕುದುರೆಗಳನ್ನು ಕೊಂದನು; ಕೃಪನು ಅವನ ಸಾರಥಿಯನ್ನು ಕೊಂದನು. ಕೃತವರ್ಮ, ಅಶ್ವತ್ಥಾಮ, ದುಶ್ಶಾಸನನ ಮಗ ಈ ಮೂವರೂ ಅಭಿಮನ್ಯುವನ್ನು ಬಾಣಗಳಿಂದ ಘಾತಿಸತೊಡಗಿದರು. ಆರು ಮಹಾರಥಿಕರು, ರಥರಹಿತನಾದ, ಬಿಲ್ಲೂ ಕೈಯಲ್ಲಿಲ್ಲದ ಮಗುವಿನ ಮೇಲೆ ನಿರ್ದಯರಾಗಿ ಪ್ರಹಾರ ಮಾಡಿದರು.

ಮುಂದುವರಿಯುವುದು...

ಭಾರತರತ್ನ, ಮಾಜಿ ಪ್ರಧಾನಿ ದಿ.ರಾಜೀವ್ ಗಾಂಧಿರವರ 33ನೇ ವರ್ಷದ ಪುಣ್ಯಸ್ಮರಣೆ

• ಉದಯವಾಹಿನಿ, ವಿಶೇಷ



ಉದಯವಾಹಿನಿ ಚಿತ್ರ

ಶ್ರೀ ರಾಜೀವ್ ಗಾಂಧಿಯವರು 1944 ಆಗಸ್ಟ್ 20 ರಂದು ಮುಂಬೈಯಲ್ಲಿ ಜನಿಸಿದರು. ತಂದೆ ಫಿರೋಜ್ ಗಾಂಧಿ ತಾಯಿ ಇಂದಿರಾಗಾಂಧಿ. ರಾಜೀವ್ ಗಾಂಧಿಯವರ ವಿದ್ಯಾಭ್ಯಾಸ ಡೆಹರಾಡೂನ್‌ನ ಬೆಲ್ ಹಮ್ ವಿದ್ಯಾಲಯದಲ್ಲಿ ನಡೆಯಿತು. ಆ ಶಾಲೆಯಲ್ಲಿ ಐ ಎನ್ ಸಿ ಪರೀಕ್ಷೆಯಲ್ಲಿ ತೇರ್ಗಡೆಯಾಗಿ ಹೆಚ್ಚಿನ ಶಿಕ್ಷಣಕ್ಕಾಗಿ ಇಂಗ್ಲೆಂಡಿನ ಕೆಂಬ್ರಿಡ್ಜ್ ಶಾಲೆಗೆ ಸೇರಿಕೊಂಡರು. ಅಲ್ಲಿ ವ್ಯಾಸಂಗ ಮಾಡುತ್ತಿದ್ದಾಗ ಸೋನಿಯರವರ ಪರಿಚಯವಾಗಿ ಪ್ರೀತಿ ಬೆಳೆಯಿತು. ರಾಜೀವ್ ಗಾಂಧಿಗೆ ಮೊದಲಿಂದಲೂ ಪೈಲೆಟ್ ಆಗಬೇಕೆಂಬ ಆಸೆ ಇತ್ತು ಆ ಮೇರೆಗೆ ಪೈಲೆಟ್ ತರಬೇತಿ ಶಿಕ್ಷಣ ಪಡೆದು ಪೈಲೆಟ್ ಆದರು. 1968 ರಲ್ಲಿ ಸೋನಿಯಾ ರವರೊಂದಿಗೆ ವಿವಾಹವಾಗಿ ರಾಹುಲ್ ಮತ್ತು ಪ್ರಿಯಾಂಕಾ ಮಕ್ಕಳಿದ್ದಾರೆ.

ಸಹೋದರ ಸಂಜಯ್ ಗಾಂಧಿ ರಾಜಕೀಯ ಪ್ರವೇಶಿಸಿ ಲೋಕಸಭಾ ಸದಸ್ಯರಾಗಿದ್ದರು. ಆದರೆ ದುರ್ದೈವ 1980 ಜೂನ್ 23 ರಂದು ಸಂಜಯ್ ಗಾಂಧಿ ವಿಮಾನ ಅಪಘಾತದಲ್ಲಿ ತೀರಿಕೊಂಡರು.ಈ ಕಾರಣದಿಂದಾಗಿ ರಾಜೀವ್ ಗಾಂಧಿ ರಾಜಕೀಯವನ್ನು ಪ್ರವೇಶಿಸಬೇಕಾಯಿತು.

ಸಂಜಯ್ ಗಾಂಧಿ ಸಾವಿನಿಂದಾಗಿ ಉತ್ತರಪ್ರದೇಶದ ಅಮೇಥಿ ಕ್ಷೇತ್ರದಿಂದ ನಡೆದ ಲೋಕಸಭೆಯ ಮರುಚುನಾವಣೆಯಲ್ಲಿ ರಾಜೀವ್ ಗಾಂಧಿ 1981 ರಲ್ಲಿ ಆಯ್ಕೆಯಾದರು. ಹೀಗಿರುವಲ್ಲಿ 1984 ಅಕ್ಟೋಬರ್ 31 ರಂದು ತನ್ನ ತಾಯಿ ಪ್ರಧಾನಮಂತ್ರಿ ಇಂದಿರಾಗಾಂಧಿರವರು ತಮ್ಮ ಸ್ವಂತ ಭದ್ರತಾ ಸಿಬ್ಬಂದಿಗಳ ಗುಂಡಿಗೆ ಬಲಿಯಾದರು. ಆ ಬಳಿಕ ರಾಜೀವ್ ಗಾಂಧಿಯವರು ಹಂಗಾಮಿ ಪ್ರಧಾನಮಂತ್ರಿಯಾಗಿ, ನಂತರ 1985 ಜನವರಿ ತಿಂಗಳಲ್ಲಿ ನಡೆದ ಮಹಾಚುನಾವಣೆಯಲ್ಲಿ ಕಾಂಗ್ರೇಸ್ ಪಕ್ಷ ಭಾರಿ ಬಹುಮತಗಳಿಸಿ ಸರ್ಕಾರ ರಚಿಸುವ ಹಕ್ಕು ಪಡೆಯಿತು. ರಾಜೀವ್ ಗಾಂಧಿಯವರು ಸರ್ವಾನುಮತದಿಂದ ಸಂಸದೀಯ ಪಕ್ಷದ ನಾಯಕರಾಗಿ ಪ್ರಧಾನಮಂತ್ರಿ ಸ್ಥಾನವನ್ನು ಉಳಿಸಿಕೊಂಡರು. ರಾಜೀವ್ ಗಾಂಧಿರವರು ದೂರದೃಷ್ಟಿ ಉಳ್ಳವ ನಾಯಕರಾಗಿದ್ದು, ಭಾರತವನ್ನು 21ನೇ ಶತಮಾನಕ್ಕೆ ಕೊಂಡೊಯ್ಯುವ ಪ್ರಾಮಾಣಿಕ ಪ್ರಯತ್ನ ಮಾಡಿದರು.

ದೇಶದಲ್ಲಿ ಹಲವಾರು ಸಮಸ್ಯೆಗಳಿದ್ದವು. ಪಂಜಾಬಿನಲ್ಲಿ ಆಕಾಲಿದಳದ ಅತೃಪ್ತಿ ಪಂಜಾಬ್ ಸರ್ಕಾರವನ್ನು ವಜಾ ಮಾಡಬೇಕಾಯಿತು ಶ್ರೀಲಂಕಾದ ಸಮಸ್ಯೆ, ನಿರಾಶ್ರಿತರ ಸಮಸ್ಯೆ ಆದರೆ ಅವರು ದಿಟ್ಟತನದಿಂದ ಎಲ್ಲಾ ಸಮಸ್ಯೆಗಳನ್ನು ಎದುರಿಸಿದರಲ್ಲದೇ ರಾಷ್ಟ್ರದ ಪ್ರಗತಿಗಾಗಿ ಅನೇಕ ಯೋಜನೆಗಳನ್ನು ರೂಪಿಸಿದರು.

ರಾಷ್ಟ್ರೀಯ ಶಿಕ್ಷಣ ಪದ್ಧತಿಯನ್ನು ಜಾರಿಗೆ ತಂದರು. ಶಿಕ್ಷಣ ಕ್ರಮದಲ್ಲಿ ಆಧುನೀಕತೆ ತರಲು ಹಾಗೂ ವಿಜ್ಞಾನ ಮತ್ತು ತಾಂತ್ರಿಕ ಕ್ಷೇತ್ರಗಳ ಬೆಳವಣಿಗೆಗೆ ಪ್ರೋತ್ಸಾಹ, ನೆರವು ನೀಡಿದರು. ದೇಶದ ರಕ್ಷಣಾ ಬಲವನ್ನು ಹೆಚ್ಚಿಸಲು ಹಲವಾರು ಯೋಜನೆಗಳನ್ನು ರೂಪಿಸಿದರು.

1986 ನವಂಬರ್ 15 ರಿಂದ 17 ರವರೆಗೆ ಮೂರು ದಿನ ಬೆಂಗಳೂರಿನಲ್ಲಿ ಏಳು ರಾಷ್ಟ್ರಗಳ ಮುಖಂಡರ ಜೊತೆಗೂಡಿ ಸಾರ್ಕ್ ಸಮ್ಮೇಳನ ರಾಜೀವ್ ಗಾಂಧಿ ಅವರ ಅಧ್ಯಕ್ಷತೆಯಲ್ಲಿ ಬಹಳ ಯಶಸ್ವಿಯಾಗಿ ನಡೆಯಿತು. ಇಂಥಹ ಯುವ ಚೇತನ, ಚೈತನ್ಯ ಪುರುಷ, ಉತ್ತಮ ದೂರದೃಷ್ಟಿಉಳ್ಳ ರಾಜೀವ್ ಗಾಂಧಿಯವರ 33 ನೇ ವರ್ಷದ ಪುಣ್ಯಸ್ಮರಣೆಯ ದಿನವಾದ ಇಂದು ಸ್ಮರಿಸಿ ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿಯು ದೊರಕಲೆಂದು ಭಾರತೀಯರಾದ ನಾವೆಲ್ಲರೂ ಆ ಭಗವಂತನಲ್ಲಿ ಪ್ರಾರ್ಥಿಸೋಣ.

ಕಲಾ ಸಾಹಿತ್ಯ

ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

ರಾಜೀವ್ ಗಾಂಧಿಯವರ ಹತ್ಯೆಗೆ ರೂಪಿಸಿದ ಮೂರು ಸಂಚುಗಳು

- ಗಾಂಧಿ ಜಯಂತಿ ದಿನವಾದ ಅಕ್ಟೋಬರ್ 2, 1986 ರಂದು ರಾಜ್ ಘಾಟ್ ನಲ್ಲಿ ಗಾಂಧೀಜಿ ಸಮಾಧಿಗೆ ರಾಷ್ಟ್ರಪತಿ ಶ್ರೀ ಆರ್. ವೆಂಕಟರಾಮನ್ ಅವರ ಜೊತೆ ಪುಷ್ಪಗುಚ್ಛ ಇರಿಸುವಾಗ ಒಬ್ಬ ಪಂಜಾಬ್ ಉಗ್ರಗಾಮಿ ಪ್ರೇಮ್ ಚಂದ್ ಸಿಂಗ್ ಎಂಬುವನು ಮೂರು ದಿವಸ ಮುಂಚೆ ರಾಜಘಾಟ್ ನ ಒಂದು ಮರದ ಪೊದೆಯಲ್ಲಿ ಕುಳಿತು, ತನ್ನ ಪ್ರಾಣದ ಮೇಲಿನ ಹಂಗನ್ನು ತೊರೆದು ಗುಂಡನ್ನು ಆರಿಸಿದನು. ಕೊನೆಗೆ ಆ ಗುಂಡು ರಾಜೀವ್ ಗಾಂಧಿಗೆ ತಗಲದೆ ಅದೃಷ್ಟವಶಾತ್ ಬದುಕುಳಿದರು.
- 1987 ಆಗಸ್ಟ್ 5 ರಂದು ಶ್ರೀಲಂಕಾಗೆ ರಾಜೀವ್ ಗಾಂಧಿಯವರು ಭೇಟಿಕೊಟ್ಟಾಗ ಶ್ರೀಲಂಕಾ ಅಧ್ಯಕ್ಷ ಶ್ರೀ ಜಯವರ್ಧನೆ ಅವರ ಜೊತೆ ಮಿಲಿಟರಿ ಪಡೆಯ ಪೆರೇಡ್ ವೀಕ್ಷಣೆ ಮಾಡುತ್ತಿರಬೇಕಾದರೆ ಒಬ್ಬ ಮಿಲಿಟರಿ ಸೈನಿಕ ತನ್ನಲ್ಲಿದ್ದ ರೈಫಲ್ ಭಟ್ ನಲ್ಲಿ ತಲೆಗೆ ಹೊಡೆಯಲು ಹೋದನು ಆದರೆ ರಾಜೀವ್ ಗಾಂಧಿಯವರ ತಲೆಗೆ ಬೀಳುವ ಬದಲು ಭುಜಕ್ಕೆ ಬಿದ್ದು ಅದೃಷ್ಟವಶಾತ್ ಪಾರಾದರು.
- 3. 1991 ಮೇ 21ರಂದು ಚುನಾವಣಾ ಪ್ರಚಾರಕ್ಕಾಗಿ ರಾಜೀವ್ ಗಾಂಧಿಯವರು ತಮಿಳುನಾಡಿನ ಶ್ರೀ ಪೇರಂಬೂರುನಲ್ಲಿ ಪ್ರವಾಸ ಕೈಗೊಂಡಿದ್ದಾಗ ಸಭೆಯೊಂದರಲ್ಲಿ ಭಾಷಣ ಮಾಡಲು ವೇದಿಕೆಯ ಸಮೀಪ ಬರುತ್ತಿರುವಾಗ ಮಾನವ ಬಾಂಬ್ ನ ದಾಳಿಗೆ ಸಿಲುಕಿ ಸಾವನ್ನಪ್ಪಿ ಹುತಾತ್ಮರಾದರು. ಕಡೆಗಾಲಕ್ಕೆ ಮೂರನೇ ಸಂಚುಗೆ ಬಲಿಯಾಗಿಯೇ ಬಿಟ್ಟರು. ಭಾರತ ಸರ್ಕಾರ 1991 ಜೂನ್ 17 ರಂದು ರಾಜೀವ್ ಗಾಂಧಿಯವರಿಗೆ ಮರಣೋತ್ತರವಾಗಿ ಭಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಿತು.

ಕಳಪೆ ಕಾಮಗಾರಿಯಿಂದ ಯೋಜನೆಗೆ ಗ್ರಹಣ ನೀರು

• ಉದಯವಾಹಿನಿ, ಬೆಂಗಳೂರು

ಬರ ಪೀಡಿತ ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಬೆಂಗಳೂರು ಗ್ರಾಮಾಂತರ ಸೇರಿ ಬಯಲು ಸೀಮೆ ಜಿಲ್ಲೆಗಳಿಗೆ ಶಾಶ್ವತ ಕುಡಿಯುವ ನೀರು ಕಲ್ಪಿಸುವ ಕನಸು ಬಿತ್ತಿದ್ದ ಎತ್ತಿನಹೊಳೆ ಯೋಜನೆ ಹಳ್ಳ ಹಿಡಿದಿದೆ. ದಶಕದಿಂದ ಯೋಜನೆ ವೆಚ್ಚ ಹೆಚ್ಚುತ್ತಿದೆಯೇ ಹೊರತು ಕಾಮಗಾರಿ ಪೂರ್ಣಗೊಳ್ಳುತ್ತಿಲ್ಲ.

ಇದರಿಂದಾಗಿ ಈ ವರ್ಷವೂ ಫಲಾನುಭವಿಗಳ ಜಿಲ್ಲೆಗಳಿಗೆ ಎತ್ತಿನಹೊಳೆ ನೀರು ಹರಿಯುವುದಿಲ್ಲ ಎಂಬ ಕಟುಸತ್ಯ ಬಯಲಾಗಿದೆ.

ಸಂಘ–ಸಂಸ್ಥೆ, ಪರಿಸರವಾದಿಗಳ ವಿರೋಧದ ನಡುವೆಯೇ 2008ರಲ್ಲಿ ಅಂದಿನ ಸರ್ಕಾರ 8 ಸಾವಿರ ಕೋಟಿ ರೂ. ಮೊತ್ತದ ಎತ್ತಿನಹೊಳೆ ಯೋಜನೆಗೆ ಮಂಜೂರಾತಿ ನೀಡಿತ್ತು. 5 ವರ್ಷಗಳಲ್ಲಿ ಯೋಜನೆ ಪೂರ್ಣಗೊಳಿಸುವ ಭರವಸೆಯೊಂದಿಗೆ ಕಾಮಗಾರಿಗೆ ಚಾಲನೆ ದೊರೆಯಿತು. ನಂತರ ಬಂದ ಕಾಂಗ್ರೇಸ್ ಸರ್ಕಾರ ಯೋಜನೆ ವೆಚ್ಚವನ್ನು 13 ಸಾವಿರ ಕೋಟಿ ರೂ.ಗೆ ಪರಿಷ್ಕರಿಸಿ ಮಂಜೂರಾತಿ ನೀಡಿತ್ತು. ಯೋಜನೆಯ ಪ್ರಮುಖ ಅಂಶಗಳಾದ ಏತ ಕಾಮಗಾರಿ ಮತ್ತು ಕಾಲುವೆ ನಿರ್ವಣದ ಕಾಮಗಾರಿಗೆ ಚುರುಕು ನೀಡಿತ್ತು. ಆದರೆ ಆರಂಭದ ಉತ್ಸಾಹ ದಿನಕಳೆದಂತೆ ಕುಗ್ಗಲಾರಂಭಿಸಿತು. ತರುವಾಯ ಬಂದ ಮೈತ್ರಿ ಸರ್ಕಾರ ಆದ್ಯತೆ ನೀಡದ ಕಾರಣ ಯೋಜ

ಲೋಕಾಯುಕ್ತರ ಸಭೆ ಸಾರ್ವಜನಿಕರ ಅಹವಾಲು ಸ್ವೀಕಾರ

ಯಾವೆಲ್ಲಾ ಇಲಾಖೆಯಿಂದ ಸೌಲಭ್ಯ ಮರಳಿ ಹೋಗಿದೆ, ಏಕೆ ಹೋಗಿದೆ ಎಂಬ ಮಾಹಿತಿ ತಿಳಿಯುತ್ತದೆ: ಲೋಕಾಯುಕ್ತ

• ಉದಯವಾಹಿನಿ, ಮುದ್ದೇಬಿಹಾಳ

ಉದಯವಾಹಿನಿ ಚಿತ್ರ

ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆ

ಲೋಕಾಯುಕ್ತರ ಸಭೆ ಮಾಡುವ ಉದ್ದೇಶ ಸರಕಾರ ದಿಂದ ಬರುವಂತಹ ಸೌಲಭ್ಯಗಳು ಯಾವೆಲ್ಲಾ ಇ ಲಾಖೆಗಳಿಂದ ಏನೆಲ್ಲಾ ಸೌಲಭ್ಯ ಬಂದಿದೆ ಮತ್ತು ಸಮರ್ಪಕವಾಗಿ ಫಲಾನುಭವಿಗಳಿಗೆ ತಲುಪಿದ್ದರ ಬಗ್ಗೆ ಮತ್ತು ಯಾವೆಲ್ಲಾ ಇಲಾಖೆಯಿಂದ ಸೌಲಭ್ಯ ಮರಳಿ ಹೋಗಿದೆ ಏಕೆ ಹೋಗಿದೆ ಎಂಬ ಮಾಹಿತಿ ತಿಳಿ ಯುತ್ತದೆ ಎಂದು ಲೋಕಾಯುಕ್ತ ಎಸ್ಪಿ ಟಿ .ಮಲ್ಲೇಶ ಹೇಳಿದರು ಅವರು ಮಂಗಳವಾರ ಮುದ್ದೇಬಿಹಾಳ ತಹಶೀಲ್ದಾರ ಕಚೇರಿಯ ಸಭಾ ಭವನದಲ್ಲಿ ತಾಲ್ಲೂಕಿನ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆ, ಸಾರ್ವಜನಿಕ ಅಹವಾಲು ಸ್ವೀಕಾರ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು ರೈತರಿಗೆ, ಕೃಷಿ ಇಲಾಖೆ , ತೋಟಗಾರಿಕೆ, ಅರಣ್ಯ ಇಲಾಖೆಯಿಂದ ಏನೆಲ್ಲಾ ಸೌಲಭ್ಯ ಬಂದಿವೆ ಈ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು ಸಭೆಯ ಉದ್ದೇಶ ಸಾರ್ವಜನಿಕರಿಗೆ ಅನುಕೂಲ ಆಗಬೇಕೆಂಬುದಾಗಿದೆ ಎಂದರು. ಸಭೆಯಲ್ಲಿ ಪುರಸಭೆ ಮುಖ್ಯಾಧಿಕಾರಿ ಬಸವರಾಜ ಬಳ ಗಾನೂರ ಅವರಿಗೆ ವಿಜಯಪುರ ಲೋಕಾ ಯುಕ್ತ ಅಧಿಕಾರಿಗಳು ಮುದ್ದೇಬಿಹಾಳ ಪಟ್ಟಣ ನಗರ ಸ್ವಚ್ಚತಾ ಕುರಿತು ತರಾಟೆಗೆ ತೆಗೆದುಕೊಂಡು ಪ್ರಸಂಗ ಜರುಗಿತು ಕಸ ತಾಜ್ಯ ಘಟಕ ವಿಲೇವಾರಿ ಬಗ್ಗೆ ಮಾಹಿತಿ ಪಡೆದ ಅಧಿಕಾರಿಗಳು ಮುದ್ದೇಬಿಹಾಳ ಪಟ್ಟಣದ ರಸ್ತೆ ಚರಂಡಿಗಳು ನಗರ ಸ್ವಚ್ಚತೆ ಇಲ್ಲ ನೀವು ಏನು ಮಾಡುತ್ತಿದ್ದಿರಿ ಎಂದಾಗ ಬಸವರಾಜ ಬಳಗಾನೂರ ನಾನು ಹೊಸದಾಗಿ ಚುನಾವಣಾ ನಿಮಿತ್ತ ಬಂದಿದ್ದೇನೆ ಎಂದಾಗ ಪುರಸಭೆ ಆರೋಗ್ಯ ಅಧಿಕಾರಿ ಮಹಾಂತೇಶ ಕಟ್ಟಿಮನಿ ಸಮಜಾಯಿಷಿ ನೀಡಲು ಬಂದಾಗ ಪುರಸಭೆಯಲ್ಲಿ 60 ಜನ ಪೌರ ಕಾರ್ಮಿಕರು ವಾಹನ ಟ್ರಾಕ್ಟರ್ ಗಳು ಇದ್ದರು ನಗರ ಸ್ವಚ್ಚತೆಗೆ ಆದ್ಯತೆ ನೀಡಿ ಲ್ಲವೆಂದು ತರಾಟೆಗೆ ತೆಗೆದುಕೊಂಡರು ಈ ಹಿಂದೆ ಪುರಸಭೆ ಗೆ ಭೇಟಿ ನೀಡಿ ಪುರಸಭೆ ಸ್ವಚ್ಚತೆ ಬಗ್ಗೆ ಮಾಡುವ ಬಗ್ಗೆ ಹೇಳಿದ್ದನ್ನು ಇಲ್ಲಿ ನೆನಪಿಸಿದರು.

ಕೆಬಿಜೆಎನ್‌ಎಲ್ ಅಧಿಕಾರಿ ಅಶೋಕ ಬಿರಾದಾರ ಶಿ ವಾಜಿ ಬಿರಾದಾರ ತಾಲ್ಲೂಕಿನಲ್ಲಿ ಎಷ್ಟು ಕರೆ ತುಂಬಿದ್ದರೆಂಬ ಪ್ರಶ್ನೆಗೆ ಈಗಾಗಲೇ ಸಿಂದಗಿ ತಾಲ್ಲೂಕಿನಲ್ಲಿ 18 ಕೆರೆಗಳ ಪೈಕಿ 8 ಕರೆಯನ್ನು ತುಂಬಲಾಗಿದೆ ಇನ್ನೂ ಎರಡು ದಿನ ದ ನಂತರ ಮುದ್ದೇಬಿಹಾಳ ತಾಲ್ಲೂಕಿನ ಕರೆಗಳನ್ನು ತುಂ ಬಲಾಗುತ್ತದೆ ಎಂದರು. ಕುಡಿಯುವ ನೀರಿನ ಸಮಸ್ಯೆ ಕುರಿತು ಮಾತನಾಡಿದ ನೀರು ಸರಬರಾಜು ಇಲಾಖೆಯ ಅಧಿಕಾರಿ ಆರ್ ಎಸ್ ಹಿರೇ ಗೌಡರ ಕುಡಿಯುವ ನೀರಿನ ಸಮಸ್ಯೆ ತಾಲ್ಲೂಕಿನಲ್ಲಿ ಇಲ್ಲ ಅಂತರಜಲ ಮಟ್ಟದ ಕುಸಿತ ಇದ್ದಲ್ಲಿ ಅದನ್ನು ಸರಿಪಡಿಸಿ ನೀರು ಪೂರೈಕೆ ಮಾಡಲಾಗುತ್ತದೆ ಎಂದರು

ತೋಟಗಾರಿಗೆ, ಕೃಷಿ ಇಲಾಖೆಗಳಲ್ಲಿ ಸರಕಾರದಿಂದ ನಿರ್ಮಾಣ ಮಾಡಿದ ಕೃಷಿ ಹೊಂಡ ಹಾಗೂ ರೈತರಿಗೆ ಪರಿಹಾರ ಕುರಿತು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಮಕ್ಕಳಿಗೆ ಗರ್ಭಿಣಿ ಸ್ತ್ರೀಯರಿಗೆ ನೀಡುವ ಪೌಷ್ಟಿಕಾಹಾರ ಮೊಟ್ಟೆಗಳ ಕುರಿತು, ಮೀನುಗಾರಿಕೆ ಇಲಾಖೆ, ಅರಣ್ಯ, ಆರೋಗ್ಯ ಇಲಾಖೆ, ವಿದ್ಯುತ್ ಇಲಾಖೆ,ರೇಷ್ಮೆ ಇಲಾಖೆ,ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ, ಕೃಷಿ ಉತ್ಪನ್ನ ಮಾರುಕಟ್ಟೆ , ಪಿಡ್ಲ್ಯೂಡಿ, ಇಲಾಖೆಗೆಗಳ ಅಧಿಕಾರಿಗಳಿಂದ ಪ್ರಸ್ತಕ ವರ್ಷದಲ್ಲಿ ಸರಕಾರದಿಂದ ಬಂದ ಸೌಲಭ್ಯ ಕಾಮಗಾರಿಗಳ ಕುರಿತು ಮಾಹಿತಿಯನ್ನು ಪಡೆದರು.

> ಮುದ್ದೇಬಿಹಾಳ ಪಟ್ಟಣದಲ್ಲಿ ಸಮರ್ಪಕ ಒಳಚರಂಡಿ ಕಾಮಗಾರಿ ಆಗಿಲ್ಲ ಯುಜಿಡಿ ಅಪೂರ್ಣ ಕಾಮಗಾರಿಯಿಂದ ಸಾರ್ವಜನಿಕರಿಗೆ ತೊಂದರೆ, ಜೆಜೆಎಂ ಅಪೂರ್ಣತೆ, ರೈತರಿಗೆ ಟಿಸಿ ಅಳವಡಿಸಲು ಅನವಶ್ಯಕ ವಿಳಂಬ ಕುರಿತು ಮಾಧ್ಯಮದವರು ಲೋಕಾಯುಕ್ತರ ಗಮನಕ್ಕೆ ತಂದರು .

> ಮಾರುತಿ ನಗರದಲ್ಲಿ ಗಾರ್ಡನ್ ಜಾಗೆಯಲ್ಲಿ ಪ್ರತ್ಯೇಕ ಎರಡು ಉದ್ಯಾನದ ಜಾಗದಲ್ಲಿ ದೇವಾಲಯ ನಿರ್ಮಾಣ, ಕೊಪ್ಪ ತಾಂಡಾದಲ್ಲಿ ಪಡಿತರ ಚೀಟಿ ಮಾಡಲು ಹತ್ತು ರೂ. ಪಡೆಯುತ್ತಾರೆ ಪರವಾಗಿ ಇಲ್ಲದೆ ಪಡಿತರ ಹಂಚಿಕೆ ಮಾಡುವ ಸೇರಿದಂತೆ ಒಟ್ಟು ನಾಲ್ಕು ಜನರಿಂದ ಸಾರ್ವಜನಿಕ ಅಹವಾಲನ್ನು ಲೋಕಾಯುಕ್ತರು ಸ್ವೀಕರಿಸಿದರು ಲೋಕಾಯುಕ್ತರ ಸಾರ್ವಜನಿಕ ಅಹವಾಲು ಬಗ್ಗೆ ಜನರಿಗೆ ಮಾಹಿತಿ ಇರದ ಕಾರಣ ಸಾರ್ವಜನಿಕರು ಸಭೆಗೆ ಹಾಜರಾಗಿರಲಿಲ್ಲ

ಪಡಿತರ ಚೀಟಿ ಮಾಡಲು 10 ರೂ.

ಕುಂಟುನೆಪ ಹೇಳದೆ ನೀರು ನಿರ್ವಹಣೆ, ರೈತರ ಬಿತ್ತನೆ ಬೀಜ ಸಮಸ್ಯೆ ಬಗೆಹರಿಸಿ

• ಉದಯವಾಹಿನಿ,ಚಿಂಚೋಳಿ

ಉದಯವಾಹಿನಿ ಚಿತ್ರ

ತಾಲ್ಲೂಕಿನಾದ್ಯಂತ ರಾಜ್ಯ ಸರ್ಕಾರದಿಂದ ಬರಗಾಲ ಘೋಷಣೆ ಆಗಿರುವುದರಿಂದ, ಲೋಕಸಭಾ ಚುನಾವಣಾ ನೀತಿಸಂಹಿತಿ ಜಾರಿಯಲ್ಲಿರುವುದರಿಂದ ನೀರು ನಿರ್ವಹಣೆಗೆ ಮತ್ತು ರೈತರ ಬಿತ್ತನೆ ಬೀಜ ಸಮಸ್ಯೆಗಳು ಪರಿಹರಿಸಲು ಯಾವುದೇ ನೀತಿಸಂಹಿತಿ ಅಡ್ಡಿಯಿಲ್ಲ ಜನರಿಗೆ ನೀರಿನ ತೋಂದರೆ ಆಗದಂತೆ ಸಂಬಂಧಿಸಿದ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದು ಸೇಡಂ ಸಹಾಯಕ ಆಯುಕ್ತ ಆಶಪ್ಪ ಪೂಜಾರಿ ಹೇಳಿದರು.

ಪಟ್ಟಣದ ಚಂದಾಪೂರದ ತಹಶೀಲ ಕಛೇರಿಯ ಸಭಾಂಗಣದಲ್ಲಿ ಬರಗಾಲದ ನೀರು ನಿರ್ವಹಣೆ ಕುರಿತು ತಾಲ್ಲೂಕಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶವಾಗಲಿ ಪಟ್ಟಣ ನಗರವಾಗಲಿ ಯಾವುದೇ ಸ್ಥಳದಿಂದ ಜನರು ನೀರಿಗಾಗಿ ಸಮಸ್ಯೆ ಹೇಳಿದರೆ ಆಂಥವರ ಸಮಸ್ಯೆಗಳು ಅಧಿಕಾರಿಗಳು ತಕ್ಷಣವೇ ಸ್ಥಳಕ್ಕೆ ಭೇಟಿ ಯಾಗಿ ಪರಿಶೀಲಿಸಿ ಪರಿಹರಿಸಬೇಕು ಎಂದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಮಲ್ಲಿಕಾರ್ಜುನ ಅರಿಕೇರಿ, ತೋಟಗಾರಿಕೆ ರಾಜಕುಮಾರ, ಪಶು ಆಸ್ಪತ್ರೆ ಧನರಾಜ ಭೋಮ್ಮಾ, ಪಿಡಬ್ಲ್ಯೂಡಿ ಜೆಇ ಗಿರಿರಾಜ ಸಜ್ಜನ, ಪಿಆರ್ ಇ ಜೆಇ ಜಾವೀದ್ ಪಟೇಲ, ಪಿಡಿಒ ಗೋವಿಂದರಡ್ಡಿ, ಹೀರಾಸಿಂಗ್ ಚವ್ಹಾಣ, ದಶರಥ ಪಾತ್ರೆ, ಪ್ರತೀಕ್ಷಾ ರಾಠೋಡ್, ಶಾಂತಪ್ಪಾಯಲಗೊಂಡ ಪೂಜಾರಿ ಅನೇಕರಿದ್ದರು.

> ಈಗಾಗಲೇ ಮಳೆಗಾಲದ ಮಳೆ ಮುನ್ಸೂಚನೆ ಪ್ರಾರಂಭವಾಗಿದ್ದು ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಸರಬರಾಜು ಮಾಡುವಲ್ಲಿ ಪಿಡಿಒಗಳು ಸ್ವಚ್ಚತೆ ಕಾಪಾಡಿಕೊಳ್ಳಬೇಕು ರೈತರ ಬಿತ್ತನೆ ಸಮೀಪ ಇರುವುದರಿಂದ ಕೃಷಿ ಇಲಾಖೆ ಅಧಿಕಾರಿಗಳು ಬೀಜಗಳು ದಾಸ್ತಾನು ಮಾಡಿಕೊಂಡು ರೈತರಿಗೆ ಅನುಕೂಲ ಕಲ್ಪಿಸಿಕೊಡಬೇಕು
> -ಶಂಕರ ರಾಠೋಡ್, ತಾಪಂ.ಇಒ

ಕುಕ್ಕೆಗೆ ಬಂದ ನೂತನ ಬಂಡಿರಥ

• ಉದಯವಾಹಿನಿ, ಸುಬ್ರಹ್ಮಣ್ಯ

ಉದಯವಾಹಿನಿ ಚಿತ್ರ

ಮಹತೋಭಾರ ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನಕ್ಕೆ ಸಾಯಿ ಶ್ರೀನಿವಾಸ್ ರಾಮಲಿಂಗೇಶ್ವರ ರಾವ್ ಅವರು ಸೇವಾರೂಪದಲ್ಲಿ ಸಮರ್ಪಿಸುವ ನೂತನ ಬಂಡಿ ರಥವು ಮೆರವಣಿಗೆಯೊಂದಿಗೆ ಸೋಮವಾರ ಕುಕ್ಕೆಗೆ ತಲುಪಿತು. ಆನೆ, ಬಿರುದಾವಳಿ ಮತ್ತು ಬ್ಯಾಂಡ್ ವಾದ್ಯಗಳ ನಿನಾದದೊಂದಿಗೆ ರಥವನ್ನು ಸ್ವಾಗತಿಸಲಾಯಿತು.

ರಥವನ್ನು ಕಾಶಿಕಟ್ಟೆ ಮಹಾಗಣಪತಿ ಸನ್ನಿಧಾನದಲ್ಲಿ ಸ್ವಾಗತಿಸಲಾಯಿತು. ಮಹಾಗಣಪತಿಗೆ ಪೂಜೆ ನೆರವೇರಿಸಿದ ಬಳಿಕ ಪುರೋಹಿತ ಪ್ರಸಾದ್ ಕಲ್ಲೂರಾಯ ನೂತನ ಬಂಡಿ ರಥಕ್ಕೆ ಪೂಜೆ ನೆರವೇರಿಸಿದರು. ಬಳಿಕ ದೇವಳದ ಆಡಳಿತಾಧಿಕಾರಿ, ಪುತ್ತೂರು ಉಪವಿಭಾಗಾಧಿಕಾರಿ ಜುಬಿನ್ ಮೊಹಪಾತ್ರ ಅವರು ರಥಕ್ಕೆ ಪುಷ್ಪಾರ್ಚನೆ ಮಾಡಿದರು. ಬಳಿಕ ರಥಶಿಲ್ಪಿ ರಾಜಗೋಪಾಲ ಆಚಾರ್ಯ ಕೋಟೇಶ್ವರ, ದೇವಳದ ಕಾರ್ಯನಿರ್ವಹಣಾಧಿಕಾರಿ ನಿಂಗಯ್ಯ, ರಾಜ್ಯ ಧಾರ್ಮಿಕ ಪರಿಷತ್ ಸದಸ್ಯೆ ಮಲ್ಲಿಕಾ ಪ್ರಶಾಂತ್ ಪಕ್ಕಳ, ಗ್ರಾಮ ಪಂಚಾಯಿತಿ ಸದಸ್ಯ ಹರೀಶ್ ಎಸ್.ಇಂಜಾಡಿ, ಸೇವಾರ್ಥಿಗಳ ಆಪ್ತರಾದ ಮೋಹನದಾಸ ರೈ, ರಥ ನೀಡುವಲ್ಲಿ ಸಹಕರಿಸಿದ ಮಾಜಿ ವ್ಯವಸ್ಥಾಪನಾ ಸಮಿತಿ ಸದಸ್ಯ ಶ್ರೀವತ್ಸ ಬೆಂಗಳೂರು, ಮಾಸ್ಟರ್ ಪ್ಲಾನ್ ಸಮಿತಿ ಸದಸ್ಯರಾದ ಸತೀಶ್ ಕೂಜುಗೋಡು, ಲೋಲಾಕ್ಷ ಕೈಕಂಬ, ಜಿಲ್ಲಾ ಧಾರ್ಮಿಕ ಪರಿಷತ್ ಮಾಜಿ ಸದಸ್ಯೆ ವಿಮಲಾ ರಂಗಯ್ಯ, ವ್ಯವಸ್ಥಾಪನಾ ಸಮಿತಿ ಮಾಜಿ ಸದಸ್ಯ ಕೃಷ್ಣಮೂರ್ತಿ ಭಾಗವಹಿಸಿದ್ದರು.

ದಶಕದಿಂದ ನೀಗದ ನೀರಿನ ಸಮಸ್ಯೆ

• ಉದಯವಾಹಿನಿ, ಕುಂದಗೋಳ

ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿಯೇ ಕುಂದಗೋಳ ತಾಲ್ಲೂಕು ಅತ್ಯಂತ ಹಿಂದುಳಿದಿದ್ದು, ದಶಕದಿಂದ ಕುಡಿಯುವ ನೀರಿನ ಸಮಸ್ಯೆ ಜೀವಂತವಾಗಿದೆ. ತಾಲ್ಲೂಕು ವ್ಯಾಪ್ತಿಯಲ್ಲಿ 27 ಗ್ರಾಮ ಪಂಚಾಯಿತಿಗಳಿದ್ದು, 58 ಗ್ರಾಮಗಳಿವೆ. ಕೆರೆ, ಕೊಳವೆಬಾವಿಗಳು, ಶುದ್ಧ ಕುಡಿಯುವ ನೀರಿನ ಘಟಕಗಳು ತಾಲ್ಲೂಕು ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಪ್ರಮುಖ ಮೂಲಗಳಾಗಿವೆ.

10 ಗ್ರಾಮಗಳಲ್ಲಿ ಕೆರೆ, 42 ಗ್ರಾಮಗಳಲ್ಲಿ ಕೊಳವೆಬಾವಿಗಳ ಮೂಲಕ ನೀರು ಪೂರೈಸಲಾಗುತ್ತಿದೆ. ಅಲ್ಲದೆ, 15 ಗ್ರಾಮಗಳಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಮೂಲಕ ನಾಲ್ಕು ದಿನಕ್ಕೊಮ್ಮೆ ನೀರು ಒದಗಿಸಲಾಗುತ್ತಿದೆ. ತಾಲ್ಲೂಕು ವ್ಯಾಪ್ತಿಯಲ್ಲಿ 84 ಕೆರೆಗಳಿದ್ದು, 26 ಕೆರೆಗಳಲ್ಲಿ ನೀರು ಇಲ್ಲ. ತಾಲ್ಲೂಕಿನಾದ್ಯಂತ ನಿರ್ಮಿಸಿದ 87 ಶುದ್ಧ ಕುಡಿಯುವ ನೀರಿನ ಘಟಕಗಳ ಪೈಕಿ 21 ಘಟಕಗಳು ಕಾರ್ಯನಿರ್ವಹಿಸುತ್ತಿಲ್ಲ. ತಾಲ್ಲೂಕು ವ್ಯಾಪ್ತಿಯ ಗ್ರಾಮಗಳಲ್ಲಿ ಒಟ್ಟು 373 ಕೊಳವೆಬಾವಿಗಳಿದ್ದು ಆ ಪೈಕಿ 103 ದುರಸ್ತಿ ಹಂತದಲ್ಲಿವೆ.

> ಯರಗುಪ್ಪಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಜನರು ಕುಡಿಯುವ ನೀರನ್ನು ಟ್ರ್ಯಾಕ್ಟರ್, ದನ-ಕರು ಮೈ ತೊಳೆಯಲು ಬಳಸುತ್ತಿದ್ದರೂ ಸ್ಥಳೀಯ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ ಎಂಬ ದೂರುಗಳು ಕೇಳಿ ಬರುತ್ತಿವೆ.

ಈಗ ಏಕಾಏಕಿ ಲಿಂಗಾಯತರ ಪರ ಮಾತನಾಡುತ್ತಿರುವುದು ಹಾಸ್ಯಾಸ್ಪದ

• ಉದಯವಾಹಿನಿ,ಚಿಂಚೋಳಿ

ಮತಕ್ಷೇತ್ರದಲ್ಲಿ ಆರು ವರ್ಷ ಶಾಸಕರಾಗಿದ ಡಾ.ಉಮೇಶ ಜಾಧವ, ಅವರ ಮಗ ಡಾ.ಅವಿನಾಶ ಜಾಧವ ಶಾಸಕರಾಗಿ ಐದು ವರ್ಷ ಕಳೆದರು ತಮ್ಮ ಮತಕ್ಷೇತ್ರಕ್ಕೆ ಒಳಪಡುವ ಜಿಲ್ಲಾ ಪಂಚಾಯತಿಗಳಲ್ಲಿ ಒಬ್ಬೇ ಒಬ್ಬ ಇವರ ಪಕ್ಷದ ಲಿಂಗಾಯತ ಕಾರ್ಯಕರ್ತರನ್ನು ಜಿಲ್ಲಾ ಪಂಚಾಯಿತಿಯ ಸದಸ್ಯರಾಗಿ ಮಾಡಿಲ್ಲಕಳೆದ ತಾಲ್ಲೂಕಾ ಪಂಚಾಯತಿಯಲ್ಲಿ ಅಧ್ಯಕ್ಷ ಸ್ಥಾನ ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದರು ಲಿಂಗಾಯತರನ್ನು ತಾಲ್ಲೂಕ ಪಂಚಾಯಿತಿ ಅಧ್ಯಕ್ಷರಾಗಿ ಮಾಡದೆ ತಮ್ಮ ಸಮುದಾಯದವರನ್ನು ಅಧ್ಯಕ್ಷರನ್ನಾಗಿ ಮಾಡಿದ್ದು ಸೂಕ್ಷ್ಮವಾಗಿ ಗಮನಿಸಿದರೆ ಸಂಸದ ಡಾ.ಉಮೇಶ ಜಾಧವ ಲಿಂಗಾಯತರ ಪರ ಅಥವಾ ವಿರೋಧ ಇದ್ದಾರೆ ಎಂಬುವುದು ಗೋತ್ತಾಗುತ್ತದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾ ಉಪಾಧ್ಯಕ್ಷ ಶರಣುಪಾಟೀಲ ಮೋತಕಪಳ್ಳಿ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟನೆ ಹೊರಡಿಸಿದ ಅವರು,ಡಾ. ಉಮೇಶ ಜಾಧವ ಇತ್ತೀಚೆಗೆ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಿಗೆ ಟೀಕಿಸುವ ಭರದಲ್ಲಿ ಆಂದೋಲ ಶ್ರೀಗಳ ಪರವಹಿಸಿ ಮಾತನಾಡುತ್ತ ಲಿಂಗಾಯತ ಸಮಾಜದ ಬಗ್ಗೆ ಉಮೇಶ ಜಾಧವ ಉಕ್ಕಿರುವ ಪ್ರೀತಿಯನ್ನು ನೋಡಿದರೆ ಹಾಸ್ಯಾಸ್ಪದ ಎನಿಸುತ್ತಿದೆ.

ಸ್ವಾಮೀಜಿಯವರು ಮಠದಲ್ಲಿ ಕುಳಿತುಕೊಂಡು ಮಠಕ್ಕೆ ಬರುವ ಭಕ್ತರನ್ನು ಆಶೀರ್ವಾದಿಸಲಿ ಜನತೆಯನ್ನು ಸರಿ ದಾರಿಗೆ ತರುವ ಹಾಗೆ ಪ್ರವಚನಗಳನ್ನು ನೀಡುತ್ತಾ ಸಮಾಜದ ಅಂಕು ಡೊಂಕುಗಳನ್ನು ತಿದ್ದುವ ಕೆಲಸ ಮಾಡಬೇಕು ಶಿಕ್ಷಣ ಆರೋಗ್ಯ, ಸೇವೆಗಳನ್ನು ಮಾಡಬೇಕು ಅದೆಲ್ಲ ಬಿಟ್ಟು ಆಂದೋಲ ಶ್ರೀಗಳು ಒಂದು ಪಕ್ಷದ ವಕ್ತಾರರಂತೆ ಹೇಳಿಕೆಗಳನ್ನು ಕೊಡುತ್ತಾ ತಿರುಗುವುದಲ್ಲ, ಶ್ರೀಗಳಿಗೆ ರಾಜಕೀಯ ಮಾಡುವ ಆಷ್ಟು ಇಷ್ಟಯಿದ್ದರೆ ಕಾವಿ ಬಿಟ್ಟು ಖಾದಿ ತೊಟ್ಟು ರಾಜಕೀಯ ಮಾಡಲಿ.

> ಬಿಜೆಪಿ ಶಾಸಕ ಬಸವನಗೌಡ ಪಾಟೀಲ್ ಯತ್ನಾಳರವರು ರಾಜ್ಯದ ಸ್ವಾಮೀಜಿಗಳ ಬಗ್ಗೆ ಅವಹೇಳನಕಾರಿ ಮಾತನಾಡಿ ಏಕ ವಚನದಲ್ಲಿ ಲಿಂಗಾಯತ ಸ್ವಾಮೀಜಿಗಳನ್ನು ಬೈದಾಗ ಬಾಯಿ ತೆರೆಯದ ಸಂಸದ ಡಾ.ಉಮೇಶ ಜಾಧವ ಈಗ ಪ್ರಿಯಾಂಕ್ ಖರ್ಗೆ ಅವರನ್ನು ವಿರೋಧ ಮಾಡುತ್ತಿರುವುದು ನೋಡಿದರೆ ಉಮೇಶ ಜಾಧವ ಎಷ್ಟು ನಾಟಕ ಮಾಡುತ್ತಿದ್ದಾರೆ ಎಂಬುವುದು ಜನರಿಗೆ ಗೊತ್ತಾಗುತ್ತಿದೆ
> -ಶರಣುಪಾಟೀಲ ಮೋತಕಪಳ್ಳಿ
> ಜಿಲ್ಲಾ ಉಪಾಧ್ಯಕ್ಷ

ಲಿಂಗಾಯತ ಸಮಾಜವು ಹನ್ನೆರಡನೇ ಶತಮಾನದಿಂದ ಸದೃಢವಾಗಿದೆ,ಇವತ್ತು ಸದೃಢವಾಗಿದೆ, ಮುಂದೆಯೂ ಸದೃಢವಾಗಿರುತ್ತದೆ ನಾಟಕ ಮಾಡಿ ಅನುಕಂಪ ತೋರುವ ಅವಶ್ಯಕತೆಯಿಲ್ಲ ಎಂದರು.

ಎಟಿಎಂ ನಿರ್ವಹಣೆ ಕೊರತೆ: ಹಣ ಪಡೆಯಲು ಗ್ರಾಹಕರ ಪರದಾಟ

• ಉದಯವಾಹಿನಿ, ಡಂಬಳ

ಉದಯವಾಹಿನಿ ಚಿತ್ರ

ತಾಂತ್ರಿಕ ತೊಂದರೆ, ನಗದು ಖಾಲಿ, ಯಂತ್ರ ನ್ಯೂನ್ಯತೆ ಸೇರಿ ಮೊದಲಾದ ಸಮಸ್ಯೆಯಿಂದ ಗ್ರಾಹಕರು ಹಣ ಪಡೆಯಲು ಪರದಾಡುವಂತೆ ಆಗಿದೆ.ಕೆಲವೆಡೆ ಎಟಿಎಂಗಳು ಆಗಾಗ್ಗೆ ಕೈಕೊಡುವುದು ಸಾಮಾನ್ಯವಾಗಿದೆ. ಡಂಬಳ ಗ್ರಾಮದ ಬಸ್ ನಿಲ್ದಾಣದ ಹತ್ತಿರದ ಗ್ರಾಮ ಪಂಚಾಯಿತಿ ಮಳಿಗೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಸ್‌ಬಿಐ ಎಟಿಎಂ ಸ್ಥಗಿತಗೊಂಡು ಎರಡು ತಿಂಗಳು ಕಳೆದರೂ ಅಗತ್ಯ ಕ್ರಮ ತೆಗೆದುಕೊಳ್ಳದ ಅಧಿಕಾರಿಗಳ ವಿರುದ್ಧ ಗ್ರಾಹಕರು ಬ್ಯಾಂಕ್‌ನವರನ್ನು ಶಪಿಸುವಂತಾಗಿದೆ.

ಗ್ರಾಮೀಣ ಭಾಗದಲ್ಲಿ ಡಂಬಳ ಹೋಬಳಿ ಕೇಂದ್ರ, ದೊಡ್ಡ ಊರುಗಳಲ್ಲಿ ಮಾತ್ರ ಎಟಿಎಂ ಇರುತ್ತವೆ. ವಿಶೇಷವಾಗಿ ಡಂಬಳ ಗ್ರಾಮದಲ್ಲಿ ಮಾತ್ರ ಏಕೈಕ ಎಸ್‌ಬಿಐ ಎಟಿಎಂ ಸ್ಥಾಪನೆ ಮಾಡಲಾಗಿದ್ದು, ಹೋಬಳಿ ವ್ಯಾಪ್ತಿಯ 26 ಗ್ರಾಮಗಳ ಸಾರ್ವಜನಿಕರು ಗ್ರಾಮದ ಎಟಿಎಂ ಅನ್ನು ಹೆಚ್ಚು ಅಲವಂಬನೆ ಮಾಡಿಕೊಂಡಿದ್ದಾರೆ. ಕೆಲವೊಮ್ಮೆ ಗದಗ ಮತ್ತು ಮುಂಡರಗಿ ನಗರಕ್ಕೆ ಹೋಗಿ ಎಟಿಎಂ ಮೂಲಕ ಹಣ ತೆಗೆದುಕೊಳ್ಳುವ ಸ್ಥಿತಿ ನಿರ್ಮಾಣವಾಗಿದೆ.

ಉಪತಶೀಲ್ದಾರ ನಾಡ ಕಾರ್ಯಲಯ ಡಂಬಳ ಗ್ರಾಮದಲ್ಲಿರುವುದರಿಂದ ಸುತ್ತಮುತ್ತಲಿನ ಗ್ರಾಮಸ್ಥರು ನಾಡ ಕಚೇರಿ, ಕೃಷಿ, ಕಂದಾಯ ಇಲಾಖೆ ಸೇರಿದಂತೆ ವಿವಿಧ ಕೆಲಸ ಕಾರ್ಯಗಳಿಗೆ ಗ್ರಾಮಸ್ಥರು ಡಂಬಳ ಗ್ರಾಮಕ್ಕೆ ಬರುತ್ತಾರೆ. ಬಹುತೇಕ ಗ್ರಾಹಕರು ಪ್ರಸ್ತುತ ದಿನಗಳಲ್ಲಿ ಎಟಿಎಂ ಉಪಯೋಗ ಮಾಡುತ್ತಿದ್ದಾರೆ. ಕಳೆದ ಎರಡು ತಿಂಗಳಿನಿಂದ ಎಟಿಎಂ ಹಲವು ಕಾರಣಾಂತರದಿಂದ ಸ್ಥಗಿತಗೊಂಡಿದ್ದರು ಬ್ಯಾಂಕ್ ಅಧಿಕಾರಿಗಳು ಅಗತ್ಯ ಕ್ರಮ ತಗೆದುಕೊಂಡಿಲ್ಲ.

ಡಂಬಳ ಹೋಬಳಿ ಕೇ

ದಿನ ಭವಿಷ್ಯ

ರಾಹುಕಾಲ	ಮಧ್ಯಾಹ್ನ	12:00 ರಿಂದ 01:30
ಗುಳಿಕ ಕಾಲ	ಬೆಳಿಗ್ಗೆ	10:30 ರಿಂದ 12:00
ಯಮಗಂಡ ಕಾಲ	ಬೆಳಿಗ್ಗೆ	07:30 ರಿಂದ 09:00

ಮೇಷ ಆರ್ಥಿಕ ಜೀವನದ ಸ್ಥಿತಿ ಇಂದು ಉತ್ತಮವಾಗಿದೆ ಎಂದು ಹೇಳಲಾಗುವುದಿಲ್ಲ, ಇಂದು ನಿಮ್ಮನ್ನು ಉಳಿಸಲು ನಿಮಗೆ ಕಷ್ಟವಾಗಬಹುದು. ನಿಮ್ಮ ಹೆತ್ತವರ ಆರೋಗ್ಯ ಚಿಂತೆ ಮತ್ತು ಆತಂಕಕ್ಕೆ ಕಾರಣವಾಗುತ್ತದೆ.

ವೃಷಭ ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ.

ಮಿಥುನ ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಇಲ್ಲಿಯವರೆಗೆ ಅನಗತ್ಯವಾಗಿ ಹಣವನ್ನು ಖರ್ಚು ಮಾಡುತ್ತಿದ್ದವರು ಜೀವನದಲ್ಲಿ ಹಣದ ಪ್ರಾಮುಖ್ಯತೆ ಏನು ಎಂಬುದನ್ನು ಅರ್ಥಮಾಡಿಕೊಳ್ಳಬಹುದು.

ಕರ್ಕಾಟಕ ನೀವು ಕೆಲಸದಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ ಮತ್ತು ಪ್ರಭಾವವನ್ನು ಬಳಸಬೇಕಾಗುತ್ತದೆ. ನಿಮ್ಮ ಸ್ಪರ್ಧಾತ್ಮಕ ಸ್ವಭಾವ ನೀವು ಪ್ರವೇಶಿಸುವ ಯಾವುದೇ ಸ್ಪರ್ಧೆಯಲ್ಲೂ ನಿಮ್ಮನ್ನು ಗೆಲ್ಲಿಸುತ್ತದೆ.

ಸಿಂಹ ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ.

ಕನ್ಯಾ ಯಾರಾದರೂ ನಿಮಗೆ ಪ್ರೇಮ ನಿವೇದನೆ ಮಾಡುವ ಸಾಧ್ಯತೆಗಳಿವೆ. ನೀವು ಯಾವಾಗಲೂ ಪರಸ್ಪರರ ಪ್ರೀತಿಯಲ್ಲಿದ್ದೀರೆಂದು ಅನಿಸುವುದರಿಂದ ಭೌತಿಕ ಅಸ್ತಿತ್ವಕ್ಕೆ ಯಾವುದೇ ಮಹತ್ವವಿರುವುದಿಲ್ಲ.

ತುಲಾ ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನಿಮ್ಮ ಖರ್ಚುಗಳಲ್ಲಿ ಅನಿರೀಕ್ಷಿತ ಏರಿಕೆ ನಿಮ್ಮ ಮನಸ್ಸಿನ ಶಾಂತಿಗೆ ಭಂಗ ತರುತ್ತದೆ.

ವೃಶ್ಚಿಕ ಒಟ್ಟಾರೆ ಆರೋಗ್ಯ ಉತ್ತಮವಾಗಿದ್ದರೂ ಪ್ರಯಾಣ ಒತ್ತಡಮಯವೂ ಮತ್ತು ಕಷ್ಟಕರವೂ ಆಗಿರುತ್ತದೆ. ಹೂಡಿಕೆ ಶಿಫಾರಸು ಮಾಡಲಾಗಿದ್ದರೂ ಸರಿಯಾದ ಸಲಹೆ ಪಡೆಯಬೇಕು.

ಧನಸ್ಸು ಹೊರಾಂಗಣ ಚಟುವಟಿಕೆಗಳು ಇಂದು ದಣವು ಮತ್ತು ಒತ್ತಡ ತರುತ್ತವೆ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ.

ಮಕರ ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ ಅಥವಾ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ.

ಕುಂಭ ನಿಮ್ಮ ಪ್ರೇಮಮಯ ವೀಕ್ಷಣೆಗಳನ್ನು ಅಭಿವ್ಯಕ್ತಿಗೊಳಿಸಿ. ಇಂದು ಕೆಲಸದ ಸ್ಥಳದಲ್ಲಿ ನಿಮ್ಮ ಯಾವುದೊ ಹಳೆಯ ಕೆಲಸವನ್ನು ಪ್ರಶಂಸಿಸಬಹುದು. ನಿಮ್ಮ ಕೆಲಸವನ್ನು ನೋಡುತ್ತಾ ಇಂದು ನಿಮ್ಮ ಪ್ರಗತಿಯೂ ಸಹ ಸಾಧ್ಯವಿದೆ.

ಮೀನ ನೀವು ಪರಿಸ್ಥಿತಿಯ ನಿಯಂತ್ರಣ ಹೊಂದುತ್ತಿದ್ದಂತೆ ನಿಮ್ಮ ಆತಂಕ ಕಣ್ಮರೆಯಾಗುತ್ತದೆ. ಇದು ಧೈರ್ಯದ ಮೊದಲ ಸ್ಪರ್ಶದಲ್ಲಿ ಕುಸಿದುಹೋಗುವ ಸಾಬೂನಿನ ಗುಳ್ಳೆಯಷ್ಟೇ ಗಟ್ಟಿಯೆಂದು ನೀವು ಅರ್ಥ ಮಾಡಿಕೊಳ್ಳುತ್ತೀರಿ.

ಕೆರೆ ತುಂಬಿಸಲಿದೆ ವೇದಾವತಿ ನದಿ ನೀರು

● ಮೇ ಅಂತ್ಯದ ವೇಳೆಗೆ ಕಾಮಗಾರಿ ಮುಗಿದು ಜೂನ್ ತಿಂಗಳಿನಲ್ಲಿ ನೀರು ಹರಿಯಬಹುದು ಎಂಬ ನಿರೀಕ್ಷೆ

• ಉದಯವಾಹಿನಿ ಧರ್ಮಪುರ

ಸಮೀಪದ ಹೊಸಹಳ್ಳಿ ಬಳಿ ವೇದಾವತಿ ನದಿಯಿಂದ ಧರ್ಮಪುರ ಕೆರೆಗೆ ನೀರು ಹರಿಸುವ ಯೋಜನೆಯ ಕಾಮಗಾರಿ ಭರದಿಂದ ಸಾಗಿದೆ. ಈ ಭಾಗದ ಶತಮಾನದ ಬೇಡಿಕೆ ಈಡೇರುತ್ತಿರುವುದರಿಂದ ಸಹಜವಾಗಿಯೇ ಜನರಲ್ಲಿ ಹರ್ಷ ಉಂಟಾಗಿದೆ. ನಿತ್ಯ ಆರೇಳು ಜೆಸಿಬಿ ಮತ್ತು ಹಿಟ್ಯಾಚಿ ಯಂತ್ರಗಳ ಮೂಲಕ ಗುಂಡಿ ಅಗೆಯುವ ಕೆಲಸ ಹಗಲು- ರಾತ್ರಿ ನಡೆಯುತ್ತಿದೆ. ಮೇ ಅಂತ್ಯದ ವೇಳೆಗೆ ಕಾಮಗಾರಿ ಮುಗಿದು ಜೂನ್ ತಿಂಗಳಿನಲ್ಲಿ ನೀರು ಹರಿಯಬಹುದು ಎಂಬ ನಿರೀಕ್ಷೆ ಇದೆ.

ಬಿಜೆಪಿ ನೇತೃತ್ವದ ಸರ್ಕಾರದ ಅವಧಿಯಲ್ಲಿ ಧರ್ಮಪುರ ಏತ ನೀರಾವರಿ ಯೋಜನೆಗೆ 90 ಕೋಟಿ ಅನುದಾನ ಮಂಜೂರಾಗಿತ್ತು. ಹೋಬಳಿಯ ಗೂಳ್ಯ, ಅಬ್ಬಿನಹೊಳೆ, ಮುಂಗುಸುವಳ್ಳಿ, ಈಶ್ವರಗೆರೆ, ಸೂಗೂರು, ಶ್ರವಣಗೆರೆ, ಅಜ್ಜಿಕಟ್ಟೆ, ಧರ್ಮಪುರ ಕೆರೆಗಳಿಗೆ ನೀರು ಹರಿಸುವ ಕಾಮಗಾರಿಗೆ 2022ರ ಜೂನ್‌ನಲ್ಲಿ, ಮುಖ್ಯಮಂತ್ರಿಯಾಗಿದ್ದ ಬಸವರಾಜ ಬೊಮ್ಮಾಯಿ ಶಂಕುಸ್ಥಾಪನೆ ನೆರವೇರಿಸಿದ್ದರು.

ಮೊದಲ ಹಂತದ ಕಾಮಗಾರಿಗೆ 40 ಕೋಟಿ ಮೀಸಲಿಟ್ಟಿದ್ದು, ಪಂಪ್‌ಹೌಸ್, 1.5 ಕಿ.ಮೀ. ರೈಸಿಂಗ್ ಮೇನ್, ಜಾಕ್ವೆಲ್, ಪವರ್ ಸ್ಟೇಷನ್, 900 ಎಚ್.ಪಿ ಸಾಮರ್ಥ್ಯದ 4 ಮೋಟರ್ ಪಂಪ್ ಅಳವಡಿಸಲಾಗಿದೆ.

8 ಕೆರೆಗಳಿಗೆ ನೀರುಣಿಸುವ ಕೆಲಸಕ್ಕೆ ಹಸಿರು ನಿಶಾನೆ

2ನೇ ಹಂತದ ಕಾಮಗಾರಿಗೆ 50 ಕೋಟಿ ಅನುದಾನ ಬಿಡುಗಡೆಯಾಗಿದ್ದು, ರೈಸಿಂಗ್ ಮೇನ್, ಕೆರೆಗಳಿಗೆ ಅಗತ್ಯ ಪೈಪ್‌ಲೈನ್ ಅಳವಡಿಕೆ ಕಾಮಗಾರಿ ಬಹುತೇಕ ಮುಗಿದಿದೆ. 15 ದಿನಗಳಿಂದ ಕಾಮಗಾರಿ ಭರದಿಂದ ಸಾಗಿದ್ದು, ಮೇ ಅಂತ್ಯಕ್ಕೆ ಕಾಮಗಾರಿ ಮುಗಿಯಲಿದೆ ಎಂದು ಎಂಜಿನಿಯರ್ ರಾಜಶೇಖರ್ ತಿಳಿಸಿದರು. ಈಗಾಗಲೇ ಅಬ್ಬಿನಹೊಳೆ, ಈಶ್ವರಗೆರೆ, ಗೂಳ್ಯ, ಮುಂಗುಸುವಳ್ಳಿ, ಸೂಗೂರು ಕೆರೆಗಳಿಗೆ ನೀರು ಹರಿಸುವ ಕಾಮಗಾರಿ ಮುಗಿದಿದ್ದು, ಈಗಾಗಲೇ ಈ ಕೆರೆಗಳಿಗೆ ಪ್ರಯೋಗಾರ್ಥ ನೀರು ಹರಿಸಲಾದೆ. ಉಳಿದಂತೆ ಧರ್ಮಪುರ, ಶ್ರವಣಗೆರೆ ಮತ್ತು ಅಜ್ಜಿಕಟ್ಟೆ ಕೆರೆಗಳ ಕಾಮಗಾರಿ ಕೇವಲ 2 ಕಿ.ಮೀ. ಮಾತ್ರ ಬಾಕಿ ಇದ್ದು ಜೂನ್ ತಿಂಗಳಲ್ಲಿ ಐತಿಹಾಸಿಕ ಧರ್ಮಪುರ ಕೆರೆ ಒಳಗೊಂಡಂತೆ ಹೋಬಳಿಯ 8 ಕೆರೆಗಳಿಗೂ ನೀರು ಹರಿಯಲಿದೆ ಎಂದು ಸಹಾಯಕ ಎಂಜಿನಿಯರ್ ಜಿ.ಭೀಮರಾಜ್ ತಿಳಿಸಿದರು.

ಉದಯವಾಹಿನಿ ಚಿತ್ರ

ಕೆರೆಗಳಿಗೆ ನೀರು ಹರಿಸುವ ಕಾಮಗಾರಿ ಮೇ ತಿಂಗಳ ಅಂತ್ಯಕ್ಕೆ ಪೂರ್ಣಗೊಳ್ಳಲಿದೆ. ನೀತಿ ಸಂಹಿತೆ ಹಿಂತೆಗೆದುಕೊಂಡ ತಕ್ಷಣ 8 ಕೆರೆಗಳಿಗೆ ನೀರುಣಿಸುವ ಕೆಲಸಕ್ಕೆ ಹಸಿರು ನಿಶಾನೆ ದೊರೆಯಲಿದೆ -ಡಿ. ಸುಧಾಕರ್, ಜಿಲ್ಲಾ ಉಸ್ತುವಾರಿ ಸಚಿವ

1919ರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಆಡಳಿತದ ಅವಧಿಯಲ್ಲಿ ಧರ್ಮಪುರ ಕೆರೆಗೆ ಪೂರಕ ನಾಲೆ ಕಲ್ಪಿಸಲು ದಿವಾನರು ಪ್ರಸ್ತಾವನೆ ಸಲ್ಲಿಸಿದ್ದರು. ಸ್ವಾತಂತ್ರ್ಯದ ನಂತರ ಸರ್ಕಾರಗಳು ಆಶ್ವಾಸನೆ ನೀಡುತ್ತ ಬಂದಿದ್ದವು. ಇತ್ತ ರೈತರ ಹೋರಾಟವೂ ನಿರಂತರವಾಗಿ ಮುಂದುವರಿದಿತ್ತು. ಧರ್ಮಪುರ ಹೋಬಳಿಯ ರೈತರು 200 ದಿನಗಳವರೆಗೆ ಸರದಿಯ ಮೇಲೆ ನಾಡಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಿದ್ದರು. ಆದರೂ, ಕೆರೆ ತುಂಬಿಸುವ ಕೆಲಸ ಮರೀಚಿಕೆಯಾಗಿಯೇ ಉಳಿದಿತ್ತು. ಧರ್ಮಪುರ ಕೆರೆ ಸೇರಿದಂತೆ ಹೋಬಳಿಯ ಎಂಟು ಕೆರೆಗಳಿಗೆ ನೀರು ಹರಿಸುವ ಕಾಮಗಾರಿ ಬೇಗ ಮುಗಿದರೆ ತೋಟಗಾರಿಕಾ ಬೆಳೆ ಉಳಿಸಿಕೊಳ್ಳಲು ಅನುಕೂಲವಾಗಲಿದೆ ಎಂದೂ ಅವರು ತಿಳಿಸಿದರು.

ಜಿಲ್ಲಾ ಉಸ್ತುವಾರಿ ಸಚಿವರು ಕ್ರಮ ಕೈಗೊಳ್ಳಬೇಕು

ಕಳೆದ ವರ್ಷ ಸಮರ್ಪಕವಾಗಿ ಮಳೆ ಸುರಿಯದ್ದರಿಂದ ಕೊಳವೆಬಾವಿಗಳು ಕೈಕೊಟ್ಟಿವೆ. ಅಡಿಕೆ ಗಿಡಗಳು ಒಣಗುತ್ತಿದ್ದು, ರೈತರ ಬದುಕು ಮೂರಾಬಟ್ಟೆಯಾಗಿದೆ. ತಕ್ಷಣವೇ ಹೋಬಳಿಯ ಕೆರೆಗಳಿಗೆ ನೀರುಣಿಸಿದರೆ ಕೊಳವೆಬಾವಿಗಳಲ್ಲಿ ಅಂತರ್ಜಲ ವೃದ್ಧಿಯಾಗಲಿದೆ. ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು ಕ್ರಮ ಕೈಗೊಳ್ಳಬೇಕು ಎಂದು ರೈತರು ಆಗ್ರಹಿಸಿದ್ದಾರೆ.

ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಶಾಸಕಿ ಕೆ. ಪೂರ್ಣಿಮಾ ಶ್ರೀನಿವಾಸ್ ಬದ್ಧತೆಯಿಂದಾಗಿ ವರ ಶ್ರಮದಿಂದಾಗಿ ನಮ್ಮೆಲ್ಲರ ಕನಸು ಸಾಕಾರಗೊಂಡಿದೆ' -ಲೋಕೇಶಪ್ಪ , ಹರಿಯಬ್ಬೆಯ ರೈತ

ಸಾಲಕ್ಕೆ ಸಬ್ಸಿಡಿ ಹಣ ವಜಾಕ್ಕೆ ಖಂಡನೆ, ಪ್ರತಿಭಟನೆ

• ಉದಯವಾಹಿನಿ ದಾವಣಗೆರೆ

ಸಾಲದ ಹಣಕ್ಕೆ ಸಾಮಾಜಿಕ ಭದ್ರತೆ ಸೇರಿದಂತೆ ವಿವಿಧ ಸಬ್ಸಿಡಿ ಹಣ ಜಮೆ ಮಾಡಿಕೊಂಡಿದ್ದ ಬ್ಯಾಂಕ್‌ಗಳ ವಿರುದ್ಧ ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆ ಹುಚ್ಚವ್ವನಹಳ್ಳಿ ಮಂಜುನಾಥ್ ಬಣದಿಂದ ತಹಶೀಲ್ದಾರ್ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಲಾಯಿತು.

ದಾವಣಗೆರೆ ತಾಲ್ಲೂಕಿನ ಹೊನ್ನೂರು ಗ್ರಾಮದ ನಾಗಮ್ಮ ಅಂಗವಿಕಲರ ಕಲ್ಯಾಣ ಇಲಾಖೆಯಿಂದ 35 ಸಾವಿರ ಸಹಾಯಧನ, 65,000 ಸಾಲ ಸೇರಿದಂತೆ 1 ಲಕ್ಷ ಪಡೆದಿದ್ದು, ಈಗಾಗಲೇ 50,000 ಸಾಲ ಮರುಪಾವತಿ ಮಾಡಿದ್ದಾರೆ. ಕಾರಣಾಂತರದಿಂದ ಉಳಿದ ಹಣ ಕಟ್ಟಿಲ್ಲ. ಬ್ಯಾಂಕ್‌ಗಳು ಈ ಹಣಕ್ಕೆ ಉದ್ಯೋಗ ಖಾತ್ರಿ, ಗೃಹಲಕ್ಷ್ಮಿ, ಅಂಗವಿಕಲರ ವೇತನದ ಹಣವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. ಸಾಲ ಕಟ್ಟುವುದಾಗಿ ತಿಳಿಸಿದರೂ ಬ್ಯಾಂಕ್‌ನ ಮ್ಯಾನೇಜರ್ ಸ್ಪಂದಿಸಿಲ್ಲ' ಎಂದು ಸಂಘದ ರಾಜ್ಯ ಘಟಕದ ಅಧ್ಯಕ್ಷ ಹುಚ್ಚವ್ವನಹಳ್ಳಿ ಮಂಜುನಾಥ್ ಆರೋಪಿಸಿದರು. ಸ್ಥಳಕ್ಕೆ ಆಗಮಿಸಿದ ತಹಶೀಲ್ದಾರ್ ಎಂ.ಬಿ.ಅಶ್ವತ್ಥ್ ಲೀಡ್ ಬ್ಯಾಂಕ್ ವ್ಯವಸ್ಥಾಪಕರನ್ನು ಧರಣಿ ಸ್ಥಳಕ್ಕೆ ಕರೆಯಿಸಿ ಕೂಡಲೇ ಮುಟ್ಟುಗೋಲು ಹಾಕಿಕೊಂಡಿರುವ ಹಣವನ್ನು ನಾಗಮ್ಮ ಅವರ ಖಾತೆಗೆ ಜಮಾ ಮಾಡುವಂತೆ ತಾಕೀತು ಮಾಡಿದರು.

ಬ್ಯಾಂಕ್ ವ್ಯವಸ್ಥಾಪಕ ಸ್ಥಳಕ್ಕೆ ಬಂದು ತಹಶೀಲ್ದಾರ್ ಕಚೇರಿ ಮುಂದೆಯೇ ನಾಗಮ್ಮ ಅವರಿಗೆ ಹಣ ನೀಡಬೇಕು ಎಂದು ಪ್ರತಿಭಟನಕಾರರು ಪಟ್ಟು ಹಿಡಿದರು. ಇದಕ್ಕೆ ಒಪ್ಪಿದ ಬ್ಯಾಂಕ್ ಮ್ಯಾನೇಜರ್ ಆಗಮಿಸಿ 35 ಸಾವಿರ ಆಗಮಿಸಿ ನಾಗಮ್ಮ ಅವರಿಗೆ ನೀಡಿದರು.

ಉದಯವಾಹಿನಿ ಚಿತ್ರ

ಗಾಂಧಿವೃತ್ತದಲ್ಲಿ ಪ್ರತಿಭಟನೆ

ಬರದಿಂದ ತತ್ತರಿಸಿರುವ ರಾಜ್ಯದ ರೈತರಿಗೆ ಸರ್ಕಾರ ಯುದ್ಧೋಪಾದಿಯಲ್ಲಿ ಬರ ಪರಿಹಾರ ಕಾಮಗಾರಿಗಳನ್ನು ಆರಂಭಿಸಬೇಕು ಎಂದು ಅಖಿಲ ಭಾರತ ರೈತ ಕೃಷಿ ಕಾರ್ಮಿಕರ ಸಂಘಟನೆ (ಎಐಕೆಕೆಎಂಎಸ್‌ಎಸ್) ಸೋಮವಾರ ಗಾಂಧಿವೃತ್ತದಲ್ಲಿ ಪ್ರತಿಭಟನೆ ನಡೆಸಿತು.

ಆಲೂರು ಪರಶುರಾಂ, ಗಂಡುಗಲಿ, ಯರವನಾಗತಿಹಳ್ಳಿ ಪೂಜಾರ ಪರಮೇಶ್ವರಪ್ಪ, ಗುಮ್ಮನೂರು ರುದ್ರೇಶ್, ಭೀಮೇಶ್, ಶಿವಪುರ ಕೃಷ್ಣಮೂರ್ತಿ, ಚಿಕ್ಕಮಲ್ಲನಹೊಳೆ ಚಿರಂಜೀವಿ ಭಾಗವಹಿಸಿದ್ದರು .

ರಸ್ತೆ ಕುಸಿತ, ತಗ್ಗು ಪ್ರದೇಶಗಳಿಗೆ ನುಗ್ಗಿದ ನೀರು

• ಉದಯವಾಹಿನಿ ಚಿತ್ರದುರ್ಗ

ಜಿಲ್ಲೆಯಲ್ಲಿ ಸೋಮವಾರ ರಾತ್ರಿ ಉತ್ತಮ ಮಳೆಯಾಗಿದೆ. ಸತತ ಮಳೆಯಿಂದ ಜಲಮೂಲಗಳಿಗೆ ನೀರು ಹರಿದುಬಂದಿದೆ. ಧರ್ಮಪುರ- ಅರಳೀಕೆರೆ ರಸ್ತೆ ಕುಸಿದಿದ್ದು, ಕಾರೊಂದು ಬೃಹತ್ ಗುಂಡಿಗೆ ಇಳಿದಿದ್ದು, ಪ್ರಯಾಣಿಕರು ಅಪಾಯದಿಂದ ಪಾರಾಗಿದ್ದಾರೆ.

ಚಿತ್ರದುರ್ಗ ಜಿಲ್ಲೆಯ ವಿವಿಧೆಡೆ ಸೋಮವಾರ ರಾತ್ರಿ 10 ಗಂಟೆಯ ಬಳಿಕ ಆರಂಭವಾದ ಮಳೆ ಬಿರುಸು ಪಡೆಯಿತು. ಚರಂಡಿ, ಕಾಲುವೆಗಳು ತುಂಬಿ ಹರಿದವು. ನಗರದ ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗಿತ್ತು. ತಿಮ್ಮಣ್ಣನಾಯಕ ಕೆರೆಯ ಸಮೀಪದಲ್ಲಿ ನಿರ್ಮಿಸುತ್ತಿದ್ದ ಟ್ರೀಪಾರ್ಕ್ ಅಸ್ತವ್ಯಸ್ತಗೊಂಡಿದೆ. ಹಿರಿಯೂರು ತಾಲ್ಲೂಕಿನ ಧರ್ಮಪುರ ಹೋಬಳಿಯಲ್ಲಿ ರಾತ್ರಿ ಉತ್ತಮ ಮಳೆಯಾಗಿದೆ. ಧರ್ಮಪುರ- ಅರಳೀಕೆರೆ ಸಂಪರ್ಕ ರಸ್ತೆ ಕುಸಿದಿದೆ. ಧರ್ಮಸ್ಥಳದಿಂದ ತಡ ರಾತ್ರಿ ಅರಳೀಕೆರೆ ಪಾಳ್ಯಕ್ಕೆ ಇದೇ ಮಾರ್ಗವಾಗಿ ಮರಳಿದ ಕಾರು ಕುಸಿದ ಗುಂಡಿಯಲ್ಲಿ ಇಳಿದಿದ್ದು ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ವೇದಾವತಿ ನದಿ ಪಾತ್ರದಲ್ಲಿ ಉತ್ತಮ ಮಳೆ ಸುರಿದಿದ್ದು, ವಿ.ವಿ. ಸಾಗರ ಜಲಾಶಯಕ್ಕೆ 5,680 ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿಯಲ್ಲಿ 5 ಸೆಂ.ಮೀ, ಹೊಳಲ್ಕೆರೆ ತಾಲ್ಲೂಕಿನ ಚಿಕ್ಕಜಾಜೂರಿನಲ್ಲಿ 3 ಸೆಂ.ಮೀ ಮಳೆಯಾಗಿದೆ.

ಉದಯವಾಹಿನಿ ಚಿತ್ರ

ಶುದ್ಧ ಕುಡಿಯುವ ನೀರು ಸಮರ್ಪಕ ಪೂರೈಕೆಗೆ ಆಗ್ರಹ

• ಉದಯವಾಹಿನಿ ಚಳ್ಳಕೆರೆ

ಶುದ್ಧ ಕುಡಿಯುವ ನೀರು ಸಮರ್ಪಕ ಪೂರೈಕೆಗೆ ಆಗ್ರಹಿಸಿ ತಾಲ್ಲೂಕಿನ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವರವಿನೋರಹಟ್ಟಿ ಗ್ರಾಮದ ಮಹಿಳೆಯರು ಖಾಲಿಕೊಡ ಪ್ರದರ್ಶಿಸಿ ಸೋಮವಾರ ಪ್ರತಿಭಟಿಸಿದರು.

ಗಡ್ಡದಾರಹಟ್ಟಿ, ವರವಿನೋರಹಟ್ಟಿ ಗ್ರಾಮಗಳಿಗೆ ಪ್ರತ್ಯೇಕವಾಗಿ ಕೊಳವೆಬಾವಿ ಕೊರೆಯಿಸಲು ಉದಾಸೀನ ಮಾಡುತ್ತಿರುವ ಕಾರಣ ಇಲ್ಲಿನ ಜನರಿಗೆ ಕುಡಿಯುವ ನೀರಿನ ಅಭಾವ ಉಂಟಾಗಿದೆ ಎಂದು ಪ್ರತಿಭಟನೆ ನೇತೃತ್ವ ವಹಿಸಿದ್ದ ತಾಲ್ಲೂಕು ಪಂಚಾಯಿತಿ ನಾಮ ನಿರ್ದೇಶನ ಮಾಜಿ ಸದಸ್ಯ ದೊರೆ ನಾಗರಾಜ ಆರೋಪಿಸಿದರು. ಗ್ರಾಮದಿಂದ 3-4 ಕಿ.ಮೀ. ದೂರದ ಸೋಮನಕೆರೆ ಬಳಿ ಕೊರೆಯಿಸಿರುವ ಒಂದೇ ಕೊಳವೆಬಾವಿಯಿಂದ ಎರಡೂ ಗ್ರಾಮಗಳಿಗೆ ನೀರು ಸರಬರಾಜು ಮಾಡಲಾಗುತ್ತಿದೆ. ವರವಿನೋರಹಟ್ಟಿ ಗ್ರಾಮದಲ್ಲಿ 90ಕ್ಕೂ ಹೆಚ್ಚು ಕುಟುಂಬಗಳಿವೆ. ಜನ-ಜಾನುವಾರು ಕುಡಿಯುವ ನೀರು ಪೂರೈಕೆಗೆ ನಿರ್ಮಿಸಿರುವ ನಾಲ್ಕು ಮಿನಿಟ್ಯಾಂಕ್‌ಗಳಲ್ಲಿ ಒಂದು ಟ್ಯಾಂಕಿಗೆ ಮಾತ್ರ ನೀರು ಸರಬರಾಜು ಆಗುತ್ತಿದ್ದು, ಇನ್ನುಳಿದ ಮೂರು ಟ್ಯಾಂಕ್ ಖಾಲಿ ಇರುತ್ತವೆ. ಹಾಗಾಗಿ ಒಂದೆರೆಡು ತಿಂಗಳಿಂದ ನೀರಿನ ಸಮಸ್ಯೆ ಎದುರಿಸುತ್ತಿದ್ದೇವೆ ಎಂದು ಗ್ರಾಮದ ಮಹಿಳೆ ಚಂದ್ರಮ್ಮ ಅಳಲು ತೋಡಿಕೊಂಡರು.

ಗ್ರಾಮದ ಕುಡಿಯುವ ನೀರಿನ ಪಂಪ್‌ಸೆಟ್‌ಗಳಿಗೆ ನಿರಂತರ ಜ್ಯೋತಿ ಸೌಲಭ್ಯ ಕಲ್ಪಿಸದ ಕಾರಣ ವಿದ್ಯುತ್ ಸಮಸ್ಯೆಯಿಂದ ಕುಡಿಯುವ ನೀರು ಸಂಗ್ರಹಿಸಿಕೊಳ್ಳಲು ಇಡೀ ರಾತ್ರಿ ನಿದ್ದೆಗಟ್ಟಿ ಕೊಡ ಹಿಡಿದು ನಿಲ್ಲಬೇಕಾಗಿದೆ ಎಂದು ಪಾಲಕ್ಕ ಬೇಸರ ವ್ಯಕ್ತಪಡಿಸಿದರು.

ಉದಯವಾಹಿನಿ ಚಿತ್ರ

ಯುವತಿಯರ ಕೊಲೆ ಪ್ರಕರಣ: ತಪ್ಪಿತಸ್ಥರಿಗೆ ಗಲ್ಲು ಶಿಕ್ಷೆ ವಿಧಿಸಲು ಆಗ್ರಹ

• ಉದಯವಾಹಿನಿ ದಾವಣಗೆರೆ

ರಾಜ್ಯದಲ್ಲಿ ನಡೆದಿರುವ ಯುವತಿಯರ ಮೇಲಿನ ಅತ್ಯಾಚಾರ ಹಾಗೂ ಕೊಲೆಯನ್ನು ಖಂಡಿಸಿ ಜಿಲ್ಲಾ ಮಡಿವಾಳ ಮಾಚಿದೇವ ಸಂಘವು ನಗರದಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿತು.

ನಗರದ ಜಯದೇವ ವೃತ್ತದಿಂದ ದಾವಣಗೆರೆ ಉಪ ವಿಭಾಗಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ ಮನವಿ ಸಲ್ಲಿಸಿದ ಮಡಿವಾಳ ಸಮುದಾಯದ ಪದಾಧಿಕಾರಿಗಳು ರಾಜ್ಯದ ಮುಖ್ಯ ಮಂತ್ರಿಗಳಿಗೆ ರವಾನಿಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ರಾಜ್ಯದಲ್ಲಿ ದಿನದಿಂದ ದಿನಕ್ಕೆ ಕಾನೂನು ಸುವ್ಯವಸ್ಥೆ ಹದಗೆಡುತ್ತಿದ್ದು, ಅತ್ಯಾಚಾರ, ಕೊಲೆ ಪ್ರಕರಣಗಳು ಹೆಚ್ಚಾಗುತ್ತಿವೆ. ಕೊಪ್ಪಳ ಜಿಲ್ಲೆಯ ಬಾಲಕಿ ಮೇಲೆ ವಾಮಾಚಾರ ಮಾಡಿ ಆಕೆಯನ್ನು ಕೊಲೆ ಮಾಡಲಾಗಿದೆ. ಹುಬ್ಬಳ್ಳಿಯ ನೇಹಾ ಹಿರೇಮಠ್

24 ಗಂಟೆ ಪ್ರಚಾರ ನಡೆಸದಂತೆ ಬಿಜೆಪಿ ಅಭ್ಯರ್ಥಿ, ಮಾಜಿ ಜಡ್ಜ್‌ಗೆ ನಿರ್ಬಂಧ

ಮಾಜಿ ಹೈಕೋರ್ಟ್ ನ್ಯಾಯಮೂರ್ತಿ ಹಾಗೂ ಬಿಜೆಪಿ ಅಭ್ಯರ್ಥಿ ಅಭಿಜಿತ್ ಗಂಗೋಪಾಧ್ಯಾಯ ಅವರಿಗೆ ಇಸಿ ಚಾಟಿ

ದೀದಿ ವಿರುದ್ಧ ಅಶ್ಲೀಲ ಹೇಳಿಕೆ

ಹೊಸದಿಲ್ಲಿ: ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ವಿರುದ್ಧ ಅಶ್ಲೀಲ, ಅವಹೇಳನಕಾರಿ ಹೇಳಿಕೆ ನೀಡಿದ್ದ ಮಾಜಿ ಹೈಕೋರ್ಟ್ ನ್ಯಾಯಮೂರ್ತಿ, ಬಿಜೆಪಿ ಅಭ್ಯರ್ಥಿ ಅಭಿಜಿತ್ ಗಂಗೋಪಾಧ್ಯಾಯ ಅವರಿಗೆ 24 ಗಂಟೆಗಳ ಕಾಲ ಪ್ರಚಾರ ನಡೆಸದಂತೆ ಚುನಾವಣಾ ಆಯೋಗ ನಿರ್ಬಂಧ ಹೇರಿದೆ.

ನಡೆಯುತ್ತಿರುವ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳು ಯಾವುದೇ ವ್ಯಕ್ತಿಗಳ ವೈಯಕ್ತಿಕ ಜೀವನಕ್ಕೆ ಹಾನಿ ಉಂಟು ಮಾಡುವಂತ ಹೇಳಿಕೆಗಳನ್ನು ನೀಡಬಾರದು ಎಂದು ಭಾರತೀಯ ಚುನಾವಣಾ ಆಯೋಗ (ಇಸಿ) ಇದೇ ವೇಳೆ ಹೇಳಿದೆ.

ಆದರೆ, ಅಶ್ಲೀಲ ಹೇಳಿಕೆಯನ್ನು ಒಳಗೊಂಡ ಅಭಿಜಿತ್ ಗಂಗೋಪಾಧ್ಯಾಯ ವಿಡಿಯೋವನ್ನೇ ನಕಲಿ ಎಂದು ಬಿಜೆಪಿ ಹೇಳಿದೆ. ಅಂತಹ ಯಾವುದೇ ವಿಡಿಯೋಗಳ ಅಸ್ತಿತ್ವವನ್ನು ನಾವು ಒಪ್ಪುವುದಿಲ್ಲ. ಇದು ನಕಲಿ ವಿಡಿಯೋಗಳನ್ನು ಬಿಡುಗಡೆ ಮಾಡಲು ಮತ್ತು ಬಿಜೆಪಿ ಹೆಸರು ಕೆಡಿಸಲು ಟಿಎಂಸಿ ನಡೆಸಿರುವ ತಂತ್ರ. ಆದರೆ ಇದು ಚುನಾವಣೆಯಲ್ಲಿ ಯಾವುದೇ ಪರಿಣಾಮ ಬೀರುವುದಿಲ್ಲ, ಎಂದು ಬಿಜೆಪಿ ವಕ್ತಾರ ಸಾಮಿಕ್ ಭಟ್ಟಾಚಾರ್ಯ ಪ್ರತಿಪಾದಿಸಿದ್ದಾರೆ.

ಮಾಜಿ ನ್ಯಾಯಾಮೂರ್ತಿಯವರ ಹೇಳಿಕೆಯ ವಿಡಿಯೋಗಳು ಆನ್‌ಲೈನ್‌ನಲ್ಲಿ ಹರಿದಾಡುತ್ತಿವೆ. ಇದನ್ನೇ ಇಟ್ಟುಕೊಂಡು ತೃಣಮೂಲ ಕಾಂಗ್ರೇಸ್ ಬಿಜೆಪಿಯನ್ನು 'ಮಹಿಳಾ ವಿರೋಧಿ' ಎಂದು ಜರೆದಿದೆ.

ವಿವಾದಿತ ವಿಡಿಯೋ ನಕಲಿ

ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ವಿರುದ್ಧ ಅಶ್ಲೀಲ, ಅವಹೇಳನಕಾರಿ ಹೇಳಿಕೆ ನೀಡಿದ್ದ ಮಾಜಿ ಹೈಕೋರ್ಟ್ ನ್ಯಾಯಮೂರ್ತಿ ಹಾಗೂ ಬಿಜೆಪಿ ಅಭ್ಯರ್ಥಿ ಅಭಿಜಿತ್ ಗಂಗೋಪಾಧ್ಯಾಯ ಅವರಿಗೆ ಚುನಾವಣಾ ಆಯೋಗ ಚಾಟಿ ಬೀಸಿದೆ. 24 ಗಂಟೆಗಳ ಕಾಲ ಚುನಾವಣಾ ಪ್ರಚಾರ ನಡೆಸದಂತೆ ಆಯೋಗ ಅವರಿಗೆ ನಿರ್ಬಂಧ ಹೇರಿದೆ. ಇವೆಲ್ಲದರ ನಡುವೆ ಅವರ ವಿವಾದಿತ ವಿಡಿಯೋವನ್ನೇ ನಕಲಿ ಎಂದು ಬಿಜೆಪಿ ವಾದಿಸಿದೆ.

- **ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ವಿರುದ್ಧ ಅಶ್ಲೀಲ, ಅವಹೇಳನಕಾರಿ ಹೇಳಿಕೆ**
- **24 ಗಂಟೆಗಳ ಕಾಲ ಚುನಾವಣಾ ಪ್ರಚಾರ ನಡೆಸದಂತೆ ನಿರ್ಬಂಧ ಹೇರಿದ ಕೇಂದ್ರ ಚುನಾವಣಾ ಆಯೋಗ**
- **ಇವೆಲ್ಲದರ ನಡುವೆ ಅವರ ವಿವಾದಿತ ವಿಡಿಯೋವನ್ನೇ ನಕಲಿ ಎಂದು ವಾದಿಸಿಸುತ್ತಿದೆ ಬಿಜೆಪಿ**

ಈ ಹಿಂದೆ 2021ರಲ್ಲಿಯೂ ಪ್ರಧಾನಿ ನರೇಂದ್ರ ಮೋದಿ 'ದೀದಿ ಓ ದೀದಿ' ಎಂದು ಹೇಳಿ ಮಮತಾ ಬ್ಯಾನರ್ಜಿಗೆ ಟಾಂಗ್ ನೀಡಿದ್ದರು. ಇದನ್ನೂ ಆ ಸಂದರ್ಭದಲ್ಲಿ ಟಿಎಂಸಿ ಕಟುವಾಗಿ ವಿರೋಧಿಸಿತ್ತು. ತಮ್ಲುಕ್‌ನಿಂದ ಬಿಜೆಪಿ ಅಭ್ಯರ್ಥಿಯಾಗಿ ಅಭಿಜಿತ್ ಗಂಗೋಪಾಧ್ಯಾಯ ಸ್ಪರ್ಧಿಸುತ್ತಿದ್ದಾರೆ. ಸಂದೇಶ ಖಾಲಿ ವಿವಾದ, ರಾಜ್ಯದ ಮಹಿಳಾ ಮತದಾರರ ಬೆಂಬಲಕ್ಕಾಗಿ ಎರಡೂ ಪಕ್ಷಗಳು ಸೆಣಸಾಡುತ್ತಿರುವ ಹೊತ್ತಲ್ಲೇ ಅವರ ಈ ವಿಡಿಯೋ ಹೊರಬಿದ್ದಿದ್ದು, ಪಶ್ಚಿಮ ಬಂಗಾಳ ರಾಜಕಾರಣದಲ್ಲಿ ಭಾರೀ ಗದ್ದಲ ಎಬ್ಬಿಸಿದೆ.

ತಮ್ಮ ತೀರ್ಪುಗಳಿಂದ ಸುದ್ದಿಕೇಂದ್ರಕ್ಕೆ ಬಂದಿದ್ದ ಕಲ್ಕತ್ತಾ ಹೈಕೋರ್ಟ್‌ನ ಮಾಜಿ ನ್ಯಾಯಮೂರ್ತಿ ಅಭಿಜಿತ್ ಗಂಗೋಪಾಧ್ಯಾಯ ಅವರು ಪಶ್ಚಿಮ ಬಂಗಾಳದ ವಕೀಲರು, ನ್ಯಾಯಾಧೀಶರು ಮತ್ತು ಬಂಗಾಳದ ಆಡಳಿತಾರೂಢ ತೃಣಮೂಲ ಕಾಂಗ್ರೇಸ್‌ನ ಹಿರಿಯ ನಾಯಕರೊಂದಿಗೆ ಕಿತ್ತಾಟ ನಡೆಸಿದ ಬಳಿಕ ಈ ವರ್ಷದ ಮಾರ್ಚ್‌ನಲ್ಲಿ ಕಲ್ಕತ್ತಾ ಹೈಕೋರ್ಟ್ ನ್ಯಾಯಮೂರ್ತಿ ಹುದ್ದೆಗೆ ರಾಜೀನಾಮೆ ನೀಡಿದ್ದರು. ಬಳಿಕ ಅವರು ಬಿಜೆಪಿ ಸೇರಿದ್ದರು. ಇದೀಗ ಅವರು ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಕಮಲ ಪಾಳಯದಿಂದ ಸ್ಪರ್ಧಿಸುತ್ತಿದ್ದಾರೆ.

ಡಿಜಿಟಲ್ ವಿಭಜನೆ ನಿವಾರಣೆಗೆ ಭಾರತ-ಅಮೆರಿಕ ಒಟ್ಟಾಗಿ ಕೆಲಸ ಮಾಡುತ್ತಿವೆ

ವಾಷಿಂಗ್ಟನ್: ಪಶ್ಚಿಮ, ಜಾಗತಿಕ ದಕ್ಷಿಣದ ನಡುವಿನ ಡಿಜಿಟಲ್ ವಿಭಜನೆಯನ್ನು ನಿವಾರಿಸಲು ಭಾರತ ಮತ್ತು ಅಮೆರಿಕ ಒಟ್ಟಾಗಿ ಕೆಲಸ ಮಾಡುತ್ತಿವೆ ಎಂದು ಶ್ವೇತಭವನದ ಮಾಜಿ ಹಿರಿಯ ಅಧಿಕಾರಿಯೊಬ್ಬರು ಹೇಳಿದ್ದಾರೆ, ಎರಡು ರಾಷ್ಟ್ರಗಳು ಜವಾಬ್ದಾರಿಯ ಚೌಕಟ್ಟನ್ನು ರೂಪಿಸಲು ಸಹಾಯ ಮಾಡುತ್ತಿವೆ ಎಂದು ಹೇಳಿದ್ದಾರೆ. ಸುರಕ್ಷಿತ ತಮ ಸಮಾಜಗಳಿಗೆ ಅನುಕೂಲವಾಗುವಂತೆ ಕೃತಕ ಬುದ್ಧಿಮತ್ತೆಯ ಬಳಕೆ ಮಾಡಿಕೊಳ್ಳುತ್ತಿವೆ ಎಂದಿದ್ದಾರೆ. ಯು ಎಸ್-ಇಂಡಿಯಾ ಸಂವಾದ ಸರಣಿಯ ಭಾಗವಾಗಿ ನಡೆದ ಸ್ಟ್ರಾಟೆಜಿಕ್ ಸಿನರ್ಜಿಗಳು ಭಾರತ-ಯುಎಸ್ ತಂತ್ರಜ್ಞಾನ ಸಹಕಾರ ಎಂಬ ಪ್ಯಾನೆಲ್ ಚರ್ಚೆಯಲ್ಲಿ ಭಾಗವಹಿಸಿದ ಟ್ರಂಪ್ ಆಡಳಿತದ ಮಾಜಿ ಶ್ವೇತಭವನದ ಅಧಿಕಾರಿ ಲಿಸಾ ಕರ್ಟಿಸ್ ಅವರು ಈ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಸೈಬರ್ ರಕ್ಷಣೆಯಲ್ಲಿ ಮತ್ತು ನಿರ್ಣಾಯಕ ಮೂಲಸೌಕರ್ಯವನ್ನು ರಕ್ಷಿಸುವಲ್ಲಿ ಎಐ ಬಳಕೆಯನ್ನು ಮುನ್ನಡೆಸಲು ಎರಡು ರಾಷ್ಟ್ರಗಳು ಸಮತಿಸಿವೆ ಎಂದು ಅವರು ವಿವರಣೆ ನೀಡಿದರು. ಪಶ್ಚಿಮ ಮತ್ತು ಜಾಗತಿಕ ದಕ್ಷಿಣದ ನಡುವಿನ ಡಿಜಿಟಲ್ ವಿಭಜನೆಯನ್ನು ಸೇತುವೆ ಮಾಡಲು ನಾವು ಒಟ್ಟಾಗಿ ಕೆಲಸ ಮಾಡುತ್ತಿದ್ದೇವೆ ಎಂದು ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ದಕ್ಷಿಣ ಏಷ್ಯಾ ಪಾಯಿಂಟ್ ವ್ಯಕ್ತಿಯಾಗಿ ಸೇವೆ ಸಲ್ಲಿಸಿದ ಕರ್ಟಿಸ್ ಹೇಳಿದರು.

ಕಳೆದ ವರ್ಷ ಜಿ20 ಶೃಂಗದಲ್ಲಿ ಭಾರತದ ನಾಯಕತ್ವವು, ವಿಶೇಷವಾಗಿ ಡಿಜಿಟಲ್ ಸಾರ್ವಜನಿಕ ಮೂಲ ಸೌಕರ್ಯದಲ್ಲಿ, ಈ ಪ್ರಯತ್ನದಲ್ಲಿ ಭಾರತವು ಈ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ ಎಂದು ನಾನು ಭಾವಿಸುತ್ತೇನೆ ಎಂದು ಅವರು ಹಡ್ಸನ್ ಇನ್ಸ್ಟಿಟ್ಯೂಟ್ ಥಿಂಕ್-ಟ್ಯಾಂಕ್ ಆಯೋಜಿಸಿದ ಕಾರ್ಯಕ್ರಮದಲ್ಲಿ ಹೇಳಿದರು. ಒಟ್ಟಿಗೆ, ಎಐಯ ಜವಾಬ್ದಾರಿಯುತ ಮತ್ತು ಸುರಕ್ಷಿತ ಬಳಕೆಗಾಗಿ ನಾವು ಚೌಕಟ್ಟನ್ನು ರೂಪಿಸಲು ಸಹಾಯ ಮಾಡುತ್ತಿದ್ದೇವೆ ಎಂದು ಅವರು ಹೇಳಿದರು.

ಏಕೆಂದರೆ ನಮ ಎರಡು ದೇಶಗಳು ನಾವೀನ್ಯತೆಯ ಸಂಸ್ಕೃತಿ ಎರಡಕ್ಕೂ ಒತ್ತು ನೀಡುವ ತಂತ್ರಜ್ಞಾನದ ಮೌಲ್ಯಗಳನ್ನು ಹಂಚಿಕೊಳ್ಳುತ್ತವೆ, ಆದರೆ ಮಾನವ ಜೀವನ, ಮಾನವ ಘನತೆ, ಪ್ರಗತಿಯನ್ನು ನಮ ಎಐ ಸಂಶೋಧನೆ ಮತ್ತು ಅಭಿವದ್ಧಿಯ ಕೇಂದ್ರದಲ್ಲಿ ಇರಿಸುವ ನಿಯಮಗಳು ಎಂದು ಅವರು ಹೇಳಿದರು.

ಮೋದಿ ಸರ್ಕಾರ ನಿರ್ಗಮಿಸಲಿದೆ, ಇಂಡಿಯ ಕೂಟ ಅಧಿಕಾರಕ್ಕೆ ಬರಲಿದೆ: ಕೇಜ್ರಿವಾಲ್

ನವದೆಹಲಿ: ಲೋಕಸಭೆ ಚುನಾವಣೆಯ ಪ್ರತಿ ಹಂತಗಳು ಮುಗಿಯುತ್ತಿದ್ದಂತೆ. ನರೇಂದ್ರಮೋದಿ ಸರ್ಕಾರವು ನಿರ್ಗಮಿಸಲಿದ್ದು, ಇಂಡಿಯಾ ಮೈತ್ರಿಕೂಟ ಅಧಿಕಾರಕ್ಕೆ ಬರುತ್ತದೆ ಎಂಬುದು ಸ್ಪಷ್ಟವಾಗುತ್ತಿದೆ ಎಂದು ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಹೇಳಿದ್ದಾರೆ. ವರ್ಚುವಲ್ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಇಂಡಿಯಾ ಮೈತ್ರಿಕೂಟ ದೇಶಕ್ಕೆ ಸ್ಥಿರ ಸರ್ಕಾರವನ್ನು ನೀಡುತ್ತದೆ ಎಂದು ಹೇಳಿದರು. ಹಾದು ಹೋಗುವ ಪ್ರತಿಯೊಂದು ಮತದಾನದ ಹಂತಗಳಲ್ಲಿ ಮೋದಿ ಸರ್ಕಾರವು ಹೊರಗುಳಿಯುತ್ತಿದೆ ಮತ್ತು ಜೂನ್ 4ರಂದು ಇಂಡಿಯ ಮೈತ್ರಿಕೂಟ ಅಧಿಕಾರಕ್ಕೆ ಬರಲಿದೆ ಎಂಬುದು ಸ್ಪಷ್ಟವಾಗುತ್ತಿದೆ ಎಂದು ಪುನರುಚ್ಚರಿಸಿದರು. ಗೃಹಸಚಿವ ಅಮಿತ್ ಷಾ ಅವರ ವಿರುದ್ಧ ವಾಗ್ದಾಳಿ ನಡೆಸಿದ ಕೇಜ್ರಿವಾಲ್, ನಿಮನ್ನು ಪ್ರಧಾನಿ ನಿಮ್ಮ ವಾರಸುದಾರರನ್ನಾಗಿ ಆಯ್ಕೆ ಮಾಡಿದ್ದಾರೆ. ಆದ್ದರಿಂದ ನೀವು ದುರಹಂಕಾರ ತೋರಿಸುತ್ತಿದ್ದೀರಿ. ನೀವು ಇನ್ನೂ ಪ್ರಧಾನಿಯಾಗಿಲ್ಲ ಎಂದು ಹೇಳಿದರು. ಕೇಜ್ರಿವಾಲ್ ಅವರಿಗೆ ಭಾರತದಲ್ಲಿ ಬೆಂಬಲವಿಲ್ಲ ಮತ್ತು ಪಾಕಿಸ್ತಾನದಲ್ಲಿ ಹೆಚ್ಚಿನ ಬೆಂಬಲಿಗರಿದ್ದಾರೆ ಎಂದು ಹೇಳಿದ್ದಾರೆ. ನೀವು ನನ್ನನ್ನು ನಿಂದಿಸಬಹುದು ಆದರೆ ದೇಶದ ಜನರನ್ನು ಶಪಿಸಬೇಡಿ. ನೀವು ಸಾರ್ವಜನಿಕರನ್ನು ಶಪಿಸಿದರೆ ಯಾರೂ ಸಹಿಸುವುದಿಲ್ಲ ಎಂದು ವಾಗ್ದಾಳಿ ನಡೆಸಿದರು. ದಕ್ಷಿಣ ದೆಹಲಿ ಕ್ಷೇತ್ರದಲ್ಲಿ ತಮ ಪಕ್ಷದ ಅಭ್ಯರ್ಥಿ ರಾಮ್‌ವೀರ್ ಸಿಂಗ್ ಬಿಧುರಿ ಪರ ಮತ ಯಾಚಿಸುವಾಗ ಕೇಜ್ರಿವಾಲ್, ರಾಹುಲ್ (ಗಾಂಧಿ) ಅವರಿಗೆ ಭಾರತದಲ್ಲಿ ಬೆಂಬಲವಿಲ್ಲ, ಅವ ರ ಬೆಂಬಲಿಗರು ಪಾಕಿಸ್ತಾನದಲ್ಲಿದ್ದಾರೆ ಎಂದು ಗೃಹ ಸಚಿವರು ಹೇಳಿದ್ದರು. ರ್ಯಾಲಿಯಲ್ಲಿ ಶಾ ನೀಡಿದ ಹೇಳಿಕೆಗೆ ಪ್ರತಿಕ್ರಿಯೆಯಾಗಿ ಮುಖ್ಯಮಂತ್ರಿಯವರಿಂದ ಮೇಲಿನ ಈ ಪ್ರತಿಕ್ರಿಯೆ ಬಂದಿದೆ.

ಧರ್ಮ ಸ್ವಾತಂತ್ರ್ಯದ ರಕ್ಷಣೆಗೆ ಭಾರತ-ಅಮೆರಿಕ ಬದ್ಧ



ವಾಷಿಂಗ್ಟನ್: ಬಿಡೆನ್ ಆಡಳಿತವು ಧರ್ಮದ ಸ್ವಾತಂತ್ರ್ಯದ ಹಕ್ಕಿಗಾಗಿ ಸಾರ್ವತ್ರಿಕ ಗೌರವವನ್ನು ಉತ್ತೇಜಿಸಲು ಮತ್ತು ರಕ್ಷಿಸಲು ಆಳವಾಗಿ ಬದ್ಧವಾಗಿದೆ ಮತ್ತು ಎಲ್ಲಾ ಧಾರ್ಮಿಕ ಸಮುದಾಯಗಳ ಸದಸ್ಯರಿಗೆ ಸಮಾನ ಗೌರವದ ಮಹತ್ವದ ಕುರಿತು ಭಾರತ ಸೇರಿದಂತೆ ಹಲವು ದೇಶಗಳನ್ನು ತೊಡಗಿಸಿಕೊಂಡಿದೆ ಎಂದು ಅಮೆರಿಕ ಹೇಳಿದೆ.

ಎಲ್ಲಾ ಧಾರ್ಮಿಕ ಸಮುದಾಯಗಳ ಸದಸ್ಯರಿಗೆ ಸಮಾನತೆಯ ಪ್ರಾಮುಖ್ಯತೆಯ ಕುರಿತು ನಾವು ಭಾರತ ಸೇರಿದಂತೆ ಹಲವು ದೇಶಗಳನ್ನು ತೊಡಗಿಸಿಕೊಂಡಿದ್ದೇವೆ ಎಂದು ವಿದೇಶಾಂಗ ಇಲಾಖೆಯ ವಕ್ತಾರ ವ್ಯಾಥ್ಯೂ ಮಿಲ್ಲರ್ ತಮ್ಮ ದೈನಂದಿನ ಸುದ್ದಿಗೋಷ್ಠಿಯಲ್ಲಿ ಸುದ್ದಿಗಾರರಿಗೆ ತಿಳಿಸಿದರು. ಭಾರತದಲ್ಲಿ ವಿಶ್ವದ ಅತಿ ದೊಡ್ಡ ಮುಸ್ಲಿಂ ಸಮುದಾಯವು ತಮ್ಮ ಕುಟುಂಬ ಮತ್ತು ಮಕ್ಕಳನ್ನು ಭಯ ಮತ್ತು ಅನಿಶ್ಚಿತತೆಯಿಂದ ಸಾಕುತ್ತಿದ್ದಾರೆ ಎಂದು ಆರೋಪಿಸಿರುವ ಸೆಟ್ರಂಜರ್ಸ್ ಇನ್ ದೇರ್ ಓನ್ ಲ್ಯಾಂಡ್. ಬೀಯಿಂಗ್ ಮುಸ್ಲಿಮ್ ಇನ್ ದೇರ್ ಓನ್ ಲ್ಯಾಂಡ್; ಬೀಯಿಂಗ್ ಮುಸ್ಲಿಮ್ ಎಂಬ ಶೀರ್ಷಿಕೆಯ ನ್ಯೂಯಾರ್ಕ್ ಟೈಮ್ಸ್ ಕಥೆಯ ಪ್ರಶ್ನೆಗೆ ಮಿಲ್ಲರ್ ಈ ರೀತಿ ಪ್ರತಿಕ್ರಿಯಿಸಿದರು.

ನೀವು ಈ ಸಮಸ್ಯೆ ಬಗ್ಗೆ ಭಾರತೀಯ ಅಧಿಕಾರಿಗಳೊಂದಿಗೆ ಮಾತನಾಡಿದ್ದೀರಾ ಎಂದು ಮಿಲ್ಲರ್ ಅವರನ್ನು ಕೇಳಲಾಯಿತು. ನಾನು ಖಾಸಗಿ ರಾಜತಾಂತ್ರಿಕ ಸಂಭಾಷಣೆಗಳೊಂದಿಗೆ ಮಾತನಾಡುವುದಿಲ್ಲ ಆದರೆ ಪ್ರಪಂಚದಾದ್ಯಂತ ಧರ್ಮ ಅಥವಾ ನಂಬಿಕೆಯ ಸ್ವಾತಂತ್ರ್ಯದ ಹಕ್ಕಿಗಾಗಿ ಸಾರ್ವತ್ರಿಕ ಗೌರವವನ್ನು ಉತ್ತೇಜಿಸಲು ಮತ್ತು ರಕ್ಷಿಸಲು ನಾವು ಆಳವಾಗಿ ಬದ್ಧರಾಗಿದ್ದೇವೆ ಎಂದು ಮಿಲ್ಲರ್ ಹೇಳಿದರು.

ವಾರಾಂತ್ಯದಲ್ಲಿ ಪ್ರಕಟವಾದ ಲೇಖನವು ಪ್ರಧಾನಿ ನರೇಂದ್ರ ಮೋದಿಯವರು ಅದಿಕಾರ ವಹಿಸಿಕೊಂಡ ನಂತರ ಜಾತ್ಯತೀತ ಚೌಕಟ್ಟು, ದೃಢ ವಾದ ಪ್ರಜಾಪ್ರಭುತ್ವವನ್ನು ದೂರವಿಟ್ಟಿದ್ದಾರೆ ಎಂದು ಆರೋಪಿಸಲಾಗಿದೆ. ಈ ಹಿಂದೆ ಭಾರತವು ದೇಶದ ತಪ್ಪು ಮಾಹಿತಿ ಮತ್ತು ದೋಷಪೂರಿತ ತಿಳುವಳಿಕೆಯ ಆಧಾರದ ಮೇಲೆ ಇಂತಹ ಆರೋಪಗಳನ್ನು ಕಸದ ಬುಟ್ಟಿಗೆ ಹಾಕಿದೆ. ಪ್ರಧಾನಿ ಮೋದಿ ಅವರು ಅಲ್ಪಸಂಖ್ಯಾತರ ವಿರುದ್ಧ ಯಾ ವತ್ತೂ ಒಂದು ಮಾತನ್ನೂ ಆಡಿಲ್ಲ ಮತ್ತು ಬಿಜೆಪಿ ಅವರ ವಿರುದ್ಧ ಇಂದು ಮಾತ್ರವಲ್ಲ, ಎಂದಿಗೂ ಅವರನು ದ್ವೇಷಿಸಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ.

ಗ್ರಾಜುಯೇಟ್ ರೂಟ್ ವೀಸಾ ಮುಂದುವರೆಸಲು ಆಗ್ರಹ

ಲಂಡನ್: ಬ್ರಿಟನ್‌ನಲ್ಲಿ ಗ್ರಾಜುಯೇಟ್ ರೂಟ್ ವೀಸಾ ನೀತಿಯನ್ನು ರಕ್ಷಿಸುವಂತೆ ಪ್ರಧಾನ ಮಂತ್ರಿ ರಿಷಿ ಸುನಕ್ ಅವರನ್ನು ಭಾರತೀಯ ವಿದ್ಯಾರ್ಥಿಗಳು, ಹಳೆಯ ವಿದ್ಯಾರ್ಥಿಗಳನ್ನು ಪ್ರತಿನಿಧಿಸುವ ನ್ಯಾಷನಲ್ ಇಂಡಿಯನ್ ಸ್ಟೂಡೆಂಟ್ಸ್ ಮತ್ತು ಅಲುಮ್ನಿ ಯೂನಿಯನ್ ಒತ್ತಾಯಿಸಿದೆ. ಈ ವಿನಂತಿಯು ವಲಸೆ ಸಲಹಾ ಸಮಿತಿಯ (ಎಂಎಸಿ) ಇತ್ತೀಚಿನ ಸಂಶೋಧನೆಗಳನ್ನು ಅನುಸರಿಸುತ್ತದೆ, ಇದು ಪದವೀಧರ ಮಾರ್ಗದ ಯಾವುದೇ ದುರುಪಯೋಗವನ್ನು ಬಹಿರಂಗಪಡಿಸಿಲ್ಲ, ಅದರ ಪ್ರಸ್ತುತ ರೂಪದಲ್ಲಿ ಅದನ್ನು ಉಳಿಸಿಕೊಳ್ಳಲು ಶಿರಸು ಮಾಡಿದೆ.

ಗ್ರಾಜುಯೇಟ್ ರೂಟ್ ಅಂತರರಾಷ್ಟ್ರೀಯ ಪದವೀಧರರಿಗೆ ಕೆಲಸದ ಅನುಭವವನ್ನು ಪಡೆಯಲು ತಮ್ಮ ಪದವಿಗಳನ್ನು ಪೂರ್ಣಗೊಳಿಸಿದ ನಂತರ ಎರಡು ವರ್ಷಗಳ ಕಾಲ ಯುಕೆಯಲ್ಲಿ ಉಳಿಯಲು ಅನುಮತಿ ನೀಡುತ್ತದೆ. ಪ್ರಧಾನ ಮಂತ್ರಿ ಸುನಕ್‌ಗೆ ಬರೆದ ಪತ್ರದಲ್ಲಿ, ವಿದ್ಯಾರ್ಥಿ ಸಂಘದ ಅಧ್ಯಕ್ಷ ಸನಮ್ ಅರೋರಾ ಅವರು ಯಾವುದೇ ಮಾರ್ಪಾಡುಗಳಿಲ್ಲದೆ ಗ್ರಾಜುಯೇಟ್ ರೂಟ್ ಬದಲಾಗದೆ ಉಳಿಯುವಂತೆ ಮನವಿ ಮಾಡಿದರು. ಪತ್ರವು ಅಂತರರಾಷ್ಟ್ರೀಯ ವಿದ್ಯಾರ್ಥಿಗಳ ಆರ್ಥಿಕ ಪ್ರಯೋಜನಗಳು, ಗ್ರಾಜುಯೇಟ್ ರೂಟ್‌ಗೆ ವ್ಯಾಪಕವಾದ ಸಾರ್ವಜನಿಕ ಬೆಂಬಲ, ಕೌಶಲ್ಯ ಕೊರತೆಯನ್ನು ಪರಿಹರಿಸುವಲ್ಲಿ ಅಂತರರಾಷ್ಟ್ರೀಯ ಪದವೀಧರರ ಪಾತ್ರ, ದೇಶೀಯ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಅನುಭವಗಳ ವರ್ಧನೆ, ಬ್ರಿಟನ್‌ನ ಜಾಗತಿಕ ಪ್ರಭಾವ ಮತ್ತು ಮೃದು ಶಕ್ತಿಯ ಬಲವರ್ಧನೆ, ಪ್ರಚಾರ ಸಂಶೋಧನೆ ಮತ್ತು ನಾವೀನ್ಯತೆ, ಮತ್ತು ಯುಕೆಗೆ ವಿಶ್ವವಿದ್ಯಾನಿಲಯಗಳ ಕಾರ್ಯತಂತ್ರದ ಪ್ರಾಮುಖ್ಯತೆಗೆ ಒತ್ತು ನೀಡಿದೆ. ಅಂತರಾಷ್ಟ್ರೀಯ ಪದವೀಧರರನ್ನು ಡೆಲಿವೆರೂ ವೀಸಾಗಳಿಗೆ ಕಡಿಮೆ ಮಾಡುವ ತಪ್ಪು ಕಲ್ಪನೆಯನ್ನು ಅವರು ತಿಳಿಸುತ್ತಾರೆ, ಈ ವಿದ್ಯಾರ್ಥಿಗಳು ತಮ್ಮ ಯುಕೆ ಶಿಕ್ಷಣದಲ್ಲಿ ಹೆಚ್ಚು ಹೂಡಿಕೆ ಮಾಡಿದ್ದಾರೆ ಮತ್ತು ಯುಕೆಗೆ ನಿವ್ವಳ ಧನಾತ್ಮಕ ಕೊಡುಗೆದಾರರಾಗಿದ್ದಾರೆ.

ಈ ಮಾರ್ಗವು ಅಂತರರಾಷ್ಟ್ರೀಯ ವಿದ್ಯಾರ್ಥಿಗಳು ತಮ್ಮ ಅಧ್ಯಯನವನ್ನು ಮುಗಿಸಿದ ನಂತರ ಯುಕೆಯಲ್ಲಿ ಉಳಿಯಲು ಮತ್ತು ಕೆಲಸ ಮಾಡಲು ಅನುಮತಿಸುತ್ತದೆ. 2023 ರಲ್ಲಿ, ಇದು 50,000 ಕ್ಕೂ ಹೆಚ್ಚು ಭಾರತೀಯ ವಿದ್ಯಾರ್ಥಿಗಳಿಗೆ ಅಧ್ಯಯನದ ನಂತರದ ಕೆಲಸದ ಅವಕಾಶಗಳನ್ನು ಒದಗಿಸಿದೆ, ಇದು ಎಲ್ಲಾ ವಿದ್ಯಾರ್ಥಿ ವೀಸಾ ವಿಸ್ತರಣೆಗಳಲ್ಲಿ ಶೇ.44ರಷ್ಟಿದೆ ಮತ್ತು ಎಲ್ಲಾ ರಾಷ್ಟ್ರೀಯತೆಗಳಲ್ಲಿ ಹೆಚ್ಚಿನ ಸಂಖ್ಯೆಯನ್ನು ಹೊಂದಿದೆ.

ಯುನೈಟೆಡ್ ಕಿಂಗ್‌ಡಮ್‌ನ ವಲಸೆ ಸಲಹಾ ಸಮಿತಿಯು ಗ್ರಾಜುಯೇಟ್ ರೂಟ್ ವೀಸಾ ನೀತಿಯನ್ನು ಇರಿಸಿಕೊಳ್ಳಲು ಶಿರಸು ಮಾಡಿದೆ, ನೀತಿಯ ದುರುಪಯೋಗದ ಯಾವುದೇ ಪುರಾವೆಗಳಿಲ್ಲ ಎಂದು ಗಮನಿಸಿದೆ.

ಹಿಂದೂ-ಮುಸ್ಲಿಂ ವಿಷ ಬೀಜ ಬಿತ್ತುವ ಮೋದಿ ಅಧಿಕಾರ ಬಿಟ್ಟು ತೊಲಗಲಿ

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರು, ಪ್ರತಿದಿನ ಹಿಂದೂ-ಮುಸ್ಲಿಂ ನಡುವೆ ವಿಷ ಬೀಜ ಬಿತ್ತಿ ಸಮಾಜದಲ್ಲಿ ದ್ವೇಷವನ್ನು ಸೃಷ್ಟಿಸುತ್ತಿದ್ದಾರೆ. ವಿಧಾನಬದ್ಧವಾಗಿ ನಡೆಸಲು ಸಾಧ್ಯವಾಗದಿದ್ದರೆ ಅಧಿಕಾರ



ಫೈನಲ್‌ಗೆ ಕೆಕೆಆರ್ ಲಗ್ಗೆ

ಹೈದರಾಬಾದ್ ವಿರುದ್ಧ ಕೋಲ್ಕತ್ತಾಗೆ ಭರ್ಜರಿ ಗೆಲುವು, 8 ವಿಕೆಟ್‌ಗಳ ಗೆಲುವಿನ ದಾಖಲೆ

ಐಪಿಎಲ್ 2024ರ ಮೊದಲ ಕ್ವಾಲಿಫೈಯರ್ ಪಂದ್ಯವು ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆಯಿತು. ಈ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಮತ್ತು ಕೋಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿ ಆಗಿದ್ದವು, ಟಾಸ್ ಗೆದ್ದ ಹೈದರಾಬಾದ್ ತಂಡದ ನಾಯಕ ಪ್ಯಾಟ್ ಕಮಿನ್ಸ್ ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡರು. ಈ ಮೂಲಕ ಮೊದಲು ಬ್ಯಾಟಿಂಗ್ ಮಾಡಿದ ಹೈದರಾಬಾದ್ ತಂಡವು ಕೇವಲ 19.3 ಓವರ್‌ಗೆ 159 ರನ್ ಗಳಿಗೆ ಆಲೌಟ್ ಆಯಿತು. ಈ ಸುಲಭ ಗುರಿ ಬೆನ್ನಟ್ಟಿದ ಕೋಲ್ಕತ್ತಾ ತಂಡವು 13.2 ಓವರ್‌ಗೆ 2 ವಿಕೆಟ್ ನಷ್ಟಕ್ಕೆ 164 ರನ್ ಗಳಿಸುವ ಮೂಲಕ ಭರ್ಜರಿ 8 ವಿಕೆಟ್ ಗಳ ಗೆಲುವು ದಾಖಲಿಸುವ ಮೂಲಕ ನೇರವಾಗಿ ಫೈನಲ್‌ಗೆ ಎಂಟ್ರಿಕೊಟ್ಟಿದೆ.

ಬೌಲರ್‌ಗಳ ಅದ್ಭುತ ಪ್ರದರ್ಶನದ ನಂತರ ವೆಂಕಟೇಶ್ ಅಯ್ಯರ್ ಮತ್ತು ನಾಯಕ ಶ್ರೇಯಸ್ ಅಯ್ಯರ್ ಅವರ ಅದ್ಭುತ ಅರ್ಧಶತಕದ ಆಧಾರದ ಮೇಲೆ ಕ್ವಾಲಿಫೈಯರ್-1 ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡವನ್ನು ಎಂಟು ವಿಕೆಟ್‌ಗಳಿಂದ ಸೋಲಿಸುವ ಮೂಲಕ ಕೋಲ್ಕತ್ತಾ ನೈಟ್ ರೈಡರ್ಸ್ ಫೈನಲ್ ಪ್ರವೇಶಿಸಿದೆ. ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಹೈದರಾಬಾದ್, ರಾಹುಲ್ ತ್ರಿಪಾಠಿ ಅವರ 55 ರನ್‌ಗಳ ನೆರವಿನಿಂದ 19.3 ಓವರ್‌ಗಳಲ್ಲಿ 159 ರನ್ ಕಲೆಹಾಕಿತು. ಗುರಿ ಬೆನ್ನಟ್ಟಿದ ಕೆಕೆಆರ್ ಪರ ನಾಯಕ ಶ್ರೇಯಸ್ ಅಯ್ಯರ್ 24 ಎಸೆತಗಳಲ್ಲಿ 5 ಬೌಂಡರಿ ಮತ್ತು 4 ಸಿಕ್ಸರ್‌ಗಳ ಸಹಾಯದಿಂದ ಅಜೇಯ 58 ರನ್ ಗಳಿಸಿದರೆ, ವೆಂಕಟೇಶ್ ಅಯ್ಯರ್ 28 ಎಸೆತಗಳಲ್ಲಿ ಐದು ಬೌಂಡರಿ ಹಾಗೂ ನಾಲ್ಕು ಸಿಕ್ಸರ್‌ಗಳ ನೆರವಿನಿಂದ 51 ರನ್ ಗಳ ಅಜೇಯ ಇನ್ನಿಂಗ್ಸ್ ಆಡಿ ತಂಡವನ್ನು 13.4 ಓವರ್‌ಗಳಲ್ಲಿ ಗೆಲುವಿನ ದಡ ಮುಟ್ಟಿಸಿದರು.

11ನೇ ಓವರ್‌ನಲ್ಲಿ ಕ್ಲಾಸೆನ್ ಔಟಾದಾಗ ಎಸ್‌ಆರ್‌ಎಚ್ 5 ವಿಕೆಟ್ ನಷ್ಟಕ್ಕೆ 101 ರನ್ ಗಳಿಸಿತ್ತು. ಇನ್ನೂ ಒಂಬತ್ತು ಓವರ್‌ಗಳು ಬಾಕಿ ಇರುವಾಗ ಮತ್ತು ಮಧ್ಯದಲ್ಲಿ ರಾಹುಲ್ ತ್ರಿಪಾಠಿ ಉತ್ತಮವಾಗಿ ಸೆಟ್ ಆಗಿರುವುದರಿಂದ, ಎಸ್‌ಆರ್‌ಎಚ್ ಉತ್ತಮ ಮೊತ್ತ ದಾಖಲಿಸಲು ಸಜ್ಜಾಗಿತ್ತು. ಆದಾಗ್ಯೂ, 14 ನೇ ಓವರ್‌ನಲ್ಲಿ ತ್ರಿಪಾಠಿ ಮತ್ತು ಅಬ್ದುಲ್ ಸಮದ್ ನಡುವಿನ ತಪ್ಪು ಸಂವಹನವು ವಿಕೆಟ್ ಪತನಕ್ಕೆ ಕಾರಣವಾಯಿತು.

ಬೌಲರ್‌ಗಳ ಅದ್ಭುತ ಪ್ರದರ್ಶನ

ಔಟಾದ ನಂತರ, ಬೇಸರಗೊಂಡ ರಾಹುಲ್ ಮೆಟ್ಟಿಲುಗಳ ಬಳಿ ಮೊಣಕಾಲಿನ ಮೇಲೆ ತಲೆಯಿಟ್ಟು ಕುಳಿತು, ತನ್ನ ವಜಾದ ಬಗ್ಗೆ ಅಳುತ್ತಿರುವುದು ಕಂಡುಬಂದಿದೆ.

ರಾಹುಲ್ ತ್ರಿಪಾಠಿ ಕಣ್ಣೀರು

ರಾಹುಲ್ ತ್ರಿಪಾಠಿ ರನೌಟ್ ಆದ ವೇಳೆ ಎಸ್‌ಆರ್‌ಎಚ್ ತಂಡದೊಳಗೆ ತಲ್ಲಣಗಳೇ ಉಂಟಾಯಿತು. ತಂಡದ ಮಾಲಕಿ ಕಾವ್ಯಾ ಮಾರನ್ ಸಿಟ್ಟಿಗೆದ್ದು ಕೂಗಾಡಿದರೆ, ರನ್‌ಔಟ್ ಆದ ರಾಹುಲ್ ತ್ರಿಪಾಠಿ ಕಣ್ಣೀರು ಹಾಕಿದರು. ತ್ರಿಪಾಠಿ ಔಟ್ ಆಗಿರುವುದು ಎಸ್‌ಆರ್‌ಎಚ್ ತಂಡದ ಕುಸಿತಕ್ಕೆ ಕಾರಣವಾಯಿತು. ಬಲಗೈ ಬ್ಯಾಟರ್ ಹೋರಾಟದ ಅರ್ಧಶತಕವನ್ನು ಗಳಿಸಿದ್ದರು ಮತ್ತು 14 ನೇ ಓವರ್‌ನಲ್ಲಿ ಅವರ ಭರವಸೆಗಳು ಭಗ್ನಗೊಳ್ಳುವ ಮೊದಲು ಎಸ್‌ಆರ್‌ಎಚ್ ತಂಡವನ್ನು ದೊಡ್ಡ ಮೊತ್ತಕ್ಕೆ ಏರಿಸುವ ಗುರಿ ಹೊಂದಿದ್ದರು. ಮಿಚೆಲ್ ಸ್ಟಾರ್ಕ್ ಟ್ರಾವಿಸ್ ಹೆಡ್ ಅವರನ್ನು ಡಕ್ ಔಟ್ ಮಾಡಿದ ನಂತರ ರಾಹುಲ್ ತ್ರಿಪಾಠಿ ಮೊದಲ ಓವರ್‌ನಲ್ಲಿ ಬ್ಯಾಟಿಂಗ್‌ಗೆ ಇಳಿದಿದ್ದರು. ಎರಡನೇ ಓವರ್‌ನಲ್ಲಿ ವೈಭವ್ ಅರೋರಾ ಅಭಿಷೇಕ್ ಶರ್ಮಾ ಅವರನ್ನು ಔಟ್ ಮಾಡುವ ಮೂಲಕ ಎಸ್‌ಆರ್‌ಎಚ್ 2 ವಿಕೆಟ್ ನಷ್ಟಕ್ಕೆ 13 ರನ್ ಗಳಿಸಿ ಸಂಕಷ್ಟಕ್ಕೆ ಸಿಲುಕಿತ್ತು. ಪವರ್ ಪ್ಲೇ ಅಂತ್ಯಗೊಳ್ಳುವ ಮುನ್ನ ಎಸ್ ಆರ್ ಎಚ್ ಇನ್ನೂ ಎರಡು ವಿಕೆಟ್ ಗಳನ್ನು ಕಳೆದುಕೊಂಡಿತ್ತು. ಸ್ಟಾರ್ಕ್ ನಿತೀಶ್ ರೆಡ್ಡಿ ಮತ್ತು ಶಹಬಾಜ್ ಅಹ್ಮದ್ ಅವರನ್ನು ಸತತ ಎಸೆತಗಳಲ್ಲಿ ಔಟ್ ಮಾಡಿ ಹೈದರಾಬಾದ್ ಮೂಲದ ತಂಡವನ್ನು 4 ವಿಕೆಟ್ ನಷ್ಟಕ್ಕೆ 39 ಕ್ಕೆ ಇಳಿಸಿದರು. ನಂತರ ರಾಹುಲ್ ತ್ರಿಪಾಠಿ ಮತ್ತು ಹೆನ್ರಿಚ್ ಕ್ಲಾಸೆನ್ ಐದನೇ ವಿಕೆಟ್‌ಗೆ 62 ರನ್‌ಗಳನ್ನು ಸೇರಿಸುವ ಮೂಲಕ ಉತ್ತಮ ಮೊತ್ತಕ್ಕೆ ಅಡಿಪಾಯ ಹಾಕಿದರು.

ಇತಿಹಾಸ ಸೃಷ್ಟಿಸುವ ಹೊಸ್ತಿಲಲ್ಲಿ ಕಿಂಗ್ ಕೊಹ್ಲಿ!

ಇಡೀ ಲೀಗ್‌ನಲ್ಲಿ ತಂಡದ ಪರ ಬ್ಯಾಟಿಂಗ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿದ್ದ ವಿರಾಟ್ ಕೊಹ್ಲಿ, ಲೀಗ್‌ನಲ್ಲಿ ಅತಿ ಹೆಚ್ಚು ರನ್ ಗಳಿಸಿದ ಬ್ಯಾಟ್ಸ್‌ಮನ್ ಎನಿಸಿಕೊಂಡಿದ್ದು, ಆರೆಂಜ್ ಕ್ಯಾಪ್ ಗಿಟ್ಟಿಸಿಕೊಂಡಿದ್ದಾರೆ. ಇದೀಗ ಎಲಿಮಿನೇಟರ್ ಪಂದ್ಯದಲ್ಲಿ ಕೊಹ್ಲಿ ಇತಿಹಾಸ ಸೃಷ್ಟಿಸುವ ಹೊಸ್ತಿಲಲ್ಲಿ ನಿಂತಿದ್ದಾರೆ.

ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ರಾಜಸ್ಥಾನ್ ರಾಯಲ್ಸ್ ನಡುವೆ ಮೇ 22 ರಂದು ಎಲಿಮಿನೇಟರ್ ಪಂದ್ಯ ನಡೆಯಲಿದೆ. ಈ ಪಂದ್ಯಕ್ಕೆ ಅಹಮದಾಬಾದ್‌ನ ನರೇಂದ್ರ ಮೋದಿ ಮೈದಾನ ಆತಿಥ್ಯವಹಿಸುತ್ತಿದೆ. ಈ ಪಂದ್ಯದಲ್ಲಿ ಗೆದ್ದ ತಂಡ ಕ್ವಾಲಿಫೈಯರ್ 1ರಲ್ಲಿ ಸೋತ ತಂಡದ ವಿರುದ್ಧ ಕ್ವಾಲಿಫೈಯರ್ 2 ರಲ್ಲಿ ಎದುರಿಸಲಿದೆ. ಈ ಪಂದ್ಯದಲ್ಲಿ ಸೋತ ತಂಡದ ಐಪಿಎಲ್ ಪಯಣ ಅಂತ್ಯವಾಗಿರುವುದರಿಂದ ಎರಡೂ ತಂಡಗಳಿಗೆ ಗೆಲುವು ಅವಶ್ಯಕವಾಗಿದೆ. ಅದರಲ್ಲೂ ಸತತ ಸೋಲುಗಳಿಂದ ಆರಂಭದಲ್ಲೇ ಲೀಗ್‌ನಿಂದ ಹೊರಬೀಳುವ ಆತಂಕದಲ್ಲಿದ್ದ ಆರ್‌ಸಿಬಿ, ಶತಪ್ರಯತ್ನ ಮಾಡಿ ಇದೀಗ ಪ್ಲೇಆಫ್‌ಗೆ ಎಂಟ್ರಿಕೊಟ್ಟಿರುವುದರಿಂದ ಈ ಪಂದ್ಯದ ಗೆಲುವಿನ ಫೇವರೇಟ್ ಎನಿಸಿಕೊಂಡಿದೆ. ಇದಲ್ಲದೆ ಇಡೀ ಲೀಗ್‌ನಲ್ಲಿ ತಂಡದ ಪರ ಬ್ಯಾಟಿಂಗ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿದ್ದ ವಿರಾಟ್ ಕೊಹ್ಲಿ, ಲೀಗ್‌ನಲ್ಲಿ ಅತಿ ಹೆಚ್ಚು ರನ್ ಗಳಿಸಿದ ಬ್ಯಾಟ್ಸ್‌ಮನ್ ಎನಿಸಿಕೊಂಡಿದ್ದು, ಆರೆಂಜ್ ಕ್ಯಾಪ್ ಗಿಟ್ಟಿಸಿಕೊಂಡಿದ್ದಾರೆ. ಇದೀಗ ಎಲಿಮಿನೇಟರ್ ಪಂದ್ಯದಲ್ಲಿ ಕೊಹ್ಲಿ ಇತಿಹಾಸ ಸೃಷ್ಟಿಸುವ ಹೊಸ್ತಿಲಲ್ಲಿ ನಿಂತಿದ್ದಾರೆ.

ವಿರಾಟ್ ಕೊಹ್ಲಿ ಐಪಿಎಲ್ ಆರಂಭದಿಂದಲೂ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪರ ಆಡುತ್ತಿದ್ದಾರೆ. ಹಲವು ವರ್ಷಗಳಿಂದ ಕೊಹ್ಲಿ ತಂಡದ ನಾಯಕತ್ವವನ್ನೂ ನಿರ್ವಹಿಸಿದ್ದಾರೆ. ಐಪಿಎಲ್ ಇತಿಹಾಸದಲ್ಲಿ ಕೊಹ್ಲಿ ಇದುವರೆಗೆ 251 ಪಂದ್ಯಗಳ 243 ಇನ್ನಿಂಗ್ಸ್‌ಗಳಲ್ಲಿ 7971 ರನ್ ಗಳಿಸಿದ್ದಾರೆ. ಪ್ರಸ್ತುತ, ಕೊಹ್ಲಿ ಐಪಿಎಲ್‌ನಲ್ಲಿ ಅತಿ ಹೆಚ್ಚು ರನ್ ಗಳಿಸಿದ ಬ್ಯಾಟ್ಸ್‌ಮನ್ ಕೂಡ ಆಗಿದ್ದಾರೆ. ಇದೀಗ ಕೊಹ್ಲಿ ಐಪಿಎಲ್‌ನಲ್ಲಿ 8 ಸಾವಿರ ರನ್ ಪೂರೈಸಲು ಇನ್ನು 29 ರನ್‌ಗಳ ಅಂತರದಲ್ಲಿದ್ದಾರೆ. ಎಲಿಮಿನೇಟರ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ವಿರುದ್ಧ ಕೊಹ್ಲಿ 29 ರನ್ ಬಾರಿಸಿದರೆ, ಐಪಿಎಲ್‌ನಲ್ಲಿ 8 ಸಾವಿರ ರನ್ ಪೂರೈಸಿದ ಮೊದಲ ಬ್ಯಾಟ್ಸ್‌ಮನ್ ಆಗಲಿದ್ದಾರೆ. ಇದುವರೆಗೆ ಐಪಿಎಲ್‌ನಲ್ಲಿ ಈ ಸಾಧನೆ ಮಾಡಲು ಯಾವುದೇ ಬ್ಯಾಟ್ಸ್‌ಮನ್‌ಗೆ ಸಾಧ್ಯವಾಗಿಲ್ಲ. ವಿರಾಟ್ ಕೊಹ್ಲಿ ಐಪಿಎಲ್‌ನಲ್ಲಿ 8 ಶತಕ ಮತ್ತು 50 ಅರ್ಧ ಶತಕಗಳನ್ನು ಗಳಿಸಿದ್ದಾರೆ. ಇದಲ್ಲದೇ ಔಟಾಗದೆ 113 ರನ್ ಗಳಿಸಿರುವುದು ಅವರ ಅತ್ಯುತ್ತಮ ಸ್ಕೋರ್ ಆಗಿದೆ. ಐಪಿಎಲ್ ಇತಿಹಾಸದಲ್ಲಿ ಕೊಹ್ಲಿ 702 ಬೌಂಡರಿ ಹಾಗೂ 271 ಸಿಕ್ಸರ್ ಸಹ ಬಾರಿಸಿದ್ದಾರೆ.

29 ರನ್ ಅಷ್ಟೇ ಬೇಕು

ಆರ್‌ಆರ್ ತಂಡದ ಸ್ಟಾರ್ ಆಟಗಾರ ಅಲಭ್ಯ!

ಅಹದಮಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆಯಲಿರುವ ಐಪಿಎಲ್‌ನ ಎಲಿಮಿನೇಟರ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗಲಿದೆ. ಕ್ವಾಲಿಫೈಯರ್ ಹಂತಕ್ಕೇರಲು ನಿರ್ಣಾಯಕವಾಗಿರುವ ಈ ಪಂದ್ಯದಲ್ಲಿ ಸೋಲುವ ತಂಡ ಐಪಿಎಲ್‌ನಿಂದ ಔಟ್ ಆಗಲಿದೆ.

ಐಪಿಎಲ್ ಸೀಸನ್ 17ರ ಎಲಿಮಿನೇಟರ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗಲಿದೆ.

ಕ್ವಾಲಿಫೈಯರ್‌ಗೆ ಪ್ರವೇಶಿಸಲು ನಿರ್ಣಾಯಕವಾಗಿರುವ ಈ ಪಂದ್ಯದಲ್ಲಿ ಸೋಲುವ ತಂಡ ಐಪಿಎಲ್‌ನಿಂದ ಹೊರಬೀಳಲಿದೆ. ಹೀಗಾಗಿ ಉಭಯ ತಂಡಗಳಿಗೂ ಈ ಮ್ಯಾಚ್ ಮಾಡು ಇಲ್ಲವೇ ಮಡಿ ಪಂದ್ಯ.

ಇಂತಹ ನಿರ್ಣಾಯಕ ಪಂದ್ಯಕ್ಕೆ ರಾಜಸ್ಥಾನ್ ರಾಯಲ್ಸ್ ತಂಡದ ಆರಂಭಿಕ ಆಟಗಾರ ಜೋಸ್ ಬಟ್ಲರ್ ಅಲಭ್ಯರಾಗಿದ್ದಾರೆ. ಪಾಕಿಸ್ತಾನ್ ವಿರುದ್ಧದ ಟಿ20 ಸರಣಿಗೆ ಬಟ್ಲರ್ ಇಂಗ್ಲೆಂಡ್‌ಗೆ ತೆರಳಿದ್ದು, ಹೀಗಾಗಿ ಆರ್‌ಸಿಬಿ ವಿರುದ್ಧದ ಪಂದ್ಯದಲ್ಲಿ ಕಣಕ್ಕಿಳಿಯುವುದಿಲ್ಲ. ಇತ್ತ ಜೋಸ್ ಬಟ್ಲರ್ ಅಲಭ್ಯತೆಯು ರಾಜಸ್ಥಾನ್ ರಾಯಲ್ಸ್ ತಂಡಕ್ಕೆ ಹೊಸ ಚಿಂತೆಯನ್ನುಂಟು ಮಾಡಿದರೆ, ಆರ್‌ಸಿಬಿ ತಂಡವು ನಿಟ್ಟುಸಿರುವ ಬಿಟ್ಟಿದೆ. ಏಕೆಂದರೆ ಲೀಗ್ ಹಂತದಲ್ಲಿ ನಡೆದ ಆರ್‌ಸಿಬಿ ವಿರುದ್ಧದ ಪಂದ್ಯದಲ್ಲಿ ಆರ್‌ಆರ್ ಗೆಲುವು ದಾಖಲಿಸಿತ್ತು. ಈ ಗೆಲುವಿನ ರೂವಾರಿ ಜೋಸ್ ಬಟ್ಲರ್.

ಈ ಪಂದ್ಯದಲ್ಲಿ ಆರ್‌ಸಿಬಿ ನೀಡಿದ 183 ರನ್‌ಗಳನ್ನು ಬೆನ್ನತ್ತಿದ ರಾಜಸ್ಥಾನ್ ಪರ ಜೋಸ್ ಬಟ್ಲರ್ ಅಜೇಯ ಶತಕ ಸಿಡಿಸಿದ್ದರು. ಈ ಶತಕದೊಂದಿಗೆ ಕೊನೆಯ ಓವರ್‌ನಲ್ಲಿ ರಾಜಸ್ಥಾನ್ ರಾಯಲ್ಸ್ ತಂಡಕ್ಕೆ ಜಯ ತಂದುಕೊಟ್ಟಿದ್ದರು.

ಇದೀಗ ನಿರ್ಣಾಯಕ ಪಂದ್ಯದಿಂದ ಬಟ್ಲರ್ ಹೊರಗುಳಿದಿರುವುದು ಆರ್‌ಸಿಬಿ ಪಾಲಿಗೆ ಪ್ಲಸ್ ಪಾಯಿಂಟ್ ಆಗಲಿದೆ. ಅದರಂತೆ ಎಲಿಮಿನೇಟರ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ತಂಡವನ್ನು ಬಗ್ಗು ಬಡಿದು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ 2ನೇ ಕ್ವಾಲಿಫೈಯರ್ ಹಂತಕ್ಕೇರುವ ವಿಶ್ವಾಸದಲ್ಲಿದೆ. ಒಂದು ವೇಳೆ ಆರ್‌ಸಿಬಿ ತಂಡ 2ನೇ ಕ್ವಾಲಿಫೈಯರ್‌ಗೆ ಪ್ರವೇಶಿಸಿದರೆ, ಕೆಕೆಆರ್ ಮತ್ತು ಎಸ್‌ಆರ್‌ಹೆಚ್ ನಡುವಣ ಪಂದ್ಯದಲ್ಲಿ ಸೋಲುವ ತಂಡದ ವಿರುದ್ಧ ಕಣಕ್ಕಿಳಿಯಲಿದೆ.

ಆರ್‌ಸಿಬಿಗೆ ಗುಡ್ ನ್ಯೂಸ್

ಪೌಡರ್ ಹಚ್ಚಲು ಧನ್ಯಾ ರೆಡಿ

ಅಣ್ಣಾವ್ರ ಮೊಮ್ಮಗಳು ಧನ್ಯಾ ರಾಮ್‌ಕುಮಾರ್ ಇದೀಗ 'ಪೌಡರ್' ಹಚ್ಚಲು ರೆಡಿಯಾಗಿದ್ದಾರೆ. ದೂದಪೇಡ ದಿಗಂತ್ ಜೊತೆ ನಕ್ಕು ನಗಿಸಲು ನಟಿ ರೆಡಿಯಾಗಿದ್ದಾರೆ. ಸದ್ಯ ಧನ್ಯಾ ಪಾತ್ರದ ಪೋಸ್ಟರ್ ಕೂಡ ರಿಲೀಸ್ ಆಗಿದ್ದು, ಅಭಿಮಾನಿಗಳ ಗಮನ ಸೆಳೆದಿದೆ. ವಿಭಿನ್ನ ಪಾತ್ರದ ಮೂಲಕ ಪಾತ್ರದ ಮೂಲಕ ಧನ್ಯಾ ಬರುತ್ತಿದ್ದಾರೆ. ಸದ್ಯ ರಿಲೀಸ್ ಆಗಿರುವ ಪೋಸ್ಟರ್ ನಲ್ಲಿ ತುಟಿ ಮೇಲಿರೋದನ್ನು ತುಟೀಲೇ ತಾನೇ ಹುಡುಕಬೇಕು ಎಂದು ಪೋಸ್ಟರ್‌ನಲ್ಲಿ ಬರೆಯಲಾಗಿದೆ. ಕಪ್ಪು ಬಣ್ಣದ ಉಡುಗೆಯಲ್ಲಿ ನಟಿ ಕಾಣಿಸಿಕೊಂಡಿದ್ದಾರೆ. ಅಂದಹಾಗೆ, ಇತ್ತೀಚೆಗೆ ಪೌಡರ್ ಸಿನಿಮಾದ ಟೀಸರ್ ಕೂಡ ರಿಲೀಸ್ ಮಾಡಲಾಗಿತ್ತು. ಇಬ್ಬರು ಯುವಕರು ಒಂದು ನಿಗೂಢವಾದ 'ಪೌಡರ್' ಪ್ರಭಾವದಿಂದಾಗಿ ಧಿಡೀರನೇ ಸಿರಿವಂತರಾಗಲು ಮಾಡುವ ಪ್ರಯತ್ನಗಳು, ಅವರಿಗೆ ಎದುರಾಗುವ ಸಮಸ್ಯೆಗಳು ಇವೆಲ್ಲವನ್ನೂ ಎಳೆಯಾಗಿ ಬಿಚ್ಚಿಡುವ ಕಥೆಯೇ ಪೌಡರ್. ಆ ಯುವಕರು ಎಲ್ಲಾ ಸಮಸ್ಯೆಗಳನ್ನು ಮೀರಿ ನಿಲ್ಲುವರೇ ಅವರ ಎಲ್ಲಾ ಕನಸುಗಳು ನನಸಾಗುವುದೇ ಪೌಡರ್ ಹಿಂದಿನ ಪವರ್ ಅವರಿಗೆ ತಿಳಿಯುವುದೇ ಈ ಎಲ್ಲಾ ಪ್ರಶ್ನೆಗಳಿಗೆ ಉತ್ತರ ಜುಲೈ 12 ಚಿತ್ರಮಂದಿರಗಳಲ್ಲಿ ಸಿಗಲಿದೆ. ಈಗಾಗಲೇ ತನ್ನ ಟೀಸರ್ ಮೂಲಕ 'ಪೌಡರ್' ಎಲ್ಲೆಡೆ ನಗೆ ಚಟಾಕಿ ಹತ್ತಿಸಿದ್ದು, ಚಿತ್ರ ಬಿಡುಗಡೆಯ ನಂತರ ಈ ಹಾಸ್ಯ ನಗು ದುಪ್ಪಟ್ಟುಗೊಳ್ಳಲಿದೆ. ಈ ಚಿತ್ರದಲ್ಲಿ ಧನ್ಯಾ ರಾಮ್ ಕುಮಾರ್ ಜೊತೆ ದಿಗಂತ್, ರವಿಶಂಕರ್ ಗೌಡ, ಶರ್ಮಿಳಾ ಮಾಂಡ್ರೆ, ರಂಗಾಯಣ ರಘು, ನಾಗಭೂಷಣ್, ಅನಿರುದ್ಧ ಆಚಾರ್ಯ ಸೇರಿದಂತೆ ಹಲವರು ನಟಿಸಿದ್ದಾರೆ. 'ಪೌಡರ್' ಚಿತ್ರವನ್ನು ಕೆ.ಆರ್.ಜಿ ಸ್ಟುಡಿಯೋಸ್ ಮತ್ತು ಟಿ.ವಿ.ಎಫ್ ಮೋಷನ್ ಪಿಕ್ಚರ್ಸ್ ಸಹಯೋಗದಲ್ಲಿ ಮೂಡಿ ಬಂದಿರುವ ಮೊದಲ ಚಿತ್ರವಾಗಿದೆ.

ಪೌಡರ್ ಸಿನಿಮಾದ ಟೀಸರ್ ರಿಲೀಸ್

ಅಂದು ಎ ಇಂದು ಯುಐ ಹುಳ ಬಿಟ್ಟ ಉಪೇಂದ್ರ

ರಿಯಲ್ ಸ್ಟಾರ್ ಉಪೇಂದ್ರ ನಟಿಸಿ, ನಿರ್ದೇಶನ ಮಾಡುತ್ತಿರುವ 'ಯುಐ' ಸಿನಿಮಾದ ಅಪ್‌ಡೇಟ್‌ಗಾಗಿ ಅಭಿಮಾನಿಗಳು ಕಾತರದಿಂದ ಕಾಯುತ್ತಿದ್ದಾರೆ. ಯೂರೋಪ್‌ನ ಹಂಗೇರಿಯಿಂದ ಯುಐ ಸಿನಿಮಾದ ಬಗ್ಗೆ ವಿಡಿಯೋ ಹಂಚಿಕೊಳ್ಳುವ ಮೂಲಕ ಉಪೇಂದ್ರ ಅಭಿಮಾನಿಗಳ ತಲೆಗೆ ಹುಳ ಬಿಟ್ಟಿದ್ದಾರೆ. ಕೆಲ ತಿಂಗಳುಗಳ ಹಿಂದೆ 'ಯುಐ' ಸಿನಿಮಾದ ಟೀಸರ್ ಅನ್ನು ರಿಲೀಸ್ ಮಾಡಿದ್ದರು. ಬಳಿಕ ಟ್ರೋಲ್ ಸಾಂಗ್‌ವೊಂದನ್ನು ಬಿಡುಗಡೆ ಮಾಡಿದ್ದರು. ಆ ನಂತರ ಈ ಚಿತ್ರದ ಬಗ್ಗೆ ಯಾವುದೇ ಅಪ್‌ಡೇಟ್ ಸಿಗದೇ ಫ್ಯಾನ್ಸ್ ನಿರಾಸೆಯಗಿದ್ದರು. ಈಗ ಎಲ್ಲಾರ ತಲೆಗೆ ರಿಯಲ್ ಸ್ಟಾರ್ ಹುಳ ಬಿಟ್ಟಿದ್ದಾರೆ. ಸಂಗೀತ ನಿರ್ದೇಶಕ ಅಜನೀಶ್ ಲೋಕನಾಥ್ ಜೊತೆ ಉಪೇಂದ್ರ ಚರ್ಚೆ ಮಾಡುತ್ತಿರುವ ವಿಡಿಯೋ ಶೇರ್ ಅಂದು 'ಎ' ಇಂದು 'ಯುಐ' ಎಂದು ಕ್ಯಾಪ್ಷನ್ ನೀಡಿ ಕಮಿಂಗ್‌ಸೂನ್ ಎಂದು ಹೇಳಿದ್ದಾರೆ.

ಆದರೆ ವಿಚಾರ ಏನು ಎಂಬುದು ರಿವೀಲ್ ಮಾಡಿಲ್ಲ. ಸದ್ಯ ಅಜನೀಶ್ ಲೋಕನಾಥ್ ಲೈವ್ ಮ್ಯೂಸಿಕ್ ರೆಕಾರ್ಡ್ ಮಾಡಲು ಹಂಗೆರಿಯನ್ನು ಆಯ್ಕೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. ಹಂಗೇರಿಯ ಸಂಗೀತಗಾರರು ಭಿನ್ನವಾದ ಸಂಗೀತಗಾರರು ಅವರಿಗೆ ಜನಪದ ಶೈಲಿಯ ಪರಿಚಯವಿದೆ. ಅಲ್ಲಿನ ವಾದ್ಯಗಳು ಸಹ ಭಿನ್ನವಾಗಿದೆ. 'ಯುಐ' ಸಿನಿಮಾಕ್ಕೆ ಚೆನ್ನಾಗಿ ಸೂಟ್ ಆಗುತ್ತವೆಯಾದ್ದರಿಂದ ಹಂಗೇರಿಯಲ್ಲಿಯೇ ಮ್ಯೂಸಿಕ್ ರೆಕಾರ್ಡ್ ಮಾಡುತ್ತಿದ್ದಾರೆ ಎನ್ನಲಾಗಿದೆ. ಈ ವೇಳೆ, ಅಜನೀಶ್‌ಗೆ ಜೊತೆ ಉಪೇಂದ್ರ ಕೂಡ ಜೊತೆಯಾಗಿದ್ದಾರೆ. ಆದರೆ ಉಪೇಂದ್ರ ಶೇರ್ ಮಾಡಿರುವ ವಿಡಿಯೋದ ಅರ್ಥವೇನು ಎಂದು ಅಧಿಕೃತ ಮಾಹಿತಿ ಹೊರಬೀಳುವವರೆಗೂ ಕಾಯಬೇಕಿದೆ.

ಬೆತ್ತಲೆ ಫೋಟೋ ಹರಿಬಿಟ್ಟ ಪೂನಂ ಪಾಂಡೆ

ಬಾಲಿವುಡ್ ಬೆಡಗಿ ಪೂನಂ ಪಾಂಡೆ ಸದಾ ಒಂದಲ್ಲಾ ಒಂದು ವಿವಾದಗಳ ಮೂಲಕ ಸದ್ದು ಮಾಡುತ್ತಲೇ ಇರುತ್ತಾರೆ. ಇದೀಗ ಬೆತ್ತಲೆ ಫೋಟೋ ಹಂಚಿಕೊಂಡು ಪೂನಂ ಪಾಂಡೆ ಸುದ್ದಿಯಲ್ಲಿದ್ದಾರೆ. ನಾನು ನಿಮ್ಮ ಮನಸ್ಸಿನಲ್ಲಿದ್ದೇನೆ ಎಂದು ಪಡ್ಡೆಹುಡುಗರಿಗೆ ನಟಿ ಸಂದೇಶ ಕಳುಹಿಸಿದ್ದಾರೆ. ಟಬ್‌ನಲ್ಲಿ ಕುಳಿತು ಹಿಂಭಾಗದ ಫೋಟೋಗಳನ್ನು ಹಂಚಿಕೊಂಡು ಪಡ್ಡೆಹುಡುಗರ ಟೆಂಪ್ರೆಚರ್ ಹೆಚ್ಚಿಸಿದ್ದಾರೆ.